ಸಂಪುಟ: 05 ಸಂಚಿಕೆ: 336 ಪುಟಗಳು: 08 ಬುಧವಾರ 18 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಇಡೀ ಪ್ರಪಂಚ ನಿರ್ಮಾಣವಾಗಿರುವುದೇ ಮಾನವಶಕ್ತಿಯಿಂದ ಮತ್ತು ಉತ್ಸಾಹದ ತೀವ್ರತೆಯಿಂದ..


## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ. ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.


ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ **9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)

udayavahininews@gmail.com


## ವಿದೇಶಿ ಪ್ರಜೆಗಳೂ ಸೇರಿದಂತೆ ಒಟ್ಟು 15 ಆರೋಪಿಗಳ ಬಂಧನ



# ಖಾಕಿ ಭರ್ಜರಿ ಬೇಟೆ 50 ಕೋಟಿಯ ಡ್ರಗ್ಸ್ ವಶ

**ಬೆಂಗಳೂರು ನಗರದಲ್ಲಿ ಮಾದಕ ವಸ್ತು ಜಾಲದ ವಿರುದ್ಧ ಪೊಲೀಸರು ನಡೆಸಿದ ಸರಣಿ ಕಾರ್ಯಾಚರಣೆಗಳು ಭಾರೀ ಯಶಸ್ಸು ಕಂಡಿದ್ದು , ವಿದೇಶಿ ಪ್ರಜೆಗಳು ಸೇರಿದಂತೆ ಹಲವರನ್ನು ಬಂಧಿಸಿ ಕೋಟ್ಯಂತರ ರೂ.ಮೌಲ್ಯದ ಡ್ರಗ್ಸ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಗೋವಿಂದಪುರ, ಅಮೃತಹಳ್ಳಿ, ಹೆಬ್ಬಗೋಡಿ, ಮಹಾಲಕ್ಷ್ಮಿ ಲೇಔಟ್ ಹಾಗೂ ಸಿಸಿಬಿ ಪೊಲೀಸರು ನಡೆಸಿದ ಪ್ರತ್ಯೇಕ ದಾಳಿಗಳಲ್ಲಿ ಸುಮಾರು 50 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಮಾದಕ ದಂಧೆಕೋರರ ವಿರುದ್ಧ ಸಮರ ಮುಂದುವರೆಸಿರುವ ಬೆಂಗಳೂರು ಪೊಲೀಸರು ನಗರದ ವಿವಿಧೆಡೆ ನಡೆಸಿದ ಕಾರ್ಯಾಚರಣೆಗಳಿಂದ 10.59 ಕೋಟಿ (ಮಾರುಕಟ್ಟೆ ಮೌಲ್ಯ 21 ಕೋಟಿ) ರೂಪಾಯಿ ಮೌಲ್ಯದ ಮಾದಕ ಪದಾರ್ಥಗಳನ್ನು ವಶಪಡಿಸಿಕೊಂಡಿದ್ದಾರೆ. ಮೂವರು ವಿದೇಶಿ ಪ್ರಜೆಗಳೂ ಸೇರಿದಂತೆ ಒಟ್ಟು 15 ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.**

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರದಲ್ಲಿ ಮಾದಕ ವಸ್ತು ಜಾಲದ ವಿರುದ್ಧ ಪೊಲೀಸರು ನಡೆಸಿದ ಸರಣಿ ಕಾರ್ಯಾಚರಣೆಗಳು ಭಾರೀ ಯಶಸ್ಸು ಕಂಡಿದ್ದು, ವಿದೇಶಿ ಪ್ರಜೆಗಳು ಸೇರಿದಂತೆ ಹಲವರನ್ನು ಬಂಧಿಸಿ ಕೋಟ್ಯಂತರ ರೂ.ಮೌಲ್ಯದ ಡ್ರಗ್ಸ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಗೋವಿಂದಪುರ, ಅಮೃತಹಳ್ಳಿ, ಹೆಬ್ಬಗೋಡಿ, ಮಹಾಲಕ್ಷ್ಮಿ ಲೇಔಟ್ ಹಾಗೂ ಸಿಸಿಬಿ ಪೊಲೀಸರು ನಡೆಸಿದ ಪ್ರತ್ಯೇಕ ದಾಳಿಗಳಲ್ಲಿ ಸುಮಾರು 50 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಮಾದಕ ದಂಧೆಕೋರರ ವಿರುದ್ಧ ಸಮರ ಮುಂದುವರೆಸಿರುವ ಬೆಂಗಳೂರು ಪೊಲೀಸರು ನಗರದ ವಿವಿಧೆಡೆ ನಡೆಸಿದ ಕಾರ್ಯಾಚರಣೆಗಳಿಂದ 10.59 ಕೋಟಿ (ಮಾರುಕಟ್ಟೆ ಮೌಲ್ಯ 21 ಕೋಟಿ) ರೂಪಾಯಿ ಮೌಲ್ಯದ ಮಾದಕ ಪದಾರ್ಥಗಳನ್ನು ವಶಪಡಿಸಿಕೊಂಡಿದ್ದಾರೆ. ಮೂವರು ವಿದೇಶಿ ಪ್ರಜೆಗಳೂ ಸೇರಿದಂತೆ ಒಟ್ಟು 15 ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

ಕ್ರೀಡಾ ವೀಸಾ ಪಡೆದು ಭಾರತಕ್ಕೆ ಬಂದು ಮಾದಕ ದಂಧೆಯಲ್ಲಿ ತೊಡಗಿದ್ದ ದಕ್ಷಿಣ ಆಫ್ರಿಕಾ ಮೂಲದ ಕೊರ್ಲಿ ಡೇನಿಯಲ್ ಎಂಬಾತನನ್ನು ಗೋವಿಂದಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಕೇರಳದಲ್ಲಿ ಆಯೋಜಿಸುತ್ತಿದ್ದ ಫುಟ್‌ಬಾಲ್ ಪಂದ್ಯಗಳಲ್ಲಿ ಆಡುತ್ತಿದ್ದ ಆರೋಪಿ, ಮತ್ತೊಂದೆಡೆ ಮಾದಕ ಪದಾರ್ಥಗಳ ದಂಧೆಯಲ್ಲಿ ತೊಡಗಿದ್ದ. ಬಂಧಿತನಿಂದ 4.48 ಲಕ್ಷ ಮೌಲ್ಯದ 56 ಗ್ರಾಂ ಎಂಡಿಎಂಎ ಕ್ರಿಸ್ಟಲ್ಸ್ ವಶಪಡಿಸಿಕೊಳ್ಳಲಾಗಿದೆ.

ವಿದೇಶದಿಂದ ಚಾಕೊಲೇಟ್ ಮತ್ತು ವೇಫರ್ಸ್ ಕವರ್‌ಗಳಲ್ಲಿ ಹೈಡ್ರೋ ಗಾಂಜಾ ಸಾಗಾಟ ಮಾಡುತ್ತಿದ್ದ ಇಬ್ಬರು ಪೆಡ್ಲರ್‌ಗಳನ್ನು ಅಮೃತಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಕೇರಳ ಮೂಲದ ಮಜೀದ್ ಹಾಗೂ ಆಜಾದ್ ಎಂಬವನನ್ನು ಬಂಧಿಸಲಾಗಿದ್ದು, 5 ಕೋಟಿ ಮೌಲ್ಯದ 5 ಕೆ.ಜಿ ಹೈಡ್ರೋ ಗಾಂಜಾ ವಶಪಡಿಸಿಕೊಳ್ಳಲಾಗಿದೆ. ಥೈಲ್ಯಾಂಡ್‌ನಿಂದ ಹೈಡ್ರೋ ಗಾಂಜಾವನ್ನು ಬೆಂಗಳೂರಿಗೆ ತರುತ್ತಿದ್ದ ಆರೋಪಿಗಳ ಜಾಲವನ್ನು ಭೇದಿಸುವಲ್ಲಿ ಅಮೃತಹಳ್ಳಿ ಪೊಲೀಸರು ಯಶಸ್ವಿಯಾಗಿದ್ದಾರೆ.

ವಿವಿಧ ಮಾದಕ ವಸ್ತುಗಳ ಮಾರಾಟ ಮಾಡುತ್ತಿದ್ದ ಸೆನೆಗಲ್ ಪ್ರಜೆಯನ್ನು ಹೆಬ್ಬಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬ್ಯಾರಿ ಯಾಯ ಅಲಿಯಾಸ್ ಒಕೊಲಿ ಬಂಧಿತ ಆರೋಪಿಯಾಗಿದ್ದು, 29 ಎಲ್‌ಎಸ್‌ಡಿ ಮಾತ್ರೆಗಳು, 546 ಗ್ರಾಂ ಎಂಡಿಎಂಎ, 152 ಗ್ರಾಂ ಹೈಡ್ರೋ ಗಾಂಜಾ, 131 ಗ್ರಾಂ ಕೊಕೇನ್ ಹಾಗೂ 27 ಎಲ್‌ಎಸ್‌ಡಿ ಸ್ಟ್ರಿಪ್ಸ್ ಸೇರಿದಂತೆ 1.5 ಕೋಟಿ ಮೌಲ್ಯದ ವಿವಿಧ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಇಬ್ರಾಹಿಂ ಎಂಬ ವಿದೇಶಿಗನನ್ನು ಬಂಧಿಸಲಾಗಿದೆ. ಈತನಿಂದ 11 ಕೋಟಿ ಮೌಲ್ಯದ 5 ಕೆ.ಜಿ ಎಂಡಿಎಂಎ ವಶಪಡಿಸಿಕೊಳ್ಳಲಾಗಿದೆ. ವ್ಯಾಪಾರ ವೀಸಾದಡಿ ಭಾರತಕ್ಕೆ ಬಂದಿದ್ದ ಇಬ್ರಾಹಿಂ, ಈ ಹಿಂದೆ ದೆಹಲಿ, ಬೆಂಗಳೂರು ಹಾಗೂ ಅರುಣಾಚಲ ಪ್ರದೇಶಗಳಲ್ಲಿ ಮಾದಕ ಪದಾರ್ಥಗಳ ಮಾರಾಟ ಪ್ರಕರಣಗಳಲ್ಲಿ ಬಂಧನಕ್ಕೊಳಗಾಗಿದ್ದ. ಇತ್ತೀಚೆಗೆ ಜೈಲಿನಿಂದ ಬಿಡುಗಡೆಯಾಗಿದ್ದರೂ ಮತ್ತೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಡ್ರಗ್ ಪೆಡ್ಡಿಂಗ್ ನಡೆಸುತ್ತಿದ್ದ ವಿದೇಶಿ ಫುಟ್ಬಾಲ್ ಆಟಗಾರನನ್ನು ಗೋವಿಂದಪುರ ಪೊಲೀಸರು ಬಂಧಿಸಿದ್ದಾರೆ. ಸೌತ್ ಆಫ್ರಿಕಾ ಮೂಲದ ಕೊರ್ಲಿ ಡೇನಿಯಲ್ ಬಂಧಿತನಾಗಿದ್ದು, ಸ್ಪೋರ್ಟ್ ವೀಸಾದಡಿ ಬೆಂಗಳೂರಿಗೆ ಬಂದಿದ್ದಾನೆ ಎಂದು ತಿಳಿದುಬಂದಿದೆ. ಆರೋಪಿ ಆಗಾಗ ಕೇರಳದಲ್ಲಿ ನಡೆಯುವ ಫುಟ್ಬಾಲ್ ಪಂದ್ಯಗಳಲ್ಲಿ ಭಾಗವಹಿಸುತ್ತಿದ್ದನು ಎನ್ನಲಾಗಿದೆ. ಆದರೆ ಜೀವನೋಪಾಯಕ್ಕಾಗಿ ಡ್ರಗ್ ಪೆಡ್ಡಿಂಗ್‌ಗೆ ತೊಡಗಿದ್ದನೆಂಬ ಆರೋಪ ಕೇಳಿಬಂದಿದೆ. ಬಂಧಿತನಿಂದ ಸುಮಾರು 4 ಲಕ್ಷ 48 ಸಾವಿರ ರೂಪಾಯಿ ಮೌಲ್ಯದ 56 ಗ್ರಾಂ ಎಂಡಿಎಂಎ ಕ್ರಿಸ್ಟಲ್ ವಶಪಡಿಸಿಕೊಳ್ಳಲಾಗಿದೆ. ಈ ಸಂಬಂಧ ಗೋವಿಂದಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

**1** ಮಹಾಲಕ್ಷ್ಮಿ ಲೇಔಟ್: ಕಾಲೇಜು ವಿದ್ಯಾರ್ಥಿಗಳನ್ನು ಗುರಿಯಾಗಿಸಿದ್ದ ಗಾಂಜಾ ಪೆಡ್ಲರ್

**2** ವಿವಿಧ ಮಾದಕ ವಸ್ತುಗಳ ಮಾರಾಟ ಮಾಡುತ್ತಿದ್ದ ಸೆನೆಗಲ್ ಪ್ರಜೆಯನ್ನು ಹೆಬ್ಬಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

**3** ಕ್ರೀಡಾ ವೀಸಾ ಪಡೆದು ಭಾರತಕ್ಕೆ ಬಂದು ಮಾದಕ ದಂಧೆಯಲ್ಲಿ ತೊಡಗಿದ್ದ ದಕ್ಷಿಣ ಆಫ್ರಿಕಾ ಮೂಲದ ಕೊರ್ಲಿ ಡೇನಿಯಲ್

### ಡ್ರಗ್ ಪೆಡ್ಡಿಂಗ್ ಮಾಡುತ್ತಿದ್ದ ವಿದೇಶಿ ಫುಟ್ಬಾಲ್ ಆಟಗಾರ ಅರೆಸ್ಟ್

### ಚಾಕೊಲೇಟ್ ಪ್ಯಾಕೆಟ್‌ಗಳಲ್ಲಿ ಹೈಡ್ರೋ ಗಾಂಜಾ ಸಾಗಾಟ

ಅಮೃತಹಳ್ಳಿ ಪೊಲೀಸರು ನಡೆಸಿದ ಭರ್ಜರಿ ಕಾರ್ಯಾಚರಣೆಯಲ್ಲಿ ಏರ್‌ಪೋರ್ಟ್‌ನಲ್ಲಿ ತಪ್ಪಿಸಿಕೊಂಡಿದ್ದ ಡ್ರಗ್ ಪೆಡ್ಲರ್‌ಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆರೋಪಿಗಳು ಲೇಸ್ ಹಾಗೂ ಕಿಟ್‌ಕ್ಯಾಟ್ ಚಾಕೊಲೇಟ್ ಪ್ಯಾಕೆಟ್‌ಗಳಲ್ಲಿ ಹೈಡ್ರೋ ಗಾಂಜಾ ಮರೆಮಾಚಿ ಸಾಗಾಟ ಮಾಡುತ್ತಿದ್ದರು. ಥಾಯ್ಲೆಂಡ್ ನಿಂದ ಹೈಡ್ರೋ ಗಾಂಜಾ ತಂದು ಬೆಂಗಳೂರಿನಲ್ಲಿ ಮಾರಾಟ ಮಾಡುತ್ತಿದ್ದ ಕೇರಳ ಮೂಲದ ಮಾಜಿದ್ ಮತ್ತು ಆಝಾದ್ ಎಂಬುವರನ್ನು ಬಂಧಿಸಲಾಗಿದೆ. ಆರೋಪಿಗಳಿಂದ 5 ಕೋಟಿ ಮೌಲ್ಯದ 5 ಕೆಜಿ ಹೈಡ್ರೋ ಗಾಂಜಾ ವಶಕ್ಕೆ ಪಡೆಯಲಾಗಿದೆ. ವಿಮಾನ ಪ್ರಯಾಣದ ವೇಳೆ ಯಾರಿಗೂ ಅನುಮಾನ ಬಾರದಂತೆ ಕುರುಕು ತಿಂಡಿ ಪ್ಯಾಕೆಟ್‌ಗಳಲ್ಲಿ ಗಾಂಜಾ ಪ್ಯಾಕ್ ಮಾಡಲಾಗುತ್ತಿತ್ತು. ಇದೇ ತಂತ್ರ ಬಳಸಿ ಈ ಆರೋಪಿಗಳು ಹಲವು ಬಾರಿ ಥಾಯ್ಲೆಂಡ್‌ನಿಂದ ಡ್ರಗ್ಸ್ ತರಿಸಿಕೊಂಡಿರುವುದು ತನಿಖೆಯಿಂದ ಬಹಿರಂಗವಾಗಿದೆ.

### ವಿದೇಶಿ ಡ್ರಗ್ ಪೆಡ್ಲರ್ ಬಂಧನ

ಹೆಬ್ಬಗೋಡಿ ಪೊಲೀಸರು ನಡೆಸಿದ ದಾಳಿಯಲ್ಲಿ ಸೆನೆಗಲ್ ಮೂಲದ ಬ್ಯಾರಿ ಯಾಯ ಅಲಿಯಾಸ್ ಒಕೊಲಿ ಎಂಬ ವಿದೇಶಿ ಡ್ರಗ್ ಪೆಡ್ಲರ್ ಅನ್ನು ಬಂಧಿಸಿದ್ದಾರೆ. ಬಂಧಿತನಿಂದ ಒಟ್ಟಾರೆ 1.5 ಕೋಟಿ ಮೌಲ್ಯದ ವಿವಿಧ ಮಾದಕ ವಸ್ತುಗಳು ವಶಕ್ಕೆ ಪಡೆಯಲಾಗಿದೆ. ವಶಪಡಿಸಿಕೊಂಡ ವಸ್ತುಗಳಲ್ಲಿ 29 LSD ಮಾತ್ರೆಗಳು, 27 LSD ಸ್ಟ್ರಿಪ್ಸ್, 546 ಗ್ರಾಂ MDMA, 152 ಗ್ರಾಂ ಹೈಡ್ರೋ ಗಾಂಜಾ, 131 ಗ್ರಾಂ ಕೊಕೇನ್ ಸೇರಿವೆ. ಆರೋಪಿ ಇದು ಎರಡನೇ ಬಾರಿ ಬೆಂಗಳೂರಿನಲ್ಲಿ ಬಂಧನಕ್ಕೊಳಗಾಗಿದ್ದು, ಈ ಹಿಂದೆ ಗಡಿಪಾರು ಮಾಡಲಾಗಿತ್ತು. ಆದರೆ ಮತ್ತೊಂದು ಹೆಸರಿನಲ್ಲಿ ದಾಖಲೆ ಮಾಡಿಕೊಂಡು ಮತ್ತೆ ಭಾರತಕ್ಕೆ ಬಂದಿರುವುದು ಬೆಳಕಿಗೆ ಬಂದಿದೆ. ಸದ್ಯ ದಾಖಲೆಗಳು ಹೇಗೆ ಸಿದ್ಧವಾದವು ಎಂಬ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



### ಸಿಸಿಬಿ ಪೊಲೀಸರ ದಾಳಿ 11 ಕೋಟಿ ಮೌಲ್ಯದ ಡ್ರಗ್ಸ್ ಸೀಜ್

ಬೆಂಗಳೂರು ಸಿಸಿಬಿ ಪೊಲೀಸರು ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಇಬ್ರಾಹಿಂ ಎಂಬ ವಿದೇಶಿ ಡ್ರಗ್ ಪೆಡ್ಲರ್ ಅನ್ನು ಬಂಧಿಸಿದ್ದಾರೆ. ಆರೋಪಿಯಿಂದ 11 ಕೋಟಿ ಮೌಲ್ಯದ 5 ಕೆಜಿ MDMA ವಶಕ್ಕೆ ಪಡೆಯಲಾಗಿದೆ. ಆರೋಪಿ ಈ ಹಿಂದೆ ಮಾರತ್ತಹಳ್ಳಿ, ದೆಹಲಿ ಹಾಗೂ ಅರುಣಾಚಲ ಪ್ರದೇಶಗಳಲ್ಲಿ ಡ್ರಗ್ಸ್ ಮಾರಾಟ ಪ್ರಕರಣಗಳಲ್ಲಿ ಬಂಧನಕ್ಕೊಳಗಾಗಿದ್ದನು. ಇತ್ತೀಚೆಗೆ ಜೈಲಿನಿಂದ ಬಿಡುಗಡೆಯಾದ ನಂತರ ಮತ್ತೆ ಡ್ರಗ್ ವ್ಯವಹಾರಕ್ಕೆ ಇಳಿದಿದ್ದಾನೆ. ಈತ ಬಿಸಿನೆಸ್ ವೀಸಾದಡಿ ಭಾರತಕ್ಕೆ ಬಂದಿದ್ದನು ಎಂದು ಪೊಲೀಸರು ತಿಳಿಸಿದ್ದಾರೆ.

## ಒಳಮೀಸಲಾತಿ ಮಸೂದೆಗೆ ಅನುಮೋದನೆ ನೀಡಿ

• **ಉದಯವಾಹಿನಿ, ಬೆಂಗಳೂರು**

ಒಳ ಮೀಸಲಾತಿ ಮಸೂದೆ ಅಂಗೀಕರಿಸಿ, ಅನುಮೋದನೆ ನೀಡುವಂತೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ, ಶಾಸಕರು ಹಾಗೂ ಸಮುದಾಯ ಮುಖಂಡರ ನಿಯೋಗವು ಮಂಗಳವಾರ ಲೋಕ ಭವನಕ್ಕೆ ಭೇಟಿ ನೀಡಿ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ವಿಧಾನಸಭೆ ಮತ್ತು ವಿಧಾನಪರಿಷತ್ತು ಅಂಗೀಕರಿಸಿದ ಒಳ ಮೀಸಲಾತಿ ಮಸೂದೆಗೆ ನಿಮ್ಮಿಂದ ಆದಷ್ಟು ಬೇಗ ಅನುಮೋದನೆ ನೀಡಬೇಕೆಂದು ನಾವು, ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು ಮತ್ತು ಹಿರಿಯ ನಾಯಕರು ಗೌರವದಿಂದ ವಿನಂತಿಸುತ್ತೇವೆ ಎಂದು ನಿಯೋಗವು ರಾಜ್ಯಪಾಲರಿಗೆ ಕೋರಿತು. ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಬೆಂಬಲದೊಂದಿಗೆ ಎರಡೂ ಸದನಗಳು ಮಸೂದೆಯನ್ನು ಸರ್ವಾನುಮತದಿಂದ ಅಂಗೀಕರಿಸಿದೆ. ಸಂವಿಧಾನದ ಅಡಿಯಲ್ಲಿ ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ತತ್ವಗಳಿಗೆ ಅನುಗುಣವಾಗಿ ಪರಿಶಿಷ್ಟ ಜಾತಿಯ 101 ಒಳ ಸಮುದಾಯಗಳಲ್ಲಿ ಮೀಸಲಾತಿ ಕಲ್ಪಿಸಲು ಈ ಮಸೂದೆ ಸಹಾಯವಾಗಲಿದ್ದು, ಮಸೂದೆಗೆ ಆದಷ್ಟು ಬೇಗ ಒಪ್ಪಿಗೆ ನೀಡಬೇಕೆಂದು ಮನವಿ ಪತ್ರದ ಮುಖೇನ ನಿಯೋಗವು ರಾಜ್ಯಪಾಲರಿಗೆ ವಿನಂತಿಸಿತು.

## ಮಹದೇವಪ್ಪ ಇದೀಗ ನಮ್ಮ ಹೈಕಮಾಂಡ್‌ನ ಭಾಗ: ಡಿಕೆಶಿ

• **ಉದಯವಾಹಿನಿ, ಬೆಂಗಳೂರು**

ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಬಹಳ ದೊಡ್ಡವರು, ಇದೀಗ ಅವರೂ ನಮ್ಮ ಹೈಕಮಾಂಡ್ ಭಾಗವಾಗಿದ್ದಾರೆ. ಅವರ ಬಗ್ಗೆ ನಾನು ಏನನ್ನೂ ಮಾತನಾಡುವುದಿಲ್ಲ. ಈ ಬಗ್ಗೆ ಪಕ್ಷವೇ ತೀರ್ಮಾನ ಮಾಡಲಿ ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ. ಮಹದೇವಪ್ಪ ಅವರು ಹೇಳಿಕೆಯ ಬಗ್ಗೆ ಸಿಎಂ, ಹೈಕಮಾಂಡ್ ನಾಯಕರು ಕ್ರಮ ಕೈಗೊಳ್ಳುತ್ತಾರೆ. ನಾನು ಮಹದೇವಪ್ಪನಿಗೆ ಹಾಗೂ ಬೇರೆಯವರಿಗೆ ಉತ್ತರ ನೀಡಲು ತಯಾರಿಲ್ಲ. ನಾಯಕತ್ವ ವಿಚಾರವಾಗಿ ಈ ಹಿಂದೆ ಹೇಳಿರುವಂತೆ ನಾನು, ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ಎಲ್ಲರೂ ಸೇರಿ ತೆಗೆದುಕೊಂಡಿರುವ ತೀರ್ಮಾನ.

ಈ ತೀರ್ಮಾನ ಏನು ಎಂಬುದು ಸಮಯ ಬಂದಾಗ ತಿಳಿಯುತ್ತದೆ. ಇದು ಕದ್ದುಮುಚ್ಚಿ ಮಾಡಿಕೊಂಡಿರುವ ಗುಟ್ಟು ವ್ಯವಹಾರವಲ್ಲ. ಸಿದ್ದರಾಮಯ್ಯನವರೇ ಸಮಯ ಬಂದಾಗ ರಾಜ್ಯದ ಜನಕ್ಕೆ ಸಂದೇಶ ನೀಡುತ್ತಾರೆ ಎಂದು ತಿಳಿಸಿದರು. ನನಗೆ ಶಾಸಕರ ಯಾವ ಪ್ರವಾಸದ ಬಗ್ಗೆಯೂ ಮಾಹಿತಿ ಇಲ್ಲ. ಇದು ಅವರ ವೈಯಕ್ತಿಕ ಪ್ರವಾಸವೋ, ಬೇರೆಯವರು ಅವರನ್ನು ಪ್ರವಾಸಕ್ಕೆ ಕಳುಹಿಸುತ್ತಿದ್ದಾರೋ ಗೊತ್ತಿಲ್ಲ ಎಂದು ಅವರು ಹೇಳಿದರು.

## ಮಹಿಳೆಯರ ರಕ್ಷಣೆ ನಿಟ್ಟಿನಲ್ಲಿ ರಚನೆ ಮಾಡಲಾಗಿರುವ ಅಕ್ಕಪಡೆ ಹವಾ ಇನ್ಮುಂದೆ ಶುರು

• **ಉದಯವಾಹಿನಿ, ವಿಜಯಪುರ**

ಮಹಿಳೆಯರ ರಕ್ಷಣೆ ನಿಟ್ಟಿನಲ್ಲಿ ರಚನೆ ಮಾಡಲಾಗಿರುವ ಅಕ್ಕಪಡೆ ಹವಾ ಇನ್ಮುಂದೆ ಶುರುವಾಗಲಿದೆ. ಅಕ್ಕಪಡೆಗೆ ಬೆಳಗಾವಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ವಿದ್ಯುತ್ತವಾಗಿ ಚಾಲನೆ ನೀಡಿದ್ದಾರೆ. ಅಕ್ಕಪಡೆ ಮಹಿಳೆಯರ ಶಕ್ತಿ, ಮಹಿಳೆಯರ ಸ್ವಾಭಿಮಾನದ ಪ್ರತೀಕ, ಶೀಘ್ರವೇ ತಾಲ್ಲೂಕು ಮಟ್ಟಕ್ಕೂ ವಿಸ್ತರಿಸಲಾಗುವುದು ಎಂದು ಸಚಿವರು ಹೇಳಿದರು. ಬೆಳಗಾವಿ ನಗರದ ಹೃದಯ ಭಾಗ ಕಿತ್ತೂರು ಚೆನ್ನಮ್ಮ ಸರ್ಕಲ್‌ನಲ್ಲಿ ಅಕ್ಕಪಡೆಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ಸದ್ಯಕ್ಕೆ ಪ್ರಾಯೋಗಿಕವಾಗಿ ಕೆಲವು ಸ್ಥಳಗಳಲ್ಲಿ ಅಕ್ಕಪಡೆ ಆರಂಭಿಸಿದ್ದು, ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಮುಂಬರುವ ಬಜೆಟ್‌ನಲ್ಲಿ ಅಂಗೀಕಾರ ಪಡೆದು ತಾಲ್ಲೂಕು ಮಟ್ಟಕ್ಕೂ ಅಕ್ಕಪಡೆ ವಿಸ್ತರಿಸಲಾಗುವುದು ಎಂದರು.

**ಅಕ್ಕ ಪಡೆ ಉದ್ದೇಶ ಏನು:** ಅಕ್ಕಪಡೆ ಎಂದರೆ ಮಹಿಳೆಯರಿಗೆ ಹಾಗೂ ಮಕ್ಕಳ ಪಾಲಿಗೆ ಭರವಸೆ ಇದ್ದಂತೆ. ಜಿಲ್ಲೆಯಾದ್ಯಂತ ಮಹಿಳೆಯರು, ಮಕ್ಕಳು ಸುರಕ್ಷಿತವಾಗಿರಬೇಕು ಎಂಬ ಉದ್ದೇಶದಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇದೀಗ ಅದರ ಮುಂದುವರಿದ ಭಾಗವಾಗಿ ಅಕ್ಕಪಡೆಯನ್ನು ರಚಿಸಲಾಗಿದೆ ಎಂದು ಸಚಿವರು ಹೇಳಿದರು.



ಅಕ್ಕಪಡೆ ಸಿಬ್ಬಂದಿ ಸಾರ್ವಜನಿಕ ಸ್ಥಳಗಳಾದ ಮಾಲ್, ಜಾತ್ರಾ ಮಹೋತ್ಸವ, ಲೇಡಿಸ್ ಹಾಸ್ಟೆಲ್‌ಗಳು, ಕಾಲೇಜುಗಳು, ಸಮುದಾಯ ಭವನ ಸೇರಿದಂತೆ ಜನನಿಬೀಡ ಪ್ರದೇಶಗಳಿಗೆ ಭೇಟಿ ಕೊಡಲಿದ್ದಾರೆ. ಅಕ್ಕಪಡೆಯ ಉದ್ದೇಶ ಸಫಲವಾಗಬೇಕು ಎಂದರೆ ನಾಗರಿಕ ಸಮಾಜ ಕೂಡ ಇದಕ್ಕೆ ಬೆಂಬಲ ನೀಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದರು.

**ಮಹಿಳೆಯರು ನಿರ್ಭೀತಿಯಿಂದ ಓಡಾಡಬೇಕು:** ಬೇರು ಮಟ್ಟದಿಂದಲೇ ಬಾಲ್ಯವಿವಾಹವನ್ನು ತಡೆಗಟ್ಟುವುದೇ ಅಕ್ಕಪಡೆ ಉದ್ದೇಶ, ಜೊತೆಗೆ ಬಾಲ ಗರ್ಭಿಣಿ, ಪೋಕ್ಸೋ ಕೇಸ್‌ಗಳನ್ನು ಕಿತ್ತುಹಾಕಬೇಕು. ಮಹಿಳೆಯರು ನಿರ್ಭೀತಿಯಿಂದ ಓಡಾಡಬೇಕು ಎಂಬುದೇ ಅಕ್ಕಪಡೆ ಉದ್ದೇಶ ಎಂದು ಹೇಳಿದರು. ಅಕ್ಕಪಡೆ ಎಂದರೆ ಆಸರೆ, ಶಕ್ತಿ, ಸ್ವಾಭಿಮಾನ, ನಾಗರಿಕ ಸಮಾಜದಲ್ಲಿ ಎಲ್ಲರೂ ಕೂಡ ನ್ಯಾಯಯುತವಾಗಿ ನಡೆದುಕೊಳ್ಳಬೇಕು, ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು. ದೌರ್ಜನ್ಯಕ್ಕೊಳಗಾಗಿ ದೂರು ನೀಡುವವರ ಹೆಸರನ್ನು ಗೌಪ್ಯವಾಗಿ ಇಡಲಾಗುವುದು ಎಂದರು.

ಸಹಾಯವಾಣಿಯನ್ನು ಹೆಣ್ಣುಮಕ್ಕಳು ಸೂಕ್ತರೀತಿಯಲ್ಲಿ ಬಳಸಿಕೊಳ್ಳಬೇಕು, ನಿಮ್ಮ ಮನೆಗಳಲ್ಲಿ ತೊಂದರೆ ಅನುಭವಿಸುತ್ತಿದ್ದರೂ ಸಹಾಯವಾಣಿ ಮೂಲಕ ಅಕ್ಕಪಡೆಯನ್ನು ಸಂಪರ್ಕಿಸಬಹುದು. ಸಂಕಷ್ಟದಲ್ಲಿರುವವರಿಗೆ ಆಸರೆ ನೀಡಲು ಅಕ್ಕಪಡೆ ಎಲ್ಲರ ಜೊತೆಗೆ ಕೈಜೋಡಿಸಲಿದೆ ಎಂದು ಸಚಿವರು ತಿಳಿಸಿದರು. ಇದೇ ವೇಳೆ ರಾಜ್ಯ ಅಕ್ಕಪಡೆಯ ಸಂಯೋಜಕರಾದ ಸೈನಿ ನೇತೃತ್ವದ ಬೀದರ್ ಜಿಲ್ಲೆಯ ಅಕ್ಕಪಡೆಯ ವತಿಯಿಂದ ಆತ್ಮರಕ್ಷಣೆಯ ಕುರಿತು ಸಾಹಸ ಪ್ರದರ್ಶನ ನೋಡುಗರ ಗಮನ ಸೆಳೆಯಿತು.

### 1098 ಸಂಖ್ಯೆಗೆ ಕರೆ ಮಾಡಿ

**ಮಕ್ಕಳ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯವನ್ನು ತಡೆಗಟ್ಟಲು ದಿನದ 24 ಗಂಟೆಯೂ ಸಹಾಯವಾಣಿಗಳನ್ನು ತೆರೆಯಲಾಗಿದೆ. ನಮ್ಮ ಇಲಾಖೆಯಿಂದ ಸಹಾಯವಾಣಿ ತೆರೆಯಲಾಗಿದ್ದು, 1098 ಸಂಖ್ಯೆಗೆ ಕರೆ ಮಾಡಬಹುದು. ಅಕ್ಕ ಪಡೆಗೆ ಮಹಿಳಾ ಸಹಾಯವಾಣಿ 181, ಜೊತೆಗೆ ಪೊಲೀಸ್ ಇಲಾಖೆಯ 112 ಸಂಖ್ಯೆಗೆ ಕರೆ ಮಾಡಬಹುದು. ಸಾರ್ವಜನಿಕ ಸ್ಥಳಗಳಲ್ಲಿ ಸಹಾಯವಾಣಿ ಸಂಖ್ಯೆಗಳನ್ನು ಅಂಟಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.**

# ಕಾನೂನುಬಾಹಿರವಾಗಿ 31 ನಿವೇಶನಗಳನ್ನು ಪಡೆದುಕೊಂಡ ಕಾಂಗ್ರೆಸ್!

● ನ್ಯಾಯಾಲಯದ ಕದ ತಟ್ಟೋ ಎಚ್ಚರಿಕೆ ಕೊಟ್ಟ ಛಲವಾದಿ ● ಭವನಗಳ ನಿರ್ಮಾಣಕ್ಕಾಗಿ ಕಾನೂನು ಬಾಹಿರ ನಿವೇಶನ


• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ ಸರಕಾರವು ಬಡವರಿಗೆ ಮನೆ ಕೊಡಬೇಕು ಭೂ ರಹಿತರಿಗೆ ಭೂಮಿ ಕೊಡಬೇಕಿತ್ತು. ಆದರೆ, ಈ ಕೆಲಸವನ್ನು ಮಾಡುತ್ತಿಲ್ಲ. ತಾನೇ ಭೂಮಿ ಕಬಳಿಸುವ ಕೆಲಸ ಮಾಡುತ್ತಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಂಗಳವಾರ ಅವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು. ಭೂಕಬಳಿಕೆಯಲ್ಲಿ ಸರಕಾರವೇ ನಿರತವಾಗಿದೆ. ಸರಕಾರವು ತಾಲ್ಲೂಕು, ಜಿಲ್ಲೆ, ಮಂಡಲ, ಪಂಚಾಯಿತಿ- ಹೀಗೆ ಎಲ್ಲಾ ಕಡೆ ನಿವೇಶನ ಪಡೆಯಲು ಅದಕ್ಕೆ ಅಧಿಕಾರ ಇಲ್ಲ. ಕಾನೂನು ಉಲ್ಲಂಘಿಸಿ ಅದು ಕಾಂಗ್ರೆಸ್ ಪಕ್ಷದ ಕಚೇರಿ ನಿರ್ಮಾಣಕ್ಕೆ ಲೀಸ್‌ಗೆ ಮುಧೋಳದಲ್ಲಿ ನಿವೇಶನ ಪಡೆಯಲು ಮುಂದಾಗಿತ್ತು. ಆದರೆ, ಇಲಾಖೆಯು ಅದನ್ನು ತಿರಸ್ಕರಿಸಿತ್ತು ಎಂದು ಗಮನ ಸೆಳೆದರು.

ಚಿಕ್ಕಬಳ್ಳಾಪುರದಲ್ಲಿ ಒಂದು ಸಿಎ ನಿವೇಶನವನ್ನು ಕಾಂಗ್ರೆಸ್ ಪಕ್ಷದ ಕಚೇರಿ ನಿರ್ಮಾಣಕ್ಕೆ ಪಡೆಯಲು ಮುಂದಾಗಿತ್ತು.3,404 ಚದರ ಮೀಟರ್‍ನ 4 ಕೋಟಿ 8 ಲಕ್ಷ 51,120 ರೂ. ಬೆಲೆಯ ನಿವೇಶನ ಇದಾಗಿದೆ. ಇದನ್ನು ಅವರು ತಮಗೆ ಪಡೆದುಕೊಂಡಿದ್ದಾರೆ. ಅವರದೇ ಪೆನ್, ಅವರದೇ ಪುಸ್ತಕ, ಅವರದೇ ಅಧಿಕಾರ, ಅವರೇ ಬರಕೊಳ್ಳುವುದು, 20 ಲಕ್ಷ 42,556 ರೂ.ಗೆ ಇದನ್ನು ಪಡೆದಿದ್ದಾರೆ. ಕೇವಲ ಶೇ 5 ಮೌಲ್ಯಕ್ಕೆ ಇದನ್ನು ತೆಗೆದುಕೊಂಡಿದ್ದಾಗಿ ಟೀಕಿಸಿದರು. ತುಮಕೂರು, ಗ್ರಾಮಾಂತರ ಜಿಲ್ಲೆ, ಚಾಮರಾಜನಗರ, ದಕ್ಷಿಣ ಕನ್ನಡ, ಉಡುಪಿ- ಹೀಗೆ ಎಲ್ಲಾ ಜಿಲ್ಲೆಗಳಲ್ಲಿ ನಿವೇಶನವನ್ನು ತೆಗೆದುಕೊಂಡಿದ್ದಾರೆ ಎಂದು ಆಕ್ಷೇಪಿಸಿದರು. ಬಾದಾಮಿಯಲ್ಲಿ 613 ಚದರ ಮೀಟರ್‌ನ ನಿವೇಶನಕ್ಕೆ 24 ಲಕ್ಷದ 52 ಸಾವಿರ ಮೌಲ್ಯದ ಬದಲಾಗಿ 1 ಲಕ್ಷ 22 ಸಾವಿರಕ್ಕೆ ಪಡೆದಿದ್ದಾರೆ. ಇದು ಕೂಡ ಶೇ 5ರಷ್ಟಿದೆ. ಕೊಪ್ಪಳದಲ್ಲಿ 1 ಕೋಟಿ 31 ಲಕ್ಷದ 31,975 ರೂ. ಬದಲು 6,56,598 ರೂ.ಗೆ ಅಂದರೆ ಶೇ 5 ದರಕ್ಕೆ ಪಡೆದಿದ್ದಾರೆ. ಚನ್ನರಾಯಪಟ್ಟಣದಲ್ಲಿ 1.36 ಲಕ್ಷಕ್ಕೆ ತೆಗೆದುಕೊಂಡಿದ್ದಾರೆ. ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ 1 ಕೋಟಿ 45 ಲಕ್ಷ 78 ಸಾವಿರದ ನಿವೇಶನವನ್ನು 7 ಲಕ್ಷ 28 ಸಾವಿರಕ್ಕೆ ಬರೆದುಕೊಂಡಿದ್ದಾರೆ.

### ಕಾಂಗ್ರೆಸ್ ವಿರುದ್ಧ ಛಲವಾದಿ ಆರೋಪ



ಗೌರಿಬಿದನೂರಿನಲ್ಲಿ 90 ಲಕ್ಷ 80,900 ರೂ ಬೆಲೆಯ ನಿವೇಶನವನ್ನು 4 ಲಕ್ಷ 54 ಸಾವಿರಕ್ಕೆ ತೆಗೆದುಕೊಂಡಿದ್ದಾರೆ. ಸಾರ್ವಜನಿಕ ಸೌಕರ್ಯಕ್ಕಾಗಿ ಇರುವ ನಿವೇಶನಗಳಿವು ಎಂದು ಗಮನಕ್ಕೆ ತಂದರು.

ಮಾನ್ವಿಯಲ್ಲಿ 37 ಲಕ್ಷ 87,500 ರೂ. ನಿವೇಶನವನ್ನು 1 ಲಕ್ಷ 89 ಸಾವಿರ, ಶಹಾಪುರದಲ್ಲಿ 95 ಲಕ್ಷ 71,144 ರೂ. ಸೈಟನ್ನು 4 ಲಕ್ಷ 78 ಸಾವಿರ ಅಂದರೆ ಕೇವಲ ಶೇ 5 ಮೌಲ್ಯಕ್ಕೆ ಪಡೆದಿದ್ದು, ಬಸವಕಲ್ಯಾಣದಲ್ಲಿ ಹಾಗೇ ಮಾಡಿದ್ದಾರೆ. ಅಲ್ಲಿ ದರ ವಿಧಿಸಿಲ್ಲ. ಲಿಂಗಸುಗೂರಿನಲ್ಲಿ 46 ಲಕ್ಷ 99,200 ರೂ. ದನ್ನು 2 ಲಕ್ಷ 34ಕ್ಕೆ ಬರೆದುಕೊಂಡಿದ್ದಾರೆ. ತುಮಕೂರು ಪಾಲಿಕೆ ವ್ಯಾಪ್ತಿಯಲ್ಲಿ 1 ಕೋಟಿ 70 ಸಾವಿರದ ನಿವೇಶನವನ್ನು 8 ಲಕ್ಷ 50 ಸಾವಿರಕ್ಕೆ ಬರೆದುಕೊಂಡಿದ್ದಾರೆ ಎಂದು ದೂರಿದರು. ಹುಬ್ಬಳ್ಳಿ- ಧಾರವಾಡದಲ್ಲಿ ನಿವೇಶನಕ್ಕೆ ದರ ಹಾಕಿಲ್ಲ ಎಂದು ಆಕ್ಷೇಪಿಸಿದರು. ನಾಗರಿಕ ಸೌಲಭ್ಯ ನಿವೇಶನಗಳನ್ನು ಕಾಂಗ್ರೆಸ್ ಭವನ ಟ್ರಸ್ಟಿಗೆ ಮಂಜೂರು ಮಾಡಲು ಅವಕಾಶ ಇಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಇದನ್ನು ಸಚಿವ ಸಂಪುಟದ ಮುಂದೆ ಮಂಡಿಸಿ, ಅಲ್ಲಿ ಅನುಮೋದನೆ ಕೊಟ್ಟು ಸದ್ರಿ ನಾಗರಿಕ ಸೌಲಭ್ಯ ನಿವೇಶನಗಳನ್ನು ಮಂಜೂರು ಮಾಡಲಾಗಿದೆ ಎಂದು ದಾಖಲೆಗಳನ್ನು ಓದಿ ಹೇಳಿದರು. ಇದು ಭೈರತಿ ಸುರೇಶ್ ಅವರು ಕೊಟ್ಟ ವರದಿ ಎಂದು ವಿವರಿಸಿದರು. ಅಧಿಕಾರಿಗಳು ಇದರ ಮಂಜೂರಾತಿ ಕಾನೂನುಬಾಹಿರ ಎಂದು ತಿಳಿಸಿದ್ದರು.

ಆದರೂ, ಸರಕಾರದ ಸಚಿವ ಸಂಪುಟದ ಸಭೆಯಲ್ಲಿ ಮಂಡಿಸಿ ವಿಶೇಷವಾದ ಅನುಮೋದನೆ ಕೊಟ್ಟಿದ್ದಾರೆ ಎಂದು ಟೀಕಿಸಿದರು. ಬೆಂಗಳೂರು ಗ್ರಾಮಾಂತರ, ತುಮಕೂರು, ಚಾಮರಾಜನಗರ, ದಕ್ಷಿಣ ಕನ್ನಡ, ಉಡುಪಿಯಲ್ಲಿ ಕಂದಾಯ ಇಲಾಖೆಯಲ್ಲೂ ಇದೇರೀತಿ ತಿಳಿಸಿದ್ದಾರೆ. ಕಾಂಗ್ರೆಸ್ ಪಕ್ಷವು ಕಂದಾಯ ಇಲಾಖೆಯಿಂದ 5 ನಿವೇಶನಗಳು, ಪುರಸಭೆ- ಸ್ಥಳೀಯ ಸಂಸ್ಥೆಗಳಿಂದ 26 ನಿವೇಶನಗಳನ್ನು ಭೂಕಬಳಿಕೆ ಮಾಡಿದೆ ಎಂದು ದೂರಿದರು.

### ಅಧಿಕಾರ ದುರುಪಯೋಗ, ದೊಡ್ಡ ಲೋಪ

**ಬಿಜೆಪಿ, ಅನೇಕ ಕಡೆಗಳಲ್ಲಿ ಖಾಸಗಿಯಾಗಿ ಜಾಗ ಖರೀದಿಸಿ ಕಚೇರಿ ನಿರ್ಮಿಸಿದೆ. ಅದು ಸರಕಾರಿ ಭೂಮಿಯನ್ನು ತೆಗೆದುಕೊಂಡಿಲ್ಲ. ರಾಜಕೀಯ ಪಕ್ಷಗಳು ಒಂದು ನಿವೇಶನ ಪಡೆಯಲು ಅವಕಾಶ ಇದೆ. ಇವರು ಅಧಿಕಾರ ದುರುಪಯೋಗ ಪಡಿಸಿಕೊಂಡು ತಾಲ್ಲೂಕು, ಮಂಡಲಗಳಲ್ಲಿ, ಜಿಲ್ಲೆಗಳಲ್ಲಿ ಈ ರೀತಿ ಲೂಟಿ ಹೊಡೆದು ಸರಕಾರಿ ಜಮೀನುಗಳನ್ನು ಪಡೆದುದು ಸರಿಯಲ್ಲ. ಇದು ಕಾನೂನಿನ ದೊಡ್ಡ ಲೋಪ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಇದರ ವಿರುದ್ಧ ನಮ್ಮ ಹೋರಾಟ ನಡೆಯಲಿದೆ ಎಂದು ಪ್ರಕಟಿಸಿದರು.**

**ಈ ದಿನದ ದರ** ಪೆಟ್ರೋಲ್: 103.06 ₹/L | ಡೀಸೆಲ್ : 91.50 ₹/L | ಬಂಗಾರ: ₹15,420/Gram24ct ₹14,135/Gram22ct | ಬೆಳ್ಳಿ: ₹260.00/Gram

■ ಬೆಳಗ್ಗೆ 10ರಿಂದ ಮಧ್ಯಾಹ್ನ 1 ಗಂಟೆವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ ■ ಮಾ.18ರಿಂದ ಏ.2ರವರೆಗೆ ಬೆಳಗ್ಗೆ 10ರಿಂದ ಮಧ್ಯಾಹ್ನ 1.15ರವರೆಗೆ ಎಸ್ಸೆಸ್ಸೆಲ್ಸಿ ಪರೀಕ್ಷೆ


# ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಅಂತಿಮ ವೇಳಾಪಟ್ಟಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ಎಸ್ಸೆಸ್ಸೆಲ್ಸಿ, ದ್ವಿತೀಯ ಪಿಯುಸಿ ಪರೀಕ್ಷೆ-1 ಅನ್ನು ವಿದ್ಯಾರ್ಥಿ ಸ್ನೇಹಿಯಾಗಿ ನಡೆಸಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು, ಪೂರ್ವ ಸಿದ್ದತೆಯನ್ನು ಕೈಗೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆಬ್ರವರಿ 28ರಿಂದ ಮಾ.17ರವರೆಗೂ ಬೆಳಗ್ಗೆ 10ರಿಂದ ಮಧ್ಯಾಹ್ನ 1 ಗಂಟೆವರೆಗೆ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತವೆ. ಮಾ.18ರಿಂದ ಏ.2ರವರೆಗೆ ಬೆಳಗ್ಗೆ 10ರಿಂದ ಮಧ್ಯಾಹ್ನ 1.15ರವರೆಗೆ ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ನಡೆಯುತ್ತವೆ ಎಂದು ಹೇಳಿದರು.

ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ 7,10,363 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಅವರಲ್ಲಿ 6,46,801 ಹೊಸಬರು, 50,540 ಪುನರಾವರ್ತಿತರು, 13,022 ಖಾಸಗಿ ಅಭ್ಯರ್ಥಿಗಳಿದ್ದಾರೆ. ವಿಜ್ಞಾನ ವಿಷಯದಲ್ಲಿ 2,92,645, ವಾಣಿಜ್ಯ ವಿಷಯದಲ್ಲಿ 2,11,174, ಕಲಾ ವಿಭಾಗದಲ್ಲಿ 1,42,982 ವಿದ್ಯಾರ್ಥಿಗಳು ನೊಂದಾಯಿತರಾಗಿದ್ದಾರೆ. ಪರೀಕ್ಷೆಗಾಗಿ 5174 ಕಾಲೇಜುಗಳು ನೊಂದಾಯಿಸಿಕೊಂಡಿವೆ. 1217 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಏ.7ರಂದು ಪರೀಕ್ಷಾ ಫಲಿತಾಂಶ ಪ್ರಕಟಿಸುವ ಸಾಧ್ಯತೆ ಇದೆ. ವಿಫಲಗೊಂಡ ವಿದ್ಯಾರ್ಥಿಗಳಿಗಾಗಿ ಏ.25ರಿಂದ ಮೇ 9ರ ನಡುವೆ ಪರೀಕ್ಷೆ-2ನ್ನು ನಡೆಸಲು ದಿನಾಂಕ ನಿಗದಿಪಡಿಸಿದ್ದು, ಮೇ 22ರಂದು ಫಲಿತಾಂಶ ಪ್ರಕಟಿಸಲಾಗುವುದು ಎಂದರು.

ಏ.7ರಂದು ಫಲಿತಾಂಶ ಪ್ರಕಟ



ಎಸ್ಸೆಸ್ಸೆಲ್ಸಿ ಪರೀಕ್ಷೆಗೆ 9,02,889 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಅವರಲ್ಲಿ 8,12,855 ವಿದ್ಯಾರ್ಥಿಗಳು ಹೊಸಬರು, 62,845 ಪುನರಾವರ್ತಿತರು, ಖಾಸಗಿ ಅಭ್ಯರ್ಥಿಗಳು 27,189 ಮಂದಿ ಇದ್ದಾರೆ. ಪರೀಕ್ಷೆಗಾಗಿ 15,941 ಶಾಲೆಗಳು ನೋಂದಾಯಿಸಿಕೊಂಡಿವೆ. 2,871 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಾ.18ರಿಂದ ಏ.2ರವರೆಗೆ ಪರೀಕ್ಷೆ ನಡೆಯಲಿದ್ದು, ಏ.24ರಂದು ಫಲಿತಾಂಶ ಪ್ರಕಟಿಸುವ ಸಾಧ್ಯತೆಗಳಿವೆ. ವಿಫಲಗೊಂಡ ವಿದ್ಯಾರ್ಥಿಗಳಿಗಾಗಿ ಮೇ 18ರಿಂದ ಮೇ 25ರವರೆಗೆ 2ನೇ ಪರೀಕ್ಷೆ ನಡೆಸಲಾಗುವುದು. ಅದರ ಫಲಿತಾಂಶವನ್ನು ಜೂ.1ರಂದು ಪ್ರಕಟಿಸುವ ಸಾಧ್ಯತೆ ಇದೆ. ಈಗಾಗಲೇ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ವಿದ್ಯಾರ್ಥಿಗಳು ಯಾವುದೇ ಭಯ ಆತಂಕವಿಲ್ಲದೆ ಪರೀಕ್ಷೆ ಬರೆಯುವಂತೆ ಕರೆ ನೀಡಿದರು. ಪರೀಕ್ಷಾ ಅಕ್ರಮಗಳನ್ನು ತಡೆಯಲು ಎಲ್ಲೆಡೆ ವೆಬ್ ಕಾಸ್ಟಿಂಗ್ ನಡೆಸಲಾಗುವುದು. ಕುಡಿಯುವ ನೀರು ಸೇರಿದಂತೆ ಇತರೆ ಸೌಲಭ್ಯಗಳನ್ನು ಏರ್ಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ದೂರದೂರಿನಿಂದ ಬರುವ ವಿದ್ಯಾರ್ಥಿಗಳ ವಿವರವನ್ನು ಮೊದಲೇ ಪಡೆದುಕೊಂಡು ಅವರಿಗೆ ನಿಗದಿತ ಸಮಯಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ಜಿಲ್ಲಾಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ. ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿದರೆ ಉಚಿತ ಪ್ರಯಾಣದ ಸೌಲಭ್ಯವಿದೆ ಎಂದು ಸಚಿವರು ತಿಳಿಸಿದರು. ಇನ್‌ಸ್ಟ್ರಾಗ್ರಾಂ, ಫೇಸ್‌ಬುಕ್, ವಾಟ್ಸಾಪ್, ಟೆಲಿಗ್ರಾಂ, ಯೂಟ್ಯೂಬ್ ಸೇರಿದಂತೆ ಇತರ ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಪ್ರಶ್ನೆ ಪತ್ರಿಕೆಗಳನ್ನು ಹರಿಬಿಡುವವರ ವಿರುದ್ದ ಬಿಎನ್‌ಎಸ್ ಮತ್ತು ಶಿಕ್ಷಣ ಕಾಯ್ದೆಯಡಿ ಕಠಿಣ ಕ್ರಮ ಜರುಗಿಸಲಾಗುತ್ತದೆ, ಸಂಬಂಧಿಸಿದವರ ಖಾತೆಗಳನ್ನು ನಿರ್ಬಂಧಿಸುವುದಾಗಿ ಎಚ್ಚರಿಕೆ ನೀಡಿದರು. ಈಗಾಗಲೇ ಮಾದರಿ ಪಶ್ನೆ ಪತ್ರಿಕೆಯನ್ನು ನೀಡುವ ಮೂಲಕ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಸಂಭವನೀಯ ಪ್ರಶ್ನೆಗಳ ಕುರಿತು ಶಾಲೆಗಳಲ್ಲಿ ಅಧ್ಯಯನಗಳಾಗಿವೆ. ಮಾದರಿ ಉತ್ತರಪತ್ರಿಕೆಗಳನ್ನು ಕೂಡ ಒದಗಿಸಲಾಗಿದೆ. ರಾಜ್ಯ ಮಟ್ಟದಲ್ಲಿ ಪೂರ್ವ ಸಿದ್ದತಾ ಸಭೆಗಳನ್ನು ನಡೆಸಲಾಗಿದೆ. ಖಾಸಗಿ ಮತ್ತು ಪುನರಾವರ್ತಿತ ಅಭ್ಯರ್ಥಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಪರೀಕ್ಷಾ ಕೇಂದ್ರದ 200 ಮೀಟರ್ ಸುತ್ತಳತೆಯಲ್ಲಿ ನಿಷೇಧಿತ ಪ್ರದೇಶ ಎಂದು ಘೋಷಿಸಲಾಗುವುದು. ಜೆರಾಕ್ಸ್, ಸೈಬರ್, ಕಂಪ್ಯೂಟರ್ ಕೇಂದ್ರಗಳನ್ನು ಮುಚ್ಚಿಸಲಾಗುವುದು ಎಂದರು.

ಸ್ಯಾಟ್ ಪದ್ಧತಿಯಿಂದಾಗಿ ಒಂದಿಷ್ಟು ಗೊಂದಲಗಳಾಗಿ ವಿದ್ಯಾರ್ಥಿಗಳು ಅವಕಾಶ ವಂಚಿತರಾಗಿರಬಹುದು. ಈ ಹಂತದಲ್ಲಿ ನಾವು ಏನೂ ಮಾಡಲಾಗುವುದಿಲ್ಲ. ಮುಂದಿನ ವರ್ಷದಿಂದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಬಯೋಮೆಟ್ರಿಕ್ ಹಾಗೂ ಮುಖ ಚಹರೆ ಗುರುತಿಸುವ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸಲಾಗುತ್ತದೆ. ಅನುದಾನ ರಹಿತ ಶಾಲೆಗಳಿಗೆ ಪಾಲಿಸಬೇಕಾದ ಕ್ರಮಗಳ ಬಗ್ಗೆ ಅಧಿವೇಶನದ ಬಳಿಕ ಪರಿಶೀಲನೆ ನಡೆಸವುದಾಗಿ ಹೇಳಿದರು. 2ನೇ ಮತ್ತು 3ನೇ ಹಂತದ ಪರೀಕ್ಷಾ ಪದ್ದತಿಗಳು ದೇಶದಲ್ಲೇ ಜನಪ್ರಿಯಗೊಂಡಿವೆ. ಭಯಮುಕ್ತ ವಾತಾವರಣದಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಪರೀಕ್ಷಾ ಮಾದರಿಯಲ್ಲಿ ಯಾವುದೇ ಬದಲಾವಣೆಗಳಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

### ದ್ವಿತೀಯ ಪಿಯುಸಿ ವೇಳಾಪಟ್ಟಿ

- ಫೆಬ್ರವರಿ 28: ಕನ್ನಡ, ಅರೇಬಿಕ್
- ಮಾರ್ಚ್ 2: ಭೂಗೋಳಶಾಸ್ತ್ರ, ಸಂಖ್ಯಾಶಾಸ್ತ್ರ, ಮನಃಶಾಸ್ತ್ರ
- ಮಾರ್ಚ್ 3: ಇಂಗ್ಲಿಷ್
- ಮಾರ್ಚ್ 4: ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್
- ಮಾರ್ಚ್ 5: ಇತಿಹಾಸ
- ಮಾರ್ಚ್ 6: ಭೌತಶಾಸ್ತ್ರ
- ಮಾರ್ಚ್ 7: ಐಚ್ಛಿಕ ಕನ್ನಡ, ವ್ಯವಹಾರ ಅಧ್ಯಯನ, ಭೂಗರ್ಭಶಾಸ್ತ್ರ
- ಮಾರ್ಚ್ 9: ರಸಾಯನಶಾಸ್ತ್ರ, ಶಿಕ್ಷಣಶಾಸ್ತ್ರ, ಮೂಲ ಗಣಿತ
- ಮಾರ್ಚ್ 10: ಅರ್ಥಶಾಸ್ತ್ರ
- ಮಾರ್ಚ್ 11: ತರ್ಕಶಾಸ್ತ್ರ, ವಿದ್ಯುನ್ಮಾನಶಾಸ್ತ್ರ, ಗೃಹ ವಿಜ್ಞಾನ
- ಮಾರ್ಚ್ 12: ಹಿಂದಿ
- ಮಾರ್ಚ್ 13: ರಾಜ್ಯಶಾಸ್ತ್ರ
- ಮಾರ್ಚ್ 14: ಲೆಕ್ಕಶಾಸ್ತ್ರ, ಗಣಿತ
- ಮಾರ್ಚ್ 16: ಸಮಾಜಶಾಸ್ತ್ರ, ಜೀವಶಾಸ್ತ್ರ, ಗಣಕ ವಿಜ್ಞಾನ
- ಮಾರ್ಚ್ 17: ಹಿಂದುಸ್ತಾನಿ ಸಂಗೀತ, ರೀಟೇಲ್ ಆಟೋಮೊಬೈಲ್, ಆರೋಗ್ಯ ರಕ್ಷಣೆ

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಅಂತಿಮ ವೇಳಾಪಟ್ಟಿ:

- ಮಾರ್ಚ್ 18: ಪ್ರಥಮ ಭಾಷೆ (ಕನ್ನಡ, ಇಂಗ್ಲಿಷ್, ಹಿಂದಿ ಇತ್ಯಾದಿ)
- ಮಾರ್ಚ್ 23: ವಿಜ್ಞಾನ
- ಮಾರ್ಚ್ 25: ದ್ವಿತೀಯ ಭಾಷೆ (ಇಂಗ್ಲಿಷ್, ಕನ್ನಡ)
- ಮಾರ್ಚ್ 28: ಗಣಿತ
- ಮಾರ್ಚ್ 30: ತೃತೀಯ ಭಾಷೆ
- ಏಪ್ರಿಲ್ 2: ಸಮಾಜ ವಿಜ್ಞಾನ

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ವೇಳಾಪಟ್ಟಿ

- ಮೇ 18: ಪ್ರಥಮ ಭಾಷೆ
- ಮೇ 19: ವಿಜ್ಞಾನ
- ಮೇ 20: ದ್ವಿತೀಯ ಭಾಷೆ
- ಮೇ 21: ಗಣಿತ
- ಮೇ 22: ತೃತೀಯ ಭಾಷೆ
- ಮೇ 23: ಸಮಾಜ ವಿಜ್ಞಾನ

## ಶ್ರೀರಾಘವೇಂದ್ರ ಗುರುಸಾರ್ವಭೌಮರ ಪಟ್ಟಾಭಿಷೇಕ ಮತ್ತು ವರ್ಧಂತಿ ಉತ್ಸವ

• ಉದಯವಾಹಿನಿ, ಬೆಂಗಳೂರು

ಶ್ರೀರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಫೆಬ್ರವರಿ 18 ರಿಂದ 24ರ ವರೆಗೆ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಪಟ್ಟಾಭಿಷೇಕ, ವರ್ಧಂತಿ ಉತ್ಸವ ಜರುಗಲಿದೆ.



**ಕಾರ್ಯಕ್ರಮಗಳು :** (ಪ್ರವಚನಗಳು ಪ್ರತಿದಿನ ಸಂಜೆ 6-30ಕ್ಕೆ) **ಕ್ರಮವಾಗಿ** : ಶ್ರೀ ಖೇಡಾ ಪ್ರಮೋದಾಚಾರ್, ಶ್ರೀ ವೇದವ್ಯಾಸಾಚಾರ್, ಶ್ರೀ ರಘೋತ್ತಮಾಚಾರ್, ಶ್ರೀ ವೆಂಕಟನರಸಿಂಹಾಚಾರ್, ಡಾ|| ವಿನಾಯಕಾಚಾರ್, ಶ್ರೀದ್ವೈಪಾಯನಾಚಾರ್ ಜೋಶಿ, ಶ್ರೀ ಗುರುಪ್ರಸಾದಾಚಾರ್‌ಹನಸೋಗೆ.
**ಸಂಸ್ಥಾನ ಪೂಜೆ :** ಫೆಬ್ರವರಿ 19, ಗುರುವಾರ- ಕುಂದಾಪುರ ಶ್ರೀ ವ್ಯಾಸರಾಜ ಮಠಾಧೀಶರಾದ ಶ್ರೀಶ್ರೀ ಲಕ್ಷ್ಮೀಂದ್ರತೀರ್ಥ ಶ್ರೀಪಾದಂಗಳವರಿಂದ. ಫೆಬ್ರವರಿ 22, ಭಾನುವಾರ-ತಂಬಿಹಳ್ಳಿ ಮಠದ ಶ್ರೀ ಶ್ರೀವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದಂಗಳವರಿಂದ ನಡೆಯಲಿದೆ.
**ಸ್ಥಳ :** ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003

## ಪ್ರಿಯಾಂಕ್ ಖರ್ಗೆಗೆ ಉದ್ಯಮಿ ಮೋಹನ್‌ದಾಸ್ ಪೈ ತಿರುಗೇಟು

• ಉದಯವಾಹಿನಿ, ಬೆಂಗಳೂರು

ಕೋಮುವಾದದಿಂದ ಮಂಗಳೂರಿಗೆ ಹೂಡಿಕೆದಾರರು ಬರುತ್ತಿಲ್ಲ ಎಂಬ ಸಚಿವ ಪ್ರಿಯಾಂಕ್ ಖರ್ಗೆಯವರ ಹೇಳಿಕೆಗೆ ತಿರುಗೇಟು ಕೊಟ್ಟಿರುವ ಉದ್ಯಮಿ ಮೋಹನ್ ದಾಸ್ ಪೈ ಅವರು, ಇದೊಂದು ದೊಡ್ಡ ಸುಳ್ಳು, ಕೆಟ್ಟ ಜೋಕ್ ಎಂದು ಟೀಕಿಸಿದ್ದಾರೆ. ಈ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರು ಹೊರತುಪಡಿಸಿದ್ರೆ ಎರಡನೇ ದೊಡ್ಡ ಆದಾಯದ ಮೂಲ ದಕ್ಷಿಣ ಕನ್ನಡ. 30,000 ಹೆಚ್ಚಿನ ವಿದ್ಯಾರ್ಥಿಗಳು ಬೇರೆ ರಾಜ್ಯ ನಗರದಿಂದ ವೈದ್ಯಕೀಯ ಇಂಜಿನಿಯರಿಂಗ್ ಕಲಿಯಲು ಇಲ್ಲಿಗೆ ಬರುತ್ತಾರೆ. ನೀವು ಹೇಳಿದ್ದೆ ಸರಿಯಾಗಿದ್ದರೇ ಯಾಕೆ ಹೆತ್ತವರು ಇಲ್ಲಿಗೆ ವಿದ್ಯಾಭ್ಯಾಸಕ್ಕೆ ಕಳಿಸುತ್ತಿದ್ದರು ಎಂದು ಪ್ರಶ್ನೆ ಮಾಡಿದ್ದಾರೆ. ಸಚಿವರಾಗಿ ನಿಮಿಂದ ಇದನ್ನು ನಿರೀಕ್ಷೆ ಮಾಡಿರಲಿಲ್ಲ. ನೀವು ನಮನ್ನು ಅತ್ಯಂತ ತುಚ್ಛವಾಗಿ ನೋಡಿದ್ದೀರಿ ಎಂದು ಪೈ ಕಿಡಿಕಾರಿದ್ದಾರೆ. ಇದಕ್ಕೆ ಮತ್ತೆ ಎಕ್ಸ್‌ನಲ್ಲಿ ಖರ್ಗೆ ತಿರುಗೇಟು ಕೊಟ್ಟಿದ್ದು, ಸಮಸ್ಯೆಗಳ ಬಗ್ಗೆ ಕುರುಡಾಗಿದ್ದರೆ ಹೀಗೆಯೇ ಆಗುತ್ತದೆ. ರಾಜ್ಯದ ಶೇ.40ರಷ್ಟು ಜಿಡಿಪಿಯನ್ನು ಬೆಂಗಳೂರು ಕೊಡುತ್ತದೆ. ಎರಡನೇ ಸ್ಥಾನದಲ್ಲಿರುವ ದಕ್ಷಿಣಕನ್ನಡ ಶೇ.5.4ರಷ್ಟು ಕೊಡುಗೆ ಇದೆ. ಇದರಲ್ಲಿಯೇ ವ್ಯತ್ಯಾಸ ತಿಳಿಯೋದಿಲ್ಲವೇ? ನಾನು ಹೇಳುವುದು ಸುಳ್ಳಾಗಿದ್ದರೆ ಅಲ್ಲಿನ ಸ್ಥಳೀಯ ಕಾಮರ್ಸ್ ವಿಭಾಗ ಈ ಬಗ್ಗೆ ಚರ್ಚೆ ಯಾಕೆ ಮಾಡುತ್ತದೆ? ನಮ್ಮ ಸರ್ಕಾರ ಕರಾವಳಿ ಅಭಿವೃದ್ಧಿಯ ಬಗ್ಗೆ ಜವಾಬ್ದಾರಿಯನ್ನು ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

## ನಂದಿನಿ ಉತ್ಪನ್ನಗಳ ಬಗ್ಗೆ ಅಪಪ್ರಚಾರ ಮಾಡುವವರ ವಿರುದ್ಧ ಕಠಿಣ ಕ್ರಮ

• ಉದಯವಾಹಿನಿ, ಬೆಂಗಳೂರು

ನಂದಿನಿ ಬ್ರ್ಯಾಂಡ್‌ನ ಕೆಲವು ಉತ್ಪನ್ನಗಳ ಕುರಿತು ಸಾಮಾಜಿಕ ಜಾಲತಾಣಗಳ ಮೂಲಕ ಆಧಾರರಹಿತ ಆರೋಪಗಳನ್ನು ಮಾಡುತ್ತಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸುವುದಾಗಿ ಕರ್ನಾಟಕ ಹಾಲು ಮಹಾಮಂಡಳಿ ಎಚ್ಚರಿಕೆ ನೀಡಿದೆ. ನಂದಿನಿ ಉತ್ಪನ್ನಗಳನ್ನು ಸೇವನೆಗೆ ಅಸುರಕ್ಷಿತವೆಂದು ತಪ್ಪಾಗಿ ಪ್ರಚಾರ ಮಾಡಲಾಗುತ್ತಿದ್ದು, ಬಾಲ್ಯದಿಂದಲೇ ನಂದಿನಿ ಬ್ರಾಂಡ್‌ನೊಂದಿಗೆ ಬೆಳೆದಿರುವ ಕೋಟ್ಯಾಂತರ ಗ್ರಾಹಕರಲ್ಲಿ ಅನಗತ್ಯ ಗೊಂದಲ ಉಂಟುಮಾಡಿರುವುದು ನಮ್ಮ ಗಮನಕ್ಕೆ ಬಂದಿದೆ ಎಂದು ಮಂಡಳಿ ಹೇಳಿದೆ.

ಕೆಎಂಎಫ್ ಕಾನೂನು ಬದ್ದ ಸಂಸ್ಥೆಗಳು, ಭಾರತೀಯ ಆಹಾರ ಸುರಕ್ಷತಾ, ಮಾನದಂಡ ಪ್ರಾಧಿಕಾರ ನಿಗದಿಪಡಿಸಿರುವ ಎಲ್ಲಾ ಸುರಕ್ಷತಾ ಮಾನದಂಡಗಳು, ಅನುಮೋದಿತ ವಿಧಾನಗಳನ್ನು ಕಟ್ಟುನಿಟ್ಟಾಗಿ ಅನುಸರಿಸುತ್ತಿದೆ. ನಂದಿನಿಹಾಲು, ಹಾಲು ಉತ್ಪನ್ನಗಳೆಲ್ಲವೂ ಸೇವನೆಗೆ ಸಂಪೂರ್ಣ ಸುರಕ್ಷಿತವಾಗಿದ್ದು, ಗ್ರಾಹಕರು ಆತಂಕಪಡಬೇಕಾಗಿಲ್ಲ ಎಂದು ಕರ್ನಾಟಕ ಹಾಲು ಮಹಾಮಂಡಳಿಯು ಗ್ರಾಹಕರಿಕೆ ಭರವಸೆ ನೀಡಿದೆ. ಕರ್ನಾಟಕ ಹಾಲು ಮಹಾಮಂಡಳಿಯು ಆಧಾರರಹಿತ, ತಪ್ಪು ದಾರಿಗೆಳೆಯುವ, ಬ್ರ್ಯಾಂಡ್‌ನ ಮಾನಹಾನಿಕರ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸುತ್ತಿದ್ದು, ಇಂತಹ ದುರುದ್ದೇಶಪೂರಿತ ಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಬದ್ಧವಾಗಿದೆ ಎಂದು ಕೆಎಂಎಫ್‌ಎಚ್ಚರಿಸಿದೆ.

## ಕೆ.ಆರ್. ಮಾರುಕಟ್ಟೆ: ಪಾರ್ಕಿಂಗ್ ಅತ್ಯಾಧುನಿಕ ತಂತ್ರಜ್ಞಾನ ಬಳಕೆ

• ಉದಯವಾಹಿನಿ, ಬೆಂಗಳೂರು

ಕೆ.ಆರ್. ಮಾರುಕಟ್ಟೆಯಲ್ಲಿ ಅತ್ಯಾಧುನಿಕ ಪಾರ್ಕಿಂಗ್ ತಂತ್ರಜ್ಞಾನ ವ್ಯವಸ್ಥೆ ಜಾರಿಗೊಳಿಸುತ್ತಿದ್ದು, ಬಾಕಿ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚಿಸಿದರು. ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಕೆ.ಆರ್. ಮಾರುಕಟ್ಟೆಗೆ ಮಂಗಳವಾರ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೆ.ಆರ್. ಮಾರುಕಟ್ಟೆಯ ತಳಮಹಡಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಪಾರ್ಕಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಶೇ 90ರಷ್ಟು ಕಾಮಗಾರಿ ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಯನ್ನು ತ್ವರಿತವಾಗಿ ಮುಗಿಸಿ ಸಾರ್ವಜನಿಕರ ಉಪಯೋಗಕ್ಕೆ ಒದಗಿಸಲು ಸೂಚಿಸಿದರು.

## ಕಟ್ಟಾ ಕಾಂಗ್ರೆಸ್ಸಿಗರು ಬೀದಿ ನಾಯಿಗಳಲ್ಲ, ನಿಯತ್ತಿನ ನಾಯಿಗಳು : ಡಿಕೆಎಸ್

• ಉದಯವಾಹಿನಿ, ಬೆಂಗಳೂರು

ಕಟ್ಟಾ ಕಾಂಗ್ರೆಸ್ಸಿಗರು, ಯಾರೂ ಕೂಡ ಬೀದಿನಾಯಿಗಳಲ್ಲ. ನಿಯತ್ತಿನ ನಾಯಿಗಳೇ ಹೊರತು ಬೀದಿ ನಾಯಿಗಳಲ್ಲ ಎಂದು ಹೇಳುವ ಮೂಲಕ ಮಾಜಿ ಸಂಸದ ಡಿ.ಕೆ. ಸುರೇಶ್ ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪಗೆ ತಿರುಗೇಟು ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಕಾಂಗ್ರೆಸಿಗರು ಯಾರೂ ನಾಯಿಗಳಲ್ಲ ಎಂದಿದ್ದಾರೆ. ಡಿ.ಕೆ.ಸುರೇಶ್ ಅವರು ಕಟ್ಟಾ ಕಾಂಗ್ರೆಸ್ಸಿಗರು ಎಂದು ಪದ ಬಳಕೆ ಮಾಡುವ ಮೂಲಕ ಕಾಂಗ್ರೆಸ್ ಪಕ್ಷದಲ್ಲಿರುವ ಮೂಲ ನಿವಾಸಿಗಳು ಮತ್ತು ವಲಸಿಗರ ನಡುವಿನ ಮುಸುಕಿನ ಗುದ್ದಾಟವನ್ನು ಪರೋಕ್ಷವಾಗಿ ಹೊರಹಾಕಿದ್ದಾರೆ.

ನಾಯಕತ್ವದ ಬದಲಾವಣೆ ಕುರಿತು ಪ್ರತಿಕ್ರಿಯೆ ನೀಡುವ ಸಂದರ್ಭದಲ್ಲಿ ಮಹದೇವಪ್ಪ, ಹೈಕೋರ್ಟ್ ನಾಯಿಗಳನ್ನು ಹಿಡಿದು ಹಾಕಲು ಆದೇಶ ನೀಡಿದೆ ಎಂದಿದ್ದರು. ಇದು ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಮಹದೇವಪ್ಪ ಹೇಳಿಕೆಗೆ ಅಷ್ಟೇ ತಣ್ಣಗೆ ಉತ್ತರಿಸಿರುವ ಡಿ.ಕೆ.ಸುರೇಶ್, ನಾಯಿಗೆ ಇರುವ ನಿಯತ್ತು ನಿನಗಿಲ್ಲ ಎಂದು ಹಳ್ಳಿಗಳಲ್ಲಿ ಬೈಯುವುದನ್ನು ಕೇಳಿದ್ದೇವೆ ಎಂದು ಹೇಳಿದ್ದಾರ. ನಾಯಿಗಳು ನಿಯತ್ತಿಗೆ ಹೆಸರುವಾಸಿಯಾಗಿವೆ. ಋಣವನ್ನು ನೆನಪಿನಲ್ಲಿ ಇಟ್ಟುಕೊಂಡು ಯಜಮಾನನ ಋಣ ತೀರಿಸುತ್ತವೆ. ಕೆಲವರು ಮನೆಯಲ್ಲಿ ನಾಯಿಗಳನ್ನು ಸಾಕುತ್ತಾರೆ.



ಬೀದಿ ನಾಯಿಗಳೂ ಇರುತ್ತವೆ. ನಾಯಿಗಳಿಗೆ ಇರುವ ನಿಯತ್ತು ಹೆಚ್ಚು ಜನಪ್ರಿಯತೆ ಪಡೆದಿದೆ ಎಂದರು. ಸಚಿವ ಮಹದೇವಪ್ಪ ಯಾವ ಅರ್ಥದಲ್ಲಿ, ಯಾರನ್ನು ಕುರಿತು ಹೇಳಿದ್ದಾರೋ ನನಗೆ ಗೊತ್ತಿಲ್ಲ. ನಾಯಿ ಸಾಕುವುದೇ ನಮನ್ನು ಕಾಪಾಡುತ್ತದೆ ಎಂಬ ಕಾರಣಕ್ಕೆ. ಅದರ ಬಗ್ಗೆ ಹೆಚ್ಚು ವ್ಯಾಖ್ಯಾನ ಬೇಕಿಲ್ಲ ಎಂದರು.


ಕೆಎಂಎಫ್‌ನ ನಂದಿನಿ ಬ್ರ್ಯಾಂಡ್ ವಿರುದ್ಧ ಕೆಲವು ಕಿಡಿಗೇಡಿಗಳು ಕಾಲ ಕಾಲಕ್ಕೆ ಅಪಪ್ರಚಾರ ಮಾಡುತ್ತಿದ್ದಾರೆ. ಹಾಲು ಒಕ್ಕೂಟದ ಸಭೆ ಕರೆದು ಅಂತ ಅವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ನಿರ್ಣಯ ಕೈಗೊಳ್ಳಲಾಗುವುದು ಎಂದರು.

ನಂದಿನಿ ಮೊದಲಿನಿಂದಲೂ ಗುಣಮಟ್ಟವನ್ನು ಕಾಯ್ದುಕೊಂಡಿದೆ. ಗ್ರಾಹಕರಿಗೆ, ರೈತರಿಗೆ ಯಾವತ್ತು ಅನ್ಯಾಯ ಮಾಡಿಲ್ಲ ವ್ಯಾಪಾರದ ಪ್ರತಿಸ್ಪರ್ಧಿಗಳು ಈ ರೀತಿ ಅಪಪ್ರಚಾರದ ಪ್ರಯತ್ನಗಳನ್ನು ಮಾಡಿರಬಹುದು. ಅದನ್ನು ಸಮರ್ಥವಾಗಿ ನಿಭಾಯಿಸಲಾಗುವುದು ಎಂದರು. ಶಾಸಕರ ವಿದೇಶಿ ಪ್ರವಾಸದ ಬಗ್ಗೆ ಅಪಾರ್ಥ ಕಲ್ಪಿಸುವುದು ಬೇಡ. ಗೊಂದಲದ ನಡುವೆ ಈ ದೇಶಕ್ಕೆ ಹೋದರೆ ಮನಸ್ಸಿಗೆ ಸಮಾಧಾನವಾಗುತ್ತದೆ. ಕೆಲವರು ಅಧ್ಯಯನಕ್ಕೆ, ಇನ್ನು ಕೆಲವರು ದೇಶ ನೋಡಬೇಕೆಂದು, ಮತ್ತೆ ಕೆಲವರು ಸಂತೋಷಕ್ಕೆ ವಿದೇಶಿ ಪ್ರವಾಸ ಹೋಗುತ್ತಾರೆ ಎಂದರು.

## ರೈಲ್ವೆ ಕೋಚಿಂಗ್ ಟರ್ಮಿನಲ್ ರಾಜ್ಯದಲ್ಲಿ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

ದೇಶದಲ್ಲೇ ಅತೀ ದೊಡ್ಡದಾದ ರೈಲ್ವೆ ಕೋಚಿಂಗ್ ಟರ್ಮಿನಲ್ ಅನ್ನು ರಾಜ್ಯದಲ್ಲಿ ನಿರ್ಮಾಣ ಮಾಡಲಿದ್ದು, ರೈಲ್ವೆ ಯೋಜನೆಗೆ ಇದು ಹೊಸ ಮುನ್ನುಡಿ ಬರೆಯಲಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿದರು. ನಗರದ ನಾಯಂಡಹಳ್ಳಿ ರೈಲು ನಿಲ್ದಾಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಯಲಹಂಕದಲ್ಲಿ 5,754 ಕೋಟಿ ರೂಪಾಯಿ ವೆಚ್ಚದಲ್ಲಿ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಾಣವಾಗಲಿದ್ದು, ಇದು ಭಾರತದ ಅತಿದೊಡ್ಡ ಕೋಚಿಂಗ್ ಟರ್ಮಿನಲ್ ಆಗಲಿದೆ ಎಂದು ತಿಳಿಸಿದರು. ಈ ಮೊದಲು ಯೋಜನೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಆರಂಭಿಸಲು ಉದ್ದೇಶಿಸಲಾಗಿತ್ತು. ಆದರೆ ಈ ಪ್ರದೇಶವು ದೂರ ಎಂಬ ಕಾರಣಕ್ಕಾಗಿ ಯಲಹಂಕದಲ್ಲೇ ಪ್ರಾರಂಭಿಸಲು ಕೇಂದ್ರ ರೈಲ್ವೆ ಮಂಡಳಿಯು ತೀರ್ಮಾನಿಸಿದೆ. ಕೇಂದ್ರ ಸರ್ಕಾರವು ರಾಜ್ಯದ ರೈಲ್ವೆ ಯೋಜನೆಗಳಿಗೆ ಹಣ ನೀಡುತ್ತಿಲ್ಲ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆರೋಪದಲ್ಲಿ ಸತ್ಯಾಂಶವಿಲ್ಲ. ವಾಸ್ತವವಾಗಿ ಹೇಳಬೇಕಾದರೆ ರಾಜ್ಯ ಸರ್ಕಾರವು ರೈಲ್ವೆ ಯೋಜನೆಗೆ ಅಸಹಕಾರ ನೀಡುತ್ತದೆ. ಇವರ ಬಳಿ ಹಣ ಇಲ್ಲವೇ? ಎಂದು ಪ್ರಶ್ನಿಸಿದರು. ಹಿಂದಿನಂತೆ ನಾವು ಗುದ್ದಲಿ ಪೂಜೆ ಮಾಡುವುದು ಒಬ್ಬರು, ಉದ್ಘಾಟನೆ ಮಾಡುವುದು ಇನ್ನೊಬ್ಬರು ಎಂಬ ನೀತಿ ಹೋಗಿದೆ. ಗುದ್ದಲಿ ಪೂಜೆ ಮಾಡುವುದೂ ನಾವೇ, ಉದ್ಘಾಟನೆ ಮಾಡುವುದೂ ನಾವೇ. ಇದು ಪ್ರಧಾನಿ ನರೇಂದ್ರ ಮೋದಿಯವರ ನೀತಿ ಎಂದು ತಿಳಿಸಿದರು. ಕೇಂದ್ರ ಸರ್ಕಾರ ರಾಜ್ಯದ ರೈಲ್ವೆ ಯೋಜನೆಗಳಿಗೆ ಸಂಪೂರ್ಣವಾಗಿ ಸಹಕಾರ ನೀಡುತ್ತಿದೆ. ತುಮಕೂರು-ಬೆಂಗಳೂರು ನಡುವೆ ನಾಲ್ಕು ಪಥದ ರೈಲ್ವೆಹಳಿಗೆ ಅನುಮೋದನೆ ನೀಡಲಾಗಿದೆ. ಇದೇ ರೀತಿ ಮೆಜೆಸ್ಟಿಕ್ ಹಾಗೂ ವೈಟ್‌ಫೀಲ್ಡ್ ನಡುವೆ ಕೂಡ ನಾಲ್ಕು ಪಥದ ಟ್ರ್ಯಾಕ್ ಆಗಲಿದೆ ಎಂದು ವಿವರಿಸಿದರು. ಯಶವಂತಪುರ ರೈಲ್ವೆ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು 485 ಕೋಟಿ ರೂ ಹಣವನ್ನು ಖರ್ಚು ಮಾಡುತ್ತಿದ್ದೇವೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಯಾವ ರೀತಿ ಅನ್ಯಾಯ ಮಾಡಿದೆ ಎಂದು ಸೋಮಣ್ಣ ಪ್ರಶ್ನೆ ಮಾಡಿದರು.



## ಸಿದ್ದರಾಮಯ್ಯನವರ ಆಡಳಿತಕ್ಕೆ ಜನ ಛೀ..ಥೂ.. ಎನ್ನುತ್ತಿದ್ದಾರೆ : ವಿಶ್ವನಾಥ್


• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯನವರ ಆಡಳಿತ ವೈಖರಿ ನೋಡಿ ಜನ ಛೀ.. ಥೂ.. ಎನ್ನುತ್ತಿದ್ದಾರೆ. ಇಂಥ ಆಡಳಿತ ಕೊಡಲು ನಿಮಗೆ ನಾಚಿಕೆಯಾಗುವುದಿಲ್ಲವೇ? ಎಂದು ವಿಧಾನಪರಿಷತ್ ಸದಸ್ಯ ಎಚ್.ವಿಶ್ವನಾಥ್ ಏಕವಚನದಲ್ಲಿಯೇ ವಾಗ್ದಾಳಿ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇ.ಡಿ.ಯಿಂದ ಬಂಧಿತನಾಗಿ ಅಮಾನತುಗೊಂಡು ಜೈಲಿನಲ್ಲಿರುವ ಆರೋಪಿಗೆ ಮುಂಬಡ್ತಿ ನೀಡಲು ಲಂಚ ಕೊಟ್ಟಿದ್ದಾರೆ ಎಂದರೆ ಇದಕ್ಕಿಂತ ನಾಚಿಕೆಗೇಡಿನ ಸಂಗತಿ ಏನಿದೆ ಎಂದು ಪ್ರಶ್ನಿಸಿದರು. ನಟೇಶ್‌ಗೆ ಪ್ರಮೋಷನ್ ಕೊಡಲು ಲಂಚ ಕೊಟ್ಟಿದ್ದಾರೆ ಎಂದು ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ. ಆತ ಅತ್ಯಂತ ಭ್ರಷ್ಟ ಅಧಿಕಾರಿ. ಅಂಥವನನ್ನು ರಕ್ಷಣೆ ಮಾಡುವ ಕೆಲಸ ಇದೇ ಸಿದ್ದರಾಮಯ್ಯನವರಿಂದ ನಡೆಯಿತು. ಇದು ಅವರ ಆಡಳಿತ ವೈಖರಿ ಎಂದು ವ್ಯಂಗ್ಯವಾಡಿದರು.

ಇಂಥ ಭ್ರಷ್ಟನನ್ನು ಕಾಂಗ್ರೆಸ್ ಸರ್ಕಾರ ಬಂಧಿಸಲಿಲ್ಲ. ಆತನ ಬಂಧನವಾದರೆ ನನ್ನ ಬುಡಕ್ಕೆ ಬರಬಹುದೆಂದು ಸಿದ್ದರಾಮಯ್ಯ ಎಲ್ಲಾ ಹಂತದಲ್ಲೂ ರಕ್ಷಣೆ ಮಾಡಿದರು. ಮೈಸೂರನ್ನು ಸಂಪೂರ್ಣವಾಗಿ ಹಾಳು ಮಾಡಿದ್ದೀಯಾ, ತನಿಖೆ ನಡೆಯುತ್ತಿದ್ದರೂ ಒಬ್ಬ ಅಧಿಕಾರಿಗೆ ಮುಂಬಡ್ತಿ ನೀಡಿರುವ ನಿದರ್ಶನ ದೇಶದಲ್ಲಿ ಎಲ್ಲಿಯಾದರೂ ಇದೆಯೇ ಎಂದು ಪ್ರಶ್ನಿಸಿದರು. ನಟೇಶ್ ಒಬ್ಬ ಮೋಸ್ಟ್ ಕರಪ್ಟ್, ಹೀಸ್ ಬಾಸ್ಟೆಡ್ ಎಂದು ಆಕ್ರೋಶ ವ್ಯಕ್ತಪಡಿಸಿದ ವಿಶ್ವನಾಥ್, ಕಳ್ಳ ಸೈಟ್ ಕದ್ದಿದ್ದೀಯಾ? ಮುಡಾ ಹಾಳು ಮಾಡಿದ್ದೀಯಾ ಎಂದು ಪ್ರಮೋಷನ್ ಕೊಟ್ಟಿರಬಹುದು. ಥೂ.. ಥೂ.. ಅವರ ಆಡಳಿತ ನೋಡಿದರೆ ನಗೆಪಾಟಲಿಗೆ ಗುರಿಯಾಗಿದ್ದಾರೆ.





ಇದು ನಿನ್ನ ಆಡಳಿತ ವೈಖರಿಯೇ ಎಂದು ತರಾಟೆಗೆ ತೆಗೆದುಕೊಂಡರು.


ಕಾಂಗ್ರೆಸ್ ಶಾಸಕರಿಂದ ವಿದೇಶಿ ಪ್ರವಾಸ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕರ್ನಾಟಕದ ರಾಜಕಾರಣ ಅಧೋಗತಿಗೆ ಹೋಗಿದೆ. ಇವರ ಆಡಳಿತ ನೋಡಿ ಜನ ನಗುತ್ತಿದ್ದಾರೆ.

ಶಾಸಕರು ವಿದೇಶಿ ಪ್ರವಾಸಕ್ಕೆ ಯಾಕೆ ಹೋಗುತ್ತಾರೆಂದು ತಿಳಿದುಕೊಳ್ಳದಷ್ಟು ಜನರೇನು ದಡ್ಡರಲ್ಲ ಕರ್ನಾಟದಲ್ಲಿ 90% ಸಾಕ್ಷರತೆ ಇದೆ. ಜನರಿಗೆ ನೀವು ಏನ್ ಮಾಡುತ್ತೀರಾ ಅರ್ಥ ಆಗುತ್ತದೆ. ಜನರನ್ನ ಸಿದ್ದರಾಮಯ್ಯ ಮೂರ್ಖರನ್ನಾಗಿ ಮಾಡಲು ಸಾಧ್ಯವಿಲ್ಲ ಎಂದರು.

## ಮೂಡಾ ಮಾಜಿ ಆಯುಕ್ತರ ವಿರುದ್ಧ ಸ್ನೇಹಮಯಿ ಕೃಷ್ಣ ಆರೋಪ

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಿಂದಿನ ಆಯುಕ್ತರಾದ ಡಿ.ಬಿ.ನಟೇಶ್ ರವರು, ಬಡ್ತಿ ಪಡೆಯುವ ಸಲುವಾಗಿ ಕೋಟ್ಯಂತರ ರೂಪಾಯಿ ಹಣ ಕೊಟ್ಟಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.



**ಅಧಿಕಾರಿಗಳ ಗಮನಕ್ಕೆ ಬಂದಿರಲಿಲ್ಲವೇ?**

**ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಆಗಿದ್ದ ಡಿ.ಬಿ.ನಟೇಶ್‌ರವರು ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಪಾರ್ವತಿ ಬಿ.ಎಂ.ರವರಿಗೆ ಅಕ್ರಮ ಲಾಭ ಮಾಡಿಕೊಡುವ ಉದ್ದೇಶ ಹೊಂದಿದ್ದರು. ಭ್ರಷ್ಟಚಾರ ಪ್ರತಿಬಂಧಕ ಕಾಯಿದೆ 1968 (ತಿದ್ದುಪಡಿ ಕಾಯಿದೆ 2018) ರ ಕಲಂ 13(1)(ಎ)ರ ಪ್ರಕಾರ ನಟೇಶ್ ಗಂಭೀರ ಅಪರಾಧ ಮಾಡಿದ್ದಾರೆ. 2024ರ ಅಕ್ಟೋಬರ್ 1ರಂದು ತನಿಖಾಧಿಕಾರಿ ಬರೆದ ಪತ್ರ ಆಧರಿಸಿ ಡಿ.ಬಿ.ನಟೇಶ್ ವಿರುದ್ಧ ವಿಚಾರಣೆಗೆ ಪೂರ್ವಾನುಮತಿ ನೀಡಲಾಗಿತ್ತೆ. ತನಿಖಾಧಿಕಾರಿ ಬರೆದಿರುವ ಪತ್ರದ ಬಗ್ಗೆ ಬಡ್ತಿ ನೀಡುವ ಅಧಿಕಾರಿಗಳ ಗಮನಕ್ಕೆ ಬಂದಿರಲಿಲ್ಲವೇ ಎಂದು ಪ್ರಶ್ನಿಸಿದ್ದಾರೆ.**

ಸರ್ಕಾರದ ಮುಖ್ಯಕಾರ್ಯದರ್ಶಿಯವರಿಗೆ ಪತ್ರ ಬರೆದಿರುವ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಆಯುಕ್ತರಾಗಿದ್ದ ಡಿ.ಬಿ.ನಟೇಶ್‌ರವರು ಸರ್ಕಾರದ ಆಸ್ತಿಯನ್ನು ದುರ್ಬಳಕೆ ಮಾಡಿಕೊಂಡು, ಕಲಂ 13(1)(ಎ) ಭ್ರಷ್ಟಚಾರ ಪ್ರತಿಬಂಧಕ ಕಾಯಿದೆ 1988 (ತಿದ್ದುಪಡಿ ಕಾಯಿದೆ 2018) ರೀತ್ಯಾ ಅಪರಾಧ ಕೃತ್ಯ ಎಸಗಿದ್ದಾರೆ ಎಂದು ತನಿಖಾಧಿಕಾರಿ ತಿಳಿಸಿದ್ದಾರೆ. ಈ ಬಗ್ಗೆ ಸರ್ಕಾರಕ್ಕೆ ಪತ್ರವನ್ನು ಬರೆದಿದ್ದಾರೆ ಎಂದು ತಿಳಿಸಿದ್ದಾರೆ.

ಡಿ.ಬಿ.ನಟೇಶ್ ಅವರನ್ನು ಇಲಾಖಾ ವಿಚಾರಣೆಗೆ ಒಳಪಡಿಸಿ, ವರದಿ ಪಡೆದುಕೊಂಡು ಸರ್ಕಾರದ ಕೆಲಸದಿಂದ ವಜಾ ಮಾಡಬೇಕಿತ್ತು. ಆದರೆ ಅದಕ್ಕೆ ವ್ಯತಿರಿಕ್ತವಾಗಿ ಕೋಟ್ಯಾಂತರ ರೂಪಾಯಿ ಹಣ ಪಡೆದು, ಬಡ್ತಿ ಕೊಡಿಸುವ ಮೂಲಕ ಅಕ್ರಮ, ಭ್ರಷ್ಟಚಾರ ನಡೆಸಿ, ಸಾರ್ವಜನಿಕರ (ಸರ್ಕಾರದ) ಆಸ್ತಿಯನ್ನು ಕಬಳಿಸಿರುವವರಿಗೆ ಪರೋಕ್ಷವಾಗಿ ರಕ್ಷಣೆ ನೀಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ನಟೇಶ್ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳದೆ, ರಕ್ಷಣೆ ಮಾಡಿರುವ ಉದ್ದೇಶವೇನು ಇದನ್ನು ಏಕೆ ಹೈಕೋರ್ಟ್‌ನಲ್ಲಿ ಪ್ರಶ್ನಿಸಬಾರದು. ಡಿ.ಬಿ.ನಟೇಶ್‌ರವರಿಂದ ಕೋಟ್ಯಂತರ ರೂಪಾಯಿ ಹಣ ಪಡೆಯಲಾಗಿದೆ. 2026ರ ಫೆಬ್ರವರಿ 9ರಂದು ಲಂಚ ನೀಡುವ ಸಲುವಾಗಿ ಕೋಟ್ಯಂತರ ರೂಪಾಯಿಯನ್ನು, ಯಾವ ಸಂಖ್ಯೆಯ, ಯಾವ ವಾಹನದಲ್ಲಿ ಸಾಗಿಸಲಾಯಿತು ಯಾರ ಮುಖಾಂತರ ವ್ಯವಹಾರ ನಡೆಯಿತು ಎಂಬುದಕ್ಕೆ ಸಂಬಂಧಿಸಿದ ಸಾಕ್ಷ್ಯಾಧಾರಗಳು ನನ್ನ ಬಳಿ ಇವೆ. ಅದು ಸುಳ್ಳಾಗಿದ್ದರೆ ಹೆಸರು ದುರ್ಬಳಕೆ ಮಾಡಿಕೊಂಡಿರುವವರ ವಿರುದ್ಧ ದೂರು ನೀಡುವಂತೆ ಒತ್ತಾಯಿಸಿದ್ದಾರೆ.

## ಫೆ. 20ಕ್ಕೆ ರಾಜ್ಯಾದ್ಯಂತ ಸಾರಿಗೆ ಮುಷ್ಕರ

• ಉದಯವಾಹಿನಿ, ಬೆಂಗಳೂರು

ವೇತನ ಹಿಂಬಾಕಿ ಮತ್ತು ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಎಸ್‌ಆರ್‌ಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳ ನೌಕರರು ಫೆ.20ರಂದು ರಾಜ್ಯಾದ್ಯಾಂತ ಮುಷ್ಕರ ನಡೆಸಲು ಮುಂದಾಗಿದ್ದಾರೆ. ಸಾರಿಗೆ ನೌಕರರ ಮುಖಂಡ ಅನಂತ್ ಸುಬ್ಬರಾವ್ ನಿಧನದ ಹಿನ್ನೆಲೆ ಕಳೆದ ಬಾರಿ ಬೆಂಗಳೂರು ಚಲೋ ಮುಂದೂಡಿಕೆ ಮಾಡಲಾಗಿತ್ತು.

ಆದರೆ ಈ ಬಾರಿ ಮುಷ್ಕರದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ದೃಢ ನಿರ್ಧಾರ ಮಾಡಿದ್ದು, ಭಾರೀ ಪ್ರತಿಭಟನೆಗೆ ಮುಂದಾಗಿದೆ. 38 ತಿಂಗಳ ಹಿಂಬಾಕಿ ಹಣ, 2024ರ ಜನವರಿ 1ಕ್ಕೆ ಅನ್ವಯವಾಗುವಂತೆ ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಯನ್ನು ಮುಂದಿಟ್ಟುಕೊಂಡು ಸಾರಿಗೆ ಇಲಾಖೆಯೇ ನೌಕರರು ಮತ್ತೆ ಮುಷ್ಕರ ನಡೆಸಲು ತೀರ್ಮಾನಿಸಿದ್ದಾರೆ. ಫೆಬ್ರವರಿ 20ರಿಂದ ಕೆಎಸ್‌ಆರ್‌ಟಿಸಿಯ 4 ನಿಗಮದ ನೌಕರರು ಪ್ರತಿಭಟನೆಗೆ ಇಳಿಯುವ ಸಾಧ್ಯತೆ ಇದೆ. ವೇತನ ಪರಿಷ್ಕರಣೆ ಹಾಗೂ ದೀರ್ಘಕಾಲದಿಂದ ಬಾಕಿ ಇರುವ ಬೇಡಿಕೆಗಳನ್ನು ಈಡೇರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ, ಬೆಂಗಳೂರು ಚಲೋಗೆ ಕರೆ ನೀಡಿದ್ದಾರೆ.




ರಾಜ್ಯದ ಮೂಲೆ ಮೂಲೆಗಳಿಂದ ಬರುವ ಸಾವಿರಾರು ಸಾರಿಗೆ ನೌಕರರು ಫ್ರೀಡಂಪಾರ್ಕ್‌ನಲ್ಲಿ ಜಮಾಯಿಸಲಿದ್ದಾರೆ. ಬಸ್ ಸಂಚಾರ ಸ್ಥಗಿತಗೊಳ್ಳುವ ಬಗ್ಗೆ ಯಾವುದೇ ಆದೇಶ ಹೊರ ಬಂದಿಲ್ಲ. ಹೀಗಾಗಿ ಬಸ್‌ಗಳ ಓಡಾಟ ಎಂದಿನಂತೆ ಇರಲಿದೆ. ಆದರೆ, ನೌಕರರು ಕೆಲಸ ಹಾಜರಾಗದಿದ್ದರೆ, ಬಸ್‌ಗಳ ಓಡಾಟದಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ.

# ರಾಜಧಾನಿಯಲ್ಲಿ ಹೆಚ್ಚಿದ ತ್ಯಾಜ್ಯ ನೀರಿನ ಮರುಬಳಕೆ

● ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ● 750ರಿಂದ 1 ಸಾವಿರ ದಶಲಕ್ಷ ಲೀಟರ್‌ಗೆ ಹೆಚ್ಚಿದ ಬಳಕೆ ಪ್ರಮಾಣ

• ಉದಯವಾಹಿನಿ, ಬೆಂಗಳೂರು

ಸಂಸ್ಕರಿಸಿದ ತ್ಯಾಜ್ಯ ನೀರಿನ ಮರುಬಳಕೆ ಹೆಚ್ಚಿಸುವಲ್ಲಿ ಜಲಮಂಡಳಿಯು ಗಮನಾರ್ಹ ಪ್ರಗತಿ ಸಾಧಿಸಿದ್ದು, ಪ್ರಸ್ತುತ ಪ್ರತಿನಿತ್ಯ ಸುಮಾರು 1 ಸಾವಿರ ದಶಲಕ್ಷ ಲೀಟರ್ ಮರುಬಳಕೆಯಾಗುತ್ತಿದೆ. ಬೇಸಿಗೆಯಲ್ಲಿ ನೀರಿನ ಸಮಸ್ಯೆ ನೀಗಿಸಲು ಜಲಮಂಡಳಿ ಸಿದ್ಧತೆ ಆರಂಭಗೊಂಡಿದೆ. 11,894 ಕಿ.ಮೀ.ಗೂ ಹೆಚ್ಚು ಉದ್ದದ ಒಳ ಚರಂಡಿಗಳನ್ನು ನಿರ್ವಹಣೆ ಮಾಡುತ್ತಿರುವ ಜಲಮಂಡಳಿ, 100 ಕಿ.ಮೀ. ದೂರದ ಕಾವೇರಿಯಿಂದ ನಗರಕ್ಕೆ ನಿತ್ಯ 2,225 ಎಂಎಲ್‌ಡಿ ನೀರು ಪೂರೈಸುತ್ತಿದೆ. ಇದರಲ್ಲಿ ಶೇ. 85ರಿಂದ 90ರಷ್ಟು ನೀರು ಕೊಳಚೆಯಾಗಿ ಮಾರ್ಪಟ್ಟು ಮನೆಗಳಿಂದ ಹೊರಬರುತ್ತಿದೆ. ಸದ್ಯ ಇರುವ 34 ಅತ್ಯಾಧುನಿಕ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಿಂದ 1,348 ಎಂಎಲ್‌ಡಿ ಸಂಸ್ಕರಣೆ ಆಗುತ್ತಿದೆ. ಇನ್ನು ಸುಮಾರು 900 ಹೆಚ್ಚುವರಿ ತ್ಯಾಜ್ಯ ನೀರಿನ ಸಂಸ್ಕರಣೆಗೆ ಹಲವೆಡೆ ಹೊಸದಾಗಿ ಎಸ್‌ಟಿಪಿಗಳನ್ನು ನಿರ್ಮಿಸಲಾಗುತ್ತಿದೆ. ಜಲಮಂಡಳಿಯು ಸಂಸ್ಕರಿಸುವ ತ್ಯಾಜ್ಯ ನೀರಿನ ಪ್ರಮಾಣ ಹೆಚ್ಚಳವಾಗುತ್ತಿದ್ದು, ಕೆರೆಗಳನ್ನು ತುಂಬಿಸಲು ನಿತ್ಯ ಸುಮಾರು 950 ಎಂಎಲ್‌ಡಿಯನ್ನು ಪೂರೈಸಲಾಗುತ್ತಿದೆ.

ಎರಡು ವರ್ಷಗಳ ಹಿಂದೆ ಸಂಸ್ಕರಿಸಿದ ಒಟ್ಟು ನೀರಿನಲ್ಲಿ ಸುಮಾರು 750 ಎಂಎಲ್‌ಡಿಯಷ್ಟು ಮರುಬಳಕೆ ಆಗುತ್ತಿತ್ತು. 2024ರ ಬೇಸಿಗೆಯಲ್ಲಿ ಬರದ ಪರಿಣಾಮ ಕುಡಿಯುವ ನೀರಿಗೆ ತೀವ್ರ ಹಾಹಾಕಾರ ಸೃಷ್ಟಿಯಾಯಿತು. ಈ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು ಯೋಜನೆ ರೂಪಿಸಿದ ಜಲಮಂಡಳಿಯು, ಅನ್ಯ ಉದ್ದೇಶಕ್ಕೆ, ಅಂತರ್ಜಲ ಮಟ್ಟ ಹೆಚ್ಚಿಸಲು ನಗರದ ಕೆರೆಗಳಿಗೆ ನೀರು ತುಂಬಿಸಲು ಮುಂದಾಯಿತು. ಪರಿಣಾಮ ಪ್ರಸ್ತುತ 1 ಸಾವಿರ ಎಂಎಲ್‌ಡಿ ಸಂಸ್ಕರಿತ ನೀರು ಮರು ಬಳಕೆಯಾಗುತ್ತಿದೆ.

ಜಲಮಂಡಳಿಯು ಗೃಹ ಬಳಕೆಯ ತ್ಯಾಜ್ಯ ನೀರನ್ನು ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ ಮಾನದಂಡಗಳ ಮಿತಿಯೊಳಗೆ ಸಂಸ್ಕರಿಸುತ್ತದೆ. ಕೋರಮಂಗಲ, ಚಲ್ಲಘಟ್ಟ ಕಣಿವೆಯಲ್ಲಿರುವ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಲ್ಲಿ ತ್ಯಾಜ್ಯ ನೀರನ್ನು ಸಂಸ್ಕರಿಸಲಾಗುತ್ತಿದೆ. ಭಾರತೀಯ ವಿಜ್ಞಾನ ಸಂಸ್ಥೆಯ ನೇತೃತ್ವದಲ್ಲಿ ತಜ್ಞರ ಸಮಿತಿಯು ಐದು ವರ್ಷಗಳಿಂದ ಅಧ್ಯಯನ ನಡೆಸಿ, ನಿಗಾ ವಹಿಸಿದೆ.

**ನೆರೆ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರು:** ಜಲಮಂಡಳಿ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ನೀರನ್ನು ಅಕ್ಕಪಕ್ಕದ ಜಿಲ್ಲೆಗಳು ಹಾಗೂ ನಗರದ ಕೆರೆಗಳನ್ನು ತುಂಬಿಸಲು ಬಳಸುತ್ತಿದೆ. 572 ಕೆರೆಗಳನ್ನು ತುಂಬಿಸಲಾಗುತ್ತಿದ್ದು, ಇದಕ್ಕೆ 950 ಎಂಎಲ್‌ಡಿ ಬಳಕೆಯಾಗುತ್ತಿದೆ. ಕೋಲಾರ ಜಿಲ್ಲೆಯ 415 ಕೆರೆಗಳನ್ನು ತುಂಬಿಸಲು ಸುಮಾರು 440 ಎಂಎಲ್‌ಡಿ ಮೀಸಲಿದ್ದು, ಇದರಲ್ಲಿ ಈಗಾಗಲೇ ಮೊದಲ ಹಂತದಲ್ಲಿ 145 ಕೆರೆಗಳನ್ನು ತುಂಬಿಸಲಾಗಿದೆ. ಎರಡನೇ ಹಂತದಲ್ಲಿ 270 ಕೆರೆಗಳನ್ನು ತುಂಬಿಸುವ ಕೆಲಸ ಆರಂಭವಾಗಬೇಕಿದೆ.

950 ಎಂಎಲ್‌ಡಿ ಬಳಕೆ




**ಮಾಸಿಕ 60 ಲಕ್ಷ ರೂ. ಆದಾಯ ನಿರೀಕ್ಷೆ**

**ಬೆಂಗಳೂರು ನಗರದ ಜತೆಗೆ ನೆರೆಯ ಜಿಲ್ಲೆಗಳ ಕೆರೆಗಳನ್ನು ತುಂಬಿಸಲು ಸಂಸ್ಕರಿತ ನೀರು ಹೆಚ್ಚಿನ ಪ್ರಮಾಣದಲ್ಲಿ ಬಳಕೆಯಾಗುತ್ತಿದೆ. ಇದರಿಂದ ಆಯಾ ಭಾಗದಲ್ಲಿ 1,500 ಅಡಿ ಕೆಳಗಿದ್ದ ಅಂತರ್ಜಲ ಮಟ್ಟ ಸುಮಾರು 350ರಿಂದ 400 ಅಡಿ ಹೆಚ್ಚಿದೆ. ಬೆಂಗಳೂರು ನಗರದಲ್ಲಿ ಇನ್ನಷ್ಟು ಕೆರೆಗಳಿಗೆ ನೀರು ತುಂಬಿಸುವ ಯೋಜನೆಯೂ ಇದೆ. ಸಂಸ್ಕರಿಸಿದ ನೀರಿನಿಂದ ಮಾಸಿಕ 60 ಲಕ್ಷ ರೂ. ಆದಾಯದ ನಿರೀಕ್ಷೆಯಿದ್ದು, ವಾರ್ಷಿಕ ಅಂದಾಜು 8 ಕೋಟಿ ರೂ. ಆದಾಯವಿದೆ ಎಂದು ಜಲಮಂಡಳಿಯ ಹಿರಿಯ ಅಧಿಕಾರಿ ಮಾಹಿತಿ ನೀಡಿದರು.**

**ಕಂಪನಿ, ಕಾಮಗಾರಿಗೂ ಬಳಕೆ**

**ಕೇವಲ ಕೆರೆಗಳನ್ನು ತುಂಬಿಸಲು ಮಾತ್ರವಲ್ಲದೆ ವಿವಿಧ ಕಂಪನಿಗಳು, ಸರ್ಕಾರದ ಅಧೀನ ಸಂಸ್ಥೆಗಳ ಕೆಲಸ ಕಾರ್ಯಗಳಿಗೆ ಸಂಸ್ಕರಿತ ನೀರು ಸರಬರಾಜು ಆಗುತ್ತಿದೆ. ವಿಪ್ರೋ ಸೇರಿದಂತೆ ಕೆಲ ಐಟಿ ಕಂಪನಿಗಳಿಗೆ ತೃತೀಯ ಹಂತದ ಸಂಸ್ಕರಿತ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಅಲ್ಲದೆ, ಭಾರತೀಯ ವಾಯುನೆಲೆ, ಐಟಿಸಿ, ಬಿಇಎಲ್, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ವಿವಿಧ ಇಲಾಖೆಗಳ ಕಟ್ಟಡ, ರಸ್ತೆ ನಿರ್ಮಾಣ ಕಾಮಗಾರಿಗಳು, ಮನೆ ನಿರ್ಮಾಣಕ್ಕೂ ದ್ವಿತೀಯ ಹಂತದ ಸಂಸ್ಕರಿಸಿದ ನೀರು ಒದಗಿಸಲಾಗುತ್ತಿದೆ. ರಾಜಭವನ, ಬಹುಮಹಡಿ ಕಟ್ಟಡ, ರೇಸ್‌ಕೋರ್ಸ್‌ಗೆ ಕಬ್ಬನ್ ಪಾರ್ಕ್ ಎಸ್‌ಟಿಪಿಯಿಂದ ತೃತೀಯ ಹಂತದ ಸಂಸ್ಕರಿಸಿದ ನೀರು ಒದಗಿಸಲಾಗುತ್ತಿದೆ. ಇದಕ್ಕಾಗಿ ನಿತ್ಯ ಸುಮಾರು 15 ಎಂಎಲ್‌ಡಿ ಬಳಕೆಯಾಗುತ್ತಿದೆ. ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ 4 ಎಂಎಲ್‌ಡಿ ಸಂಸ್ಕರಿಸಿದ ನೀರು ಪೂರೈಸಲು ಯೋಜನೆ ರೂಪಿಸಲಾಗಿದೆ ಎಂದು ಜಲಮಂಡಳಿ ಅಧಿಕಾರಿಗಳು ಹೇಳಿದ್ದಾರೆ.**

# ಚಿಂಚೋಳಿ ರೈತರಿಗೆ ಬೆಳೆ ಪರಿಹಾರ 43ಕೋಟಿ ರೂ,ಹಾಗೂ 12.80ಕೊಟಿ ರೂ.ಬೆಳೆ ವಿಮೆ ಜಮಾವಣೆ; ಕೆಡಿಪಿ ಸಭೆಯಲ್ಲಿ ಪ್ರಸ್ತಾಪ

## ಯಂತ್ರೋಪಕರಣಗಳು ಮತ್ತು ರಸಗೊಬ್ಬರ ಕ್ರೀಮಿಕೀಟನಾಶಕ ಸಮರ್ಪಕವಗಿ ವಿತರಣೆ ಮಾಡಬೇಕು: ಡಾ.ಅವಿನಾಶ ಜಾಧವ

• ಉದಯವಾಹಿನಿ ಚಿಂಚೋಳಿ

ತಾಲ್ಲೂಕಿನ ರೈತರಿಗೆ ಬೆಳೆ ಪರಿಹಾರ 43 ಕೋಟಿ ರೂ, ಹಾಗೂ ಬೆಳೆವಿಮೆ ಮಧ್ಯಂತರ ಪರಿಹಾರವಾಗಿ 12.80ಕೋಟಿ ರೂ,ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಡಿಟಿಪಿ ಮೂಲಕ 28328 ರೈತರಿಗೆ ಜಮಾವಣೆಯಾಗಿದೆ, ಇನ್ನು ಎಫ್‌ಐಡಿ ಮಾಡದೆಯಿರುವ ರೈತರಿಗೆ ಜಮಾವಣೆಯಾಗಿಲ್ಲ ಎಂದು ಶಾಸಕ ಡಾ.ಅವಿನಾಶ ಜಾಧವ ಅವರಿಗೆ ಕೃಷಿ ಸಹಾಯಕ ನಿರ್ದೇಶಕ ವೀರಶೆಟ್ಟಿ ರಾಠೋಡ ಹೇಳಿದರು.

ಪಟ್ಟಣದ ತಾಪಂ.ಕಛೇರಿಯಲ್ಲಿ ಹಮ್ಮಿಕೊಂಡ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಶಾಸಕ ಡಾ.ಅವಿನಾಸ ಜಾಧವ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಾಲ್ಲೂಕಾಮಟ್ಟದ ಅಧಿಕಾರಿಗಳು ಸಮರ್ಪಕವಾಗಿ ವರದಿ ವಾಚನೆ ಮಾಡದೆಯಿರುವ ಅಧಿಕಾರಿಗಳಿಗೆ ಶಾಸಕ ಡಾ.ಅವಿನಾಶ ಜಾಧವ ತರಾಟೆಗೆ ತೆಗೆದುಕೊಂಡರು.

ಗ್ರಾಮೀಣ ಕಡಿಯುವ ನೀರು ಸರಬುರಾಜು ಇಲಾಖೆ ಎಇಇ ಉಮೇಶ ರಾಠೋಡ ವರದಿ ವಾಚನ ಮಾಡಿದರು,ಅದನ್ನು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಬಸವರಾಜ ಮಾಲಿ ಪ್ರಶ್ನೇಸಿ ಒಟ್ಟಾರೆ ಇಲಾಖೆಯಲ್ಲಿ 157ಕೋಟಿ ರೂ.ಗಳ ಕಾಮಗಾರಿ ಅಗಿದ್ದು ಅದರಲ್ಲಿ 108ಕೋಟಿ ರೂ.ಗಳ ಹಣ ಪಾವತಿಯಾಗಿದೆ ಕಾಮಗಾರಿ ಸಂಪೂರ್ಣ ಆದ ಗ್ರಾಮಗಳು ನನಗೆ ಶಾಸಕರಿಗೆ ತೋರಿಸಬೇಕು ಇದರಲ್ಲಿ ಸಂಪೂರ್ಣ ಹಣ ಕೊಳ್ಳೆ ಹೊಡೆಯಲಾಗಿದೆ ಎಂದು ಎಇಇಗೆ ತರಾಟೆಗೆ ತೆಗೆದುಕೋಂಡರು,ಲ್ಯಾಂಡ್ ಆರ್ಮಿ ಇಲಾಖೆ ಕಳ್ಳರ ಆರ್ಮಿ ಇಲಾಖೆಯಾಗಿದೆ ಎಂದು ತರಾಟೆಗೆ ತೆಗೆದುಕೋಂಡು ನಿಮ್ಮ ಪೂರ್ಣಗೊಂಡ ಕಾಮಗರಿಗಳು ಶಾಸಕರಿಗೆ ನನಗೆ ತೋರಿಸಬೇಕು ಎಂದರು.

ಹೀಗೆ ಪಿಡಬ್ಲೂಡಿ ಇಲಾಖೆಯ ಎಇಇ ಅಂಬರಾಯ ಪಾಟೀಲ ವರದಿ ವಾಚನ ಮಾಡಿದ ನಂತರ ಶಾಸಕರು ಮತ್ತು ಗ್ಯಾರಂಟಿ ಅಧ್ಯಕ್ಷರು ರಸ್ತೆಗಳು ಹಾಳುಬಿದ್ದಿವೆ,ಅನೇಕ ಕಾಮಗಾರಿಗಳು ಪೆಂಡಿಂಗ್ ಬಿದ್ದಿವೆ ಎಂದು ತರಾಟೆಗೆ ತೆಗೆದಯಕೋಂಡರು,ಚಂದ್ರಂಪಳ್ಳಿ ಜಲಾಶಯ ಎಇಇ ಚೇತನ ಕಳಸ್ಕರ ಅವರಿಗೆ ವರದಿ ಒದಿದ ನಂತರ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ಸರಬುರಜು ಮಾಡದೆಯಿರುವುದರಿಂದ ಶಾಸಕರು,ಅಧ್ಯಕ್ಷರು ತರಾಟೆಗೆ ತೆಗೆದಯಕೋಂಡರು.

ಸಮಯದ ಅಭಾವದಿಂದ ಇನ್ನು 10-12 ಇಲಾಖೆಯ ವರದಿ ಬಾಕಿಯಿರುವಾಗಲೆ ಕೆಡಿಪಿ ಸಭೆ ಮುಕ್ತಾಯಗೋಂಡಿತ್ತು, ಮತ್ತೆ ಸಭೆ ತೆಗೆದುಕೊಳ್ಳಲಾಗುವುದು ಎಂದು ಶಾಸಕರು ಹೇಳಿದರು. ಡಿವೈಎಸ್ಪಿ ಸಂಗಮನಾಥ ಹೀರೆಮಠ,ತಹಸೀಲ್ದಾರ ಸುಬ್ಬಣ್ಣ ಜಮಖಂಡಿ,ತಾಪಂ.ಇಒ ಸಂತೋಷ ಚವ್ಹಾಣ, ಸೇರಿದಂತೆ ಅಧಿಕಾರಿಗಳಾದ ಆರೋಗ್ಯ ಮಹ್ಮದ ಗಫಾರ,ಸಮಾಜ ಕಲ್ಯಾಣ ಡಾ.ಶೃತಿ,ಅನು ಸೋಯಾ,ಸವಿತಾ,ಕಾಮಣ್ಣ,ಕಪೀಲದೇವ, ಸಂಜು ಚವ್ಹಾಣ,ಜಗನ್ನಾಥ ಕೋರಳ್ಳಿ,ಮಲ್ಲಿಕಾರ್ಜುನ, ಲಕ್ಷಮಯ್ಯ,ಜಯಪ್ಪ,ಗಿರಿರಾಜ ಸಜ್ಜನ,ಅಂಕುಶ ಅನೇಕರಿದ್ದರು.




ಉದಯವಾಹಿನಿ ಚಿತ್ರ

ಪ್ರಗತಿ ಪರಿಶೀಲನಾ ಸಭೆ

ರೈತರಿಗೆ ಕೃಷಿ ಇಲಾಖೆ ವತಿಯಿಂದ ಸಿಗುವ ಯಂತ್ರೋಪಕರಣಗಳು ಮತ್ತು ರಸಗೊಬ್ಬರ ಕ್ರೀಮಿಕೀಟನಾಶಕ ಸಮರ್ಪಕವಗಿ ವಿತರಣೆ ಮಾಡಬೇಕು,50ಕೃಷಿ ಹೊಂಡಾ ರೈತರಿಗೆ ನೀಡಿದ್ದೀರಿ ಹೆಚ್ಚಿನ ಬೇಡಿ ಕೆಯಿದ್ದರೆ ರೈತರಿಗೆ ನೀಡಿ, ಕೃಷಿ ಜಮೀನುಗಳಲ್ಲಿ ಸರ್ಕಾರದ ಯೋಜನೆಗಳು ಒಂದೇ ಕಡೆಯಲ್ಲಿ ಬೆಳೆಸಿದರೆ ರೈತರು ನೋಡಿ ಯೋಜನೆಗಳ ಸದುಪಯೋಗ ಪಡೆದುಕೋಳ್ಳುತ್ತಾರೆ,ಇಲಾಖೆವಾರು ಖಾಲಿಯಿರುವ ಹುದ್ದೆಗಳ ಪಟ್ಟಿಕೂಡಿ ಅಧಿವೇಶನದಲ್ಲಿ ಪ್ರಶ್ನೆ ಮಾಡುತ್ತೇನೆ. -ಶಾಸಕ ಡಾ.ಅವಿನಾಶ ಜಾಧವ

ಜಿಲ್ಲೇಯಲ್ಲಿ ಈವರ್ಷ ಬೇಳೆ ಉತ್ಪಾದನೆಯಲ್ಲಿ 11.50ಲಕ್ಷ ಟನ್ ಆದರೆ ಕಳೆದ ವರ್ಷ 7ಲಕ್ಷ ಟನ್ ಉತ್ಪಾದನೆಯಗಿದೆ,ಈವರ್ಷ 4.50ಲಕ್ಷ ಟನ್ ಬೆಳೆ ಉತ್ಪಾದನೆ ಹೆಚ್ಚಾಗಿದೆ,ರಾಜ್ಯದಲ್ಲಿಯೆ ಕಲಬುರ್ಗಿ ಜಿಲ್ಲೆಯಲ್ಲಿ ಹೆಚ್ಚು ಪರಿಹಾರ ಬಂದಿದೆ,ಎಲ್ಲಾ ಗ್ರಾಪಂ.ಕಟ್ಟಡಗಳ ಮೇಲೆ ಮಳೆಮಾಪನ ಕೂಡಿಸಲಾಗುವುದು. -ಸಮದ್ ಪಟೇಲ್, ಜಿಲ್ಲಾ ಕೃಷಿ ಜಂಟಿ ನಿರ್ದೇಶಕ

## ಮಿನಿ ನ್ಯೂಸ್

### ಆನೆ ಸುತ್ತಾಡುವ ಜಾಗದಲ್ಲಿ ಕ್ಯಾಮೆರಾ ಅಳವಡಿಕೆ: ಡಿಎಫ್‌ಒ ಶಿವಶಂಕರ್

• ಉದಯವಾಹಿನಿ ಬಾಳೆಹೊನ್ನೂರು

ಆನೆಗಳು ಸುತ್ತಾಡುವ ಜಾಗದಲ್ಲಿ ಎಐ ಆಧಾರಿತ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಕ್ಷಣ ಕ್ಷಣದ ಮಾಹಿತಿ ಇಲಾಖೆಗೆ ಲಭ್ಯವಾಗುತ್ತಿದೆ. ಅದನ್ನು ಗ್ರಾಮಸ್ಥರೊಂದಿಗೆ ಹಂಚಿಕೊಳ್ಳಲಾಗುತ್ತಿದೆ ಎಂದು ಕೊಪ್ಪ ಡಿಎಫ್‌ಒ ಶಿವಶಂಕರ್ ತಿಳಿಸಿದರು.

ಆನೆಗಳನ್ನು ಹಿಮ್ಮೆಟ್ಟಿಸಲು ಬಾಳೆಹೊನ್ನೂರಿನಲ್ಲಿ 8 ಜನ ಸಿಬ್ಬಂದಿ ವಾಹನ ಸಹಿತ ಎಲಿಫೆಂಟ್ ಟಾಸ್ಕ್ ಫೋರ್ಸ್ (ಇಟಿಎಫ್) ರಚಿಸಲಾಗಿದೆ. ಹಿಂದೆ ಸಕಲೇಶಪುರ, ಹಾಸನ ಭಾಗದಿಂದ ಆನೆಗಳು ಮಲೆನಾಡಿಗೆ ಬರುತ್ತಿದ್ದವು. ಆದರೆ ಈಗ ಭದ್ರಾ ವನ್ಯಜೀವಿ ಕಡೆಯಿಂದ ಬರುತ್ತಿವೆ. ನರಸಿಂಹರಾಜಪುರ ಬಳಿ ಕಂಡು ಬಂದ 16 ಆನೆಗಳ ತಂಡ ವಾಪಸ್ಸು ಹೋಗಿದೆ. ಭದ್ರಾ ವನ್ಯಜೀವಿ ವಲಯದ ಬಳಿ ಟೆಂಟಿಕಲ್ ಲೈನ್ ಅಳವಡಿಸಲಾಗುವುದು. ಪ್ರಸ್ತುತ 7 ಕಿ.ಮೀ. ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರೀಕೆಡ್ ಅಳವಡಿಸಲು ಡಿಪಿಆರ್ ನಡೆಸಿದ್ದು ರೂ.10 ಕೋಟಿ ಖರ್ಚಾಗಲಿದೆ. ಇದಕ್ಕೆ ಸಚಿವ ಸಂಪುಟದ ಅನುಮತಿ ಅಗತ್ಯ ಎಂದು ತಿಳಿಸಿದರು.

# ಆಧ್ಯಾತ್ಮಿಕ ಕಡೆ ಎಳೆಯುವ ಕೆಲಸ ಮಠಾಧೀಶರು ಮಾಡುತ್ತಿದ್ದಾರೆ: ಪಾಟೀಲ್

• ಉದಯವಾಹಿನಿ ಚಿಂಚೋಳಿ

ಮಠ ಮಂದಿರಗಳು ನಿರ್ಮಾಣ ಮಾಡುತ್ತಿರುವುದರಿಂದ ಇಂದಿನ ಯುವಕರಿಗೆ ಆಧ್ಯಾತ್ಮಿಕ ಕಡೆ ಎಳೆಯುವ ಕೆಲಸ ಮಠಾಧೀಶರು ಮಾಡುತ್ತಿದ್ದಾರೆ, ಸೇಡಂ ಕ್ಷೇತ್ರದಲ್ಲಿ ಕಳೆದ ವರ್ಷ ಮಠಮಂದಿರಗಳ ಉದ್ದಾರಕ್ಕಾಗಿ 10 ಕೋಟಿ ನೀಡಿದೇನೆ,ಈ ವರ್ಷ 6ಕೋಟಿ ನೀಡಿದ್ದೇನೆ ಎಂದು ವೈಧ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.

ತಾಲ್ಲೂಕಿನ ನಿಡಗುಂದಾ ಗ್ರಾಮದಲ್ಲಿ ಶೀ ಉತ್ತರ ಮುಖಿ ಹನುಮಾನ ದೇವಾಲಯದ ನೂತನವಾಗಿ ನಿರ್ಮಿಸಿದ ಗೋಪುರ ಹಾಗೂ ಕಳಸಾರೋಹಣ ಧಾರ್ಮಿಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು,ಜನರು ಸರಿಯಾದ ಮಾರ್ಗದರ್ಶನದಲ್ಲಿ ಸಾಗಲು ಮಠಾಧೀಶರ ಮತ್ತು ಮಠ ಮಂದಿರಗಳ ಕಡೆ ಹೋಗಿ ಮಾರ್ಗದರ್ಶ ಪಡೆದು ಆಧ್ಯಾತ್ಮೀಕ ಒಲವು ತೋರಬೇಕು,ಆಗ ನೆಮ್ಮದಿ ಜೀವನ ಸಾಗಲು ಸಾಧ್ಯವಾಗುತ್ತದೆ. ಇಂದಿನ ಯುವಕರಿಗೆ ಮೊಬೈಲ್,ಸೋಷಿಯಲ್ ಮೆಡಿಯಾ ಬಂದಮೇಲೆ ಸರಿ ತಪ್ಪು ತಿಳಿಯುತ್ತಿಲ್ಲ,ಪಾಲಕರು ಮಕ್ಕಳಿಗೆ ತಿಳಿಹೇಳಬೇಕು,ಮಕ್ಕಳು ತಿದ್ದಿಕೋಳಲು ಅನುಕೂಲವಾಗುತ್ತದೆ,ಉತ್ತಮ ಸಂಸ್ಕೃತಿ ಸಂಸ್ಕಾರ ನೀಡಬೇಕು,ಭಾರತ ದೇಶ ಭಕ್ತಿ ಪ್ರಧಾನವಾದ ದೇಶವಾಗಿದೆ ಎಂದರು. ಕಂಚಾಳಕುಂಟಿ ನಂದಿಶ್ವರ ಮಠದ ಷ.ಬ್ರ.ಕರುಣೇಶ್ವರ ಶಿವಾಚಾರ್ಯರು ಆರ್ಶಿವಚನ ನೀಡಿದ ಅವರು,ಇಂದಿನ ಯುವಕರು ದುಶ್ಚಟಗಳಿಗೆ ಬಲಿಯಾಗದೆ ದೂರವಿರಬೇಕು, ಭಕ್ತಿ, ಶ್ರದ್ಧೆಯಿಂದ ಮಠಮಂದಿರಗಳಿಗೆ ಹೋಗಿ ಧ್ಯಾನ ಮಾಡಿದರೆ ಫಲಸಿಕ್ಕೆ ಸಿಗುತದೆ, ದೃಷ್ಠಿಕೋನ ಚನ್ನಾಗಿ ಇಟ್ಟುಕೋಂಡು ಆಚಾರ ವಿಚಾರ ಒಳ್ಳೆಯ ನಡತೆ ಬೆಳೆಸಿಕೋಂಡು ಗುರುವಿನ ಮಾರ್ಗದರ್ಶನದಲ್ಲಿ ನಡೆದರೆ ಜೀವನದಲ್ಲಿ ಉನ್ನತಮಟ್ಟದಲ್ಲಿ ಬೆಳೆಯುತ್ತಾರೆ ಎಂದರು.

ದಿಗ್ಗಾಂವ ನಾಗವಿ ಸುಕ್ಷೇತ್ರ ಪಂಚಗೃಹ ಹೇರೆಮಠದ ಶೀರತ್ನ ಷ.ಬ್ರ.ಸಿದ್ದವೀರ ಶಿವಾಚಾರ್ಯರು, ಭರತನೂರ ಚಿಕ್ಕಗುರುನಂಗೇಶ್ವರ ಮಹಾಸ್ವಾಮಿಗಳು, ಮಳಖೇಡ ಕಟ್ಟಿಮಠದ ಷ,ಬ್ರ.ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು, ನಿವೃತ ಎಇಇ ಬಾಬು ಕುಂಬಾರ, ಬಸವರಾಜ ನಿಷ್ಠಿ,ಮಾತನಾಡಿದರು.

**ಪ್ರಮುಖರು:** ಬಾಬುರಾವ ಪಾಟೀಲ, ಬಸವರಾಜ ಚಿಕ್ಕಮಠ, ಶಿವಕುಮಾರ ಬಿಳಶೆಟ್ಟಿ, ನರೇಂದ್ರಕುಮಾರ, ಶಾಂತಪ್ಪ, ಸಿದ್ದು ಸಾಸಪ್ಪ, ಬಸವರಾಜ ಸುಲೇಪೆಟ, ರವಿಕುಮಾರ, ಸಂಗಯ್ಯಸ್ವಾಮಿ, ಅರವೀಂದರೆಡ್ಡಿ, ಲಲಿತಾ ಸಿದ್ರಾಮ, ವಿವೇಕಾನಂದ, ಸುಭಾಷ ಜಡಾಲ, ಅನೀಲಕುಮಾರ ಸಜ್ಜನಶೆಟ್ಟಿ, ಸುಭಾಷ ಬೇಣೂರ, ಮಾಣಿಕ ಗೌತಮ್, ಮಂಜುನಾಥ ಕಂಬಾರ, ಅನಂತಯ್ಯ ಇಳಿಗೇರ, ಸುಭಾಷ ಕೇಶ್ವರಕರ್, ರಮೇಶ ಕಂಬಾರ, ಮೈನೋದ್ದಿನ್ ಮಸ್ಲಾದರ್, ತೋಟಮ್ಮ, ಶ್ರೀನಿವಾಸ ಮಂಡರಗಿ, ನರೇಂದ್ರ,ಶಂಕರ ತೋಟದ,ವಿಲಾಸ ಗೌತಮ್,ರಾಯಪ್ಪ, ಸಂತೋಷ,ಅನೇಕರಿದ್ದರು.


ಉದಯವಾಹಿನಿ ಚಿತ್ರ

2ವರ್ಷದಲ್ಲಿ 16ಕೋಟಿ ರೂ, ಮಠಮಂದಿರ ಉದ್ದಾರಕ್ಕಾಗಿ ಬಿಡುಗಡೆ

# ಹಣ ದುರುಪಯೋಗ: ಪಿಡಿಓ ಮೇಲೆ ಕ್ರಮಕ್ಕೈಗೊಳ್ಳಲು ಮೇಲಾಧಿಕಾರಿ ಹಿಂದೇಟು

• ಉದಯವಾಹಿನಿ ಯಾದಗಿರಿ

ತಾಲ್ಲೂಕಿನ ಮುದ್ನಾಳ ಗ್ರಾ.ಪಂ.ಯಲ್ಲಿ ನೀಲಕಂಠ ಪಿಡಿಓ ರವರು ಹಣ ದುರ್ಬಳಕೆ ಮಾಡಿಕೊಂಡಿದ್ದು, ಇವರ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಿ, ಅಮಾನತ್ತಿನಲ್ಲಿಟ್ಟು ತನಿಖೆ ಮಾಡಿ, ದುರ್ಬಳಕೆಯಾದ ಹಣವನ್ನು ಸರ್ಕಾರದ ಬೊಕ್ಕಸಕ್ಕೆ ಮರು ಪಾವತಿಸಬೇಕೆಂದು ಸಾಮಾಜಿಕ ಹೋರಾಟಗಾರ ಉಮೇಶ ಮುದ್ನಾಳ ಆಗ್ರಹಿಸಿದ್ದಾರೆ. ಯಾದಗಿರಿ ತಾಲೂಕಿನ ಮುದ್ನಾಳ ಗ್ರಾ.ಪಂ.ಯಲ್ಲಿ ನೀಲಕಂಠ ಪಿಡಿಓರವರ ಅವಧಿಯಲ್ಲಿ 15 ನೇ ಹಣಕಾಸು ಯೋಜನೆಯಡಿ ತೆರಿಗೆ ಸಂಗ್ರಹ, ಮನರೇಗಾ ಯೋಜನೆಯಡಿಯಲ್ಲಿ ಖರ್ಚಾದ ಮೊತ್ತದ ಬಗ್ಗೆ ಕೂಲಂಕುಶವಾಗಿ ತನಿಖೆ ಮಾಡುವಂತೆ ಒತ್ತಾಯಿಸಿದ್ದಾರೆ.

ಹಾಗೂ 2021-22 ನೇ ಸಾಲಿನಲ್ಲಿ ಪ್ರಾರಂಭಿಸಿದ ಗೋದಾಮ ಕಾಮಗಾರಿ ಸಂಪೂರ್ಣವಾಗಿ ಅಂದಾಜು ಪ್ರತಿಕೆ ಪ್ರಕಾರ ಅನುಷ್ಠಾನಗೊಳಿಸಿದಿದ್ದರೂ ಸಹ ಮುಂಗಡವಾಗಿ ಒಂದೇ ದಿನ ದಿ:03-10-2023 ರಂದು ರೂ. 18,64,000/- ಪಾವತಿಸಿದ್ದು, ಮತ್ತು 2021-22 ನೇ ಸಾಲಿನ ಠಾಣಗುಂದಿ ಗ್ರಾ.ಪಂ.ವ್ಯಾಪ್ತಿಯಲ್ಲಿ ಬರುವ ತಳಕ ಗ್ರಾಮದ ಬಸವನಕಟ್ಟೆಯಲ್ಲಿ ದನ ಕರುಗಳಿಗೆ ಕುಡಿಯುವ ನೀರಿನ ತೊಟ್ಟಿ, ಬಸವನ ದೇವಸ್ಥಾನದಿಂದ ಹಳ್ಳದವರೆಗೆ ಸಿಸಿ ಚರಂಡಿ ಮಾಡದೇ, ನಕಲಿ ದಾಖಲೆಗಳು ಸೃಷ್ಟಿಸಿ, ಸುಮಾರು ರೂ. 1.60 ಲಕ್ಷ ಅನಾಮತ್ ಹಣ ಲೂಟಿ ಮಾಡಿದ್ದಾರೆ.ಮುದ್ನಾಳ ಗ್ರಾಮದ ಮಾಜಿ ಗ್ರಾ.ಪಂ. ಉಪಾಧ್ಯಕ್ಷರಾದ ಸುಭಾಷರಡ್ಡಿ ರವರ ಕುಟುಂಬದಲ್ಲಿ 47-00 ಎಕರೆ ಜಮೀನು ಇದ್ದು, ಇಬ್ಬರು ಸರ್ಕಾರಿ ನೌಕರರ ಇದ್ದರೂ ಮೃತಪಟ್ಟವರ ಬಳಿ 2 ಬಾರಿ ಅಕ್ರಮವಾಗಿ ಸರ್ಕಾರಿ ಜಾಗ ಸೇರ್ಪಡೆ ಮಾಡಿದ್ದು, 1-73/2 2009-10 ಆಸ್ತಿ ನಂ. 1-74 ಮಲ್ಲೇಶಪ್ಪಗೌಡ ತಂ/ ಲಕ್ಷ್ಮಣಗೌಡ ಮೃತಪಟ್ಟು 50 ವರ್ಷ ಮೇಲ್ಪಟ್ಟು ಆಗಿದ್ದು, ಸದರಿ ಹಣಮಂತರಡ್ಡಿ ಬಿಲ್ ಕಲೆಕ್ಟರ್ ಆಗಿದ್ದ ಅವಧಿಯಲ್ಲಿ 2003-04 ರಲ್ಲಿ 2009-10 ರಲ್ಲಿ ತನ್ನ ಅಧಿಕಾರ ದುರ್ಬಳಕೆ ಮಾಡಿಕೊಂಡು ಮೃತಪಟ್ಟವರ ಹೆಸರು ಯಾವುದೇ ದಾಖಲೆ ಇಲ್ಲದೇ, ಹೆಸರು ಸೇರ್ಪಡೆ ಮಾಡಿದ್ದು, ಕಾನೂನು ಬಾಹಿರವಾಗಿದೆ, ಸಾಯಬಣ್ಣ ತಂ/ ತಿಮ್ಮಣ್ಣ ಅವರ ಹತ್ತಿರ ಖರೀದಿ ಮಾಡಿದ ಜಾಗ ಎಂದು ತಿಳಿಸಿದ್ದಾರೆ.

ಆದರೆ ಇದು ಸುಳ್ಳು ಮಾಹಿತಿ ನೀಡಿದ್ದು, ಸಾಯಬಣ್ಣ ಖರೀದಿಗೆ ಕೊಟ್ಟ ಜಾಗ ಆಗಿರುವುದಿಲ್ಲ. ಈ ಎಲ್ಲಾ ಆಸ್ತಿ ಮಾಲೀಕರ ಮೂಲ ದಾಖಲೆಗಳು ಪರಿಶೀಲನೆ ಮಾಡಿರುವುದಿಲ್ಲ, ಅಲ್ಲದೇ ಸದರಿ ಜಾಗದಲ್ಲಿ ಯಾವುದೇ ದಾಖಲೆ ಇಲ್ಲದೇ ಇದ್ದರೂ, ಪರವಾನಿಗೆ, 9 11 ಇಲ್ಲದೇ ಇದ್ದರೂ ಅಕ್ರಮವಾಗಿ ಸುಭಾಷರಡ್ಡಿ ಮನೆ ನಿರ್ಮಿಸಿದ್ದು, ಬಡವರಿಗೆ 20×30 ರ ನಿವೇಶನ ನೀಡಬೇಕೆಂದು ಸರ್ಕಾರದ ನಿಯಮವಿದ್ದು, ಆದರೆ ನಿಯಮ ಗಾಳಿಗೆ ತೂರಿ, ಅಕ್ರಮವಾಗಿ 60×80 ರಷ್ಟು ಅಕ್ರಮ ಮನೆ ಕಟ್ಟಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ಬೇಕಾಬಿಟ್ಟಿಯಾಗಿ, ಸರ್ಕಾರಿ ಅಧಿಕಾರಿಯಾಗಿ ಸರ್ಕಾರಿ ಜಾಗ ರಕ್ಷಣೆ ಮಾಡುವುದನ್ನು ಬಿಟ್ಟು ಜಾಗ ಕಬಳಿಸಿದ್ದಾರೆ.

ಪ್ರಸ್ತುತ ಹಣಮಂತರಡ್ಡಿ ಮೋಟ್ನಳ್ಳಿ ಗ್ರಾ.ಪಂ.ಯಲ್ಲಿ ಪಿಡಿಓ ಇದ್ದು, ಈತನ ಮೇಲೆ ಆತನ ಕುಟುಂಬದವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ, ಅಮಾನತ್ತುಗೊಳಿಸಿದರೆ ಕಾನೂನಿಗೆ ಗೌರವ ಸಿಕ್ಕದಂತಾಗುತ್ತದೆ. ಅಲ್ಲದೇ ಇವರ ಜೊತೆಗೂಡಿ ರಾಜಕೀಯ ಮಾಡುತ್ತಿರುವ ಪಿಡಿಓರವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲು ಮಾಡಲು ತಾವು ಸೂಚಿಸಿದರೂ ಸಹ ಇಲ್ಲಿಯವರೆಗೆ ಕ್ರಿಮಿನಲ್ ಕೇಸ್ ಮಾಡದೇ, ಅಕ್ರಮದಲ್ಲಿ ಶಾಮೀಲಾದ ಪಿ.ಡಿ. (ಡಿ.ಆರ್.ಡಿ.ಎ. ಜಿ.ಪಂ.) ಸಿ.ಬಿ. ದೇವರಮನಿ, ಹಿಂದಿನ ಇ.ಓ. ಬಸವರಾಜ ಶರಬೈ ಹಾಗೂ ಈಗಿನ ಇ.ಓ. ಮಹಾದೇವ ಬಾಮಳಗಿ ಪಿಡಿಓ ನೀಲಕಂಠ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ತಾ.ಪಂ. ಜಿ.ಪಂ. ಕಛೇರಿಯಲ್ಲಿ 5 ವರ್ಷಕ್ಕೂ ಮೇಲ್ಪಟ್ಟ ನೌಕರರು ಎಷ್ಟು ಜನ ಇದ್ದಾರೆ ಅವರು ಪಿಡಿಓಗಳ ಜೊತೆ ಶಾಮೀಲಾಗಿದ್ದು, ಕಾನೂನು ಬಾಹಿರವಾಗಿ ಅಕ್ರಮಕ್ಕೆ ಎಡೆ ಮಾಡಿಕೊಟ್ಟು, ಹೋಟೆಲ್, ಡಾಬಾದಲ್ಲಿ ಕುಳಿತು, ಅಕ್ರಮ ಎಸಗಿದವರ ಪರವಾಗಿ ವಕಾಲತ್ತು ಮಾಡುತ್ತಾರೆ. ಸಾರ್ವಜನಿಕರ ತೆರಿಗೆ ಹಣ ಅಕ್ರಮದಾರರ ಪಾಲಾಗುತ್ತಿದೆ. ಹೀಗಾಗಿ ಅಭಿವೃದ್ಧಿ ಕೆಲಸಗಳು ಹಳ್ಳ ಹಿಡಿದಿದ್ದು, ಮೂಲ ಸೌಕರ್ಯಗಳಿಂದ ಗ್ರಾಮಗಳು ವಂಚಿತವಾಗಿವೆ. ಇಂತಹ ಅಧಿಕಾರಿ ಸಿಬ್ಬಂದಿಗಳನ್ನು ನಮ್ಮ ಕಲ್ಯಾಣ ಕರ್ನಾಟಕದಿಂದ ಬೇರೆ ಜಿಲ್ಲೆ ವರ್ಗಾಯಿಸಲು ಸರ್ಕಾರಕ್ಕೆ ತುರ್ತಾಗಿ ಶಿಫಾರಸ್ಸು ಮಾಡಬೇಕು, ಇಲ್ಲದಿದ್ದರೆ ಒಂದು ವಾರದೊಳಗೆ ಜಿ.ಪಂ.ಕಛೇರಿಗೆ ಮುಳ್ಳು ಬೇಲಿ ಹಚ್ಚಿ ಪ್ರತಿಭಟನೆ ಮಾಡಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ. ಈ ಬಗ್ಗೆ ಯಾದಗಿರಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿ ಹಾಗೂ ಸಚಿವರಿಗೆ ಮನವಿ ಸಲ್ಲಿಸಲಾಯ್ತು.


ಉದಯವಾಹಿನಿ ಚಿತ್ರ

# ನೀರಿನ ಬವಣೆ ಎದುರಿಸಲು ಸಿದ್ಧತೆ

• ಉದಯವಾಹಿನಿ ಕಾರ್ಕಳ

ಈ ಬಾರಿ ಎಲ್ಲೆಡೆ ದೀರ್ಘ ಕಾಲ ಮಳೆ ಬಿದ್ದಿರುವ ಕಾರಣ ನೀರಿನ ಒರತೆ ಕಡಿಮೆಯಾಗಿಲ್ಲ. ನೀರಿನ ಕೊರತೆಯೂ ಕಾಡುತ್ತಿಲ್ಲ. ಆದರೂ ಪರಿಸ್ಥಿತಿ ಕೈಮೀರಿದರೆ ಎದುರಿಸಲು ಪುರಸಭಾ ವ್ಯಾಪ್ತಿಯಲ್ಲಿ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

ಪ್ರತಿ ಬಾರಿಯೂ ನೀರಿನ ಸಮಸ್ಯೆ ಕಾಡುವ ಕೆಲವು ಪ್ರದೇಶಗಳಿವೆ. ಬಂಗ್ಲೆಗುಡ್ಡೆ ಎರಡನೇ ವಾರ್ಡ್‌ನ ಕಜೆ ಎಂಬಲ್ಲಿ ಈಗ ಎರಡು ದಿನಕ್ಕೊಮ್ಮೆ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಇಲ್ಲಿ ಸುಮಾರು 800 ಮನೆಗಳಿವೆ. ಹಲವು ವರ್ಷಗಳಿಂದ ಎರಡು ದಿನಕ್ಕೊಮ್ಮೆ ಬರುವ ನೀರಿಗೆ ಜನರು ಒಗ್ಗಿಕೊಳ್ಳುವುದು ಅನಿವಾರ್ಯವಾಗಿದೆ. ಪ್ರತಿ ಬಾರಿ ಒತ್ತಾಯ ಮಾಡಿಯೂ ಇದು ಶಾಶ್ವತ ಸಮಸ್ಯೆಯಾಗಿ ಉಳಿದಿದೆ ಎನ್ನುತ್ತಾರೆ ವಾರ್ಡ್ ಸದಸ್ಯೆ ಪ್ರತಿಮಾ. ಜೋಗುಳಬೆಟ್ಟು ವ್ಯಾಪ್ತಿಯ ಐದು ಸೆಂಟ್ಸ್ ಜಾಗದಲ್ಲಿ 25 ಮನೆಗಳಿವೆ. ಇಲ್ಲಿ ಅಮೃತ ಯೋಜನೆಯ ನೀರು ಸರಬರಾಜು ಪೈಪ್‌ಲೈನ್ 2.5 ಕಿಮೀ ವರೆಗೆ ಮಾತ್ರ ಬಂದಿದ್ದು, ಮುಂದುವರಿದಿಲ್ಲ. ಪುರಸಭೆಯ ವತಿಯಿಂದ ಹಳೆ ಪೈಪ್‌ಲೈನ್‌ಗೆ ಅಮೃತ ಯೋಜನೆಯ ಪೈಪ್ ಜೋಡಿಸಲಾಗಿದೆ.

ಎಣ್ಣೆಹೊಳೆಯ ಏತ ನೀರಾವರಿ ಯೋಜನೆಯ ನೀರನ್ನು ರಾಮ ಸಮುದ್ರಕ್ಕೆ ಸೇರಿಸಲಾಗುತ್ತಿತ್ತು. ಆದರೆ ಕಾಮಗಾರಿ ಅಪೂರ್ಣವಾಗಿ ನೀರು ಬರುವುದು ಡಿಸೆಂಬರ್‌ನಲ್ಲಿ ನಿಂತಿದೆ. ಪ್ರವಾಸಿ ಮಂದಿರ ಸಮೀಪ ಅಮೃತ ಯೋಜನೆಯ ಪೈಪ್‌ಲೈನ್ ಕಾಮಗಾರಿ ನಡೆಯುವಾಗ ನೀರಿನ ಪೈಪ್‌ಲೈನ್ ತುಂಡರಿಸಿದ್ದು ರಾಮ ಸಮುದ್ರಕ್ಕೆ ಈಗ ನೀರು ಬರುವುದು ನಿಂತಿದೆ.


ಉದಯವಾಹಿನಿ ಚಿತ್ರ

# ಯುವ ಜನರು ಕೌಶಲ್ಯ ತರಬೇತಿ ಪಡೆದು ಸ್ವಾವಲಂಬಿಗಳಾಗಿ

• ಉದಯವಾಹಿನಿ ಚಿತ್ರದುರ್ಗ

ಕೇವಲ ನಿರುದ್ಯೋಗ ಭತ್ಯೆ ಪಡೆಯುವುದಷ್ಟೇ ಯುವ ಜನರ ಗುರಿಯಾಗಬಾರದು. ಅದರೊಂದಿಗೆ ಅಗತ್ಯ ಕೌಶಲ್ಯ ತರಬೇತಿ ಪಡೆದು ಉದ್ಯೋಗ ಗಳಿಸಿ ಸ್ವಾವಲಂಬಿಗಳಾಗಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಶಿವಣ್ಣ ಗಂಜಿಗಟ್ಟೆ ಹೇಳಿದರು. ನಗರದ ಸರ್ಕಾರಿ ವಿಜ್ಞಾನ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ವತಿಯಿಂದ ಆಯೋಜಿಸಿದ್ದ ಯುವನಿಧಿ ಫಲಾನುಭವಿಗಳಿಗೆ ಕೌಶಲ್ಯ ತರಬೇತಿ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪದವಿ ಮತ್ತು ಡಿಪ್ಲೋಮಾ ಶಿಕ್ಷಣ ಮುಗಿಸಿ ಉದ್ಯೋಗಕ್ಕಾಗಿ ಹಂಬಲಿಸುತ್ತಿರುವ ಯುವ ಜನತೆಗೆ ಆರ್ಥಿಕ ಮತ್ತು ಮಾನಸಿಕ ಸ್ಥೈರ್ಯ ತುಂಬುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಯುವಜನರು ಶಿಕ್ಷಣ ಮುಗಿಸಿ ಹೊರಬಂದಾಗ ಉದ್ಯೋಗ ಸಿಗುವವರೆಗೆ ಮನೆಯವರ ಮೇಲೆ ಅವಲಂಬಿತರಾಗಬೇಕಾದ ಅನಿವಾರ್ಯತೆ ಇದೆ. ಇಂತಹ ಸಂದರ್ಭದಲ್ಲಿ ಪದವೀಧರರಿಗೆ ರೂ.3000 ಹಾಗೂ ಡಿಪ್ಲೊಮಾ ಪದವೀಧರರಿಗೆ ರೂ.1500 ಭತ್ಯೆ ನೀಡುವ ಮೂಲಕ ಸರ್ಕಾರ ಅವರ ಬೆನ್ನಿಗೆ ನಿಂತಿದೆ. ಕೇವಲ ಹಣ ನೀಡುವುದು ಸರ್ಕಾರದ ಉದ್ದೇಶವಲ್ಲ. ಅಭ್ಯರ್ಥಿಗಳು ತಮ್ಮ ಕೌಶಲ್ಯವನ್ನು ಹೆಚ್ಚಿಸಿಕೊಂಡು ಉತ್ತಮ ಉದ್ಯೋಗ ಪಡೆಯಲು ನೆರವಾಗಬೇಕು ಎನ್ನುವುದು ಯೋಜನೆಯ ಆಶಯ. ಇದಕ್ಕಾಗಿ ವಿವಿಧ ಬ್ಯಾಂಕುಗಳು ಮತ್ತು ತರಬೇತಿ ಸಂಸ್ಥೆಗಳ ಮೂಲಕ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ರುಡ್‌ಸೆಟ್ ಸಂಸ್ಥೆ ಉಪನ್ಯಾಸಕ ತೋಟಪ್ಪ ಮಾತನಾಡಿ, ರಾಜ್ಯದ ಯುವಜನತೆ ಕೇವಲ ಪದವಿ ಪ್ರಮಾಣ ಪತ್ರಗಳಿಗೆ ಸೀಮಿತವಾಗದೆ, ಪ್ರಾಯೋಗಿಕ ತಾಂತ್ರಿಕ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ಅಡಿಯಲ್ಲಿ ಜಿಟಿಟಿಸಿ, ಐಟಿಐ ಸಂಸ್ಥೆಗಳು ಮೆಕಾನಿಕಲ್, ಆಟೋಮೇಷನ್ ಮತ್ತು ಎಲೆಕ್ಟ್ರಾನಿಕ್ಸ್ ಸೇರಿದಂತೆ ವಿವಿಧ ಕೋರ್ಸ್‌ಗಳನ್ನು ನೀಡುತ್ತಿವೆ. ಉತ್ಪಾದನಾ ವಲಯದಲ್ಲಿ ಆಧುನಿಕ ಆಟೊಮೇಷನ್ ತಂತ್ರಜ್ಞಾನದ ಬಗ್ಗೆ ಇಲ್ಲಿ 2 ತಿಂಗಳಿಂದ 1 ವರ್ಷದ ಅವಧಿಯ ತರಬೇತಿ ಲಭ್ಯವಿದೆ. ವಿಶೇಷವಾಗಿ ಎಸ್‌ಸಿ, ಎಸ್‌ಟಿ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಸರ್ಕಾರದ ಉಚಿತ ತರಬೇತಿ ನೀಡಲಾಗುವುದು. ತರಬೇತಿ ಮುಗಿಸಿದ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಸಂದರ್ಶನದ ಮೂಲಕ ಉದ್ಯೋಗಕ್ಕೆ ನೆರವು ನೀಡಲಾಗುತಿದ್ದು, ಯುವಕರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ ಎಂದರು

ಕಾರ್ಯಕ್ರಮದಲ್ಲಿ ಉದ್ಯೋಗಾಧಿಕಾರಿ ರವೀಂದ್ರ, ಚಿತ್ರದುರ್ಗ ಜಿಟಿಟಿಸಿ ಪ್ರಾಂಶುಪಾಲ ಸುಹಾಸ್, ಸಹಾಯಕ ಸಾಂಖ್ಯಿಕ ಅಧಿಕಾರಿ ವೇಮಣ್ಣ, ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ರವಿಕಾಂತ್, ಕೆನರಾ ಬ್ಯಾಂಕ್ ಹಣಕಾಸು ಮತ್ತು ಸಾಕ್ಷರತೆ ಸಮಾಲೋಚಕ ತಿಪ್ಪೇಸ್ವಾಮಿ, ಡಿಪ್ಲೋಮೊ ಕಾಲೇಜು ಪ್ಲೇಸ್‌ಮೆಂಟ್ ಅಧಿಕಾರಿ ಸರಸ್ವತಿ, ಸರ್ಕಾರಿ ಕಲಾ ಕಾಲೇಜಿನ ಪ್ರಾಧ್ಯಾಪಕರು ಹಾಗೂ ಯುವನಿಧಿ ಸಂಯೋಜಕ ಶ್ರೀಹರಿ, ಐಟಿಐ ತರಬೇತಿ ಅಧಿಕಾರಿ ಸತೀಶ್ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.


ಉದಯವಾಹಿನಿ ಚಿತ್ರ

ಜಿಲ್ಲೆಯ ಯುವಜನತೆಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಜಿಟಿಟಿಸಿ ಹಾಗೂ ಐಟಿಐ ನಂತಹ ಸಂಸ್ಥೆಗಳ ಮೂಲಕ ಉಚಿತ ತರಬೇತಿ ನೀಡಿ ಶೇ.70 ರಷ್ಟು ಉದ್ಯೋಗಾವಕಾಶ ಕೊಡಿಸುವ ಗುರಿ ಸರ್ಕಾರ ಹೊಂದಿದೆ. ಹಾಗಾಗಿ ಯುವಜನರು ಕೌಶಲ್ಯವಂತರಾದರೆ ದೇಶದ ಆರ್ಥಿಕತೆಗೆ ದೊಡ್ಡ ಕೊಡುಗೆಯಾಗುತ್ತದೆ. ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು ಈ ಸುವರ್ಣ ಅವಕಾಶ ಬಳಸಿಕೊಂಡು ತರಬೇತಿ ಪಡೆದು ಗೌರವಯುತ ಸ್ವಾವಲಂಬಿ ಜೀವನ ರೂಪಿಸಿಕೊಳ್ಳಬೇಕು.
-ಸಣ್ಣಕ್ಕಿ ಮಾರುತಿ,ಜಿಲ್ಲಾ ಕೌಶಲ್ಯಭಿವೃದ್ಧಿ ಅಧಿಕಾರಿ

### ಶರಾವತಿ ಮುಳುಗಡೆ ಸಂತ್ರಸ್ತರ ಸಮಸ್ಯೆ ಪರಿಹರಿಸಿ:ತೀ.ನ. ಶ್ರೀನಿವಾಸ್

• ಉದಯವಾಹಿನಿ ಶಿವಮೊಗ್ಗ

ಶರಾವತಿ ಮುಳುಗಡೆ ಸಂತ್ರಸ್ತರ ಸಮಸ್ಯೆ ಪರಿಹಾರಕ್ಕೆ ಸುಪ್ರೀಂಕೋರ್ಟ್ ಆದೇಶಿಸಿದ್ದರೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮೀನಾಮೇಷ ಎಣಿಸುತ್ತಿವೆ. ಸಂತ್ರಸ್ತರನ್ನು ಅರಣ್ಯ ಪ್ರದೇಶದಿಂದ ಎತ್ತಂಗಡಿ ಮಾಡಿ ಅನ್ಯಾಯ ಮಾಡುತ್ತಿವೆ ಎಂದು ಮಲೆನಾಡು ರೈತ ಹೋರಾಟ ಸಮಿತಿಯ ಸಂಚಾಲಕ ತೀ.ನ. ಶ್ರೀನಿವಾಸ್ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸುಪ್ರೀಂಕೋರ್ಟ್ ಅರಣ್ಯವಾಸಿಗಳಿಗೆ ಅರಣ್ಯಹಕ್ಕು ಕಾಯ್ದೆ ಪ್ರಕಾರ ನ್ಯಾಯಕೊಡಿ ಎಂದು ಹೇಳಿದ್ದರೂ ನ್ಯಾಯಾಲಯದ ಆದೇಶ ಉಲ್ಲಂಘಿಸಿ ಸುಮಾರು 80,000 ರೈತರ ಅರ್ಜಿಗಳನ್ನು ವಜಾ ಮಾಡಲಾಗಿದೆ ಎಂದು ಆರೋಪಿಸಿದರು. ಈ ರೈತರ ಸಮಸ್ಯೆ ಬಗೆಹರಿಸಿ ಎಂದು ಸುಪ್ರೀಂಕೋರ್ಟ್ ಕೇಂದ್ರ ಸರ್ಕಾರಕ್ಕೆ ಆದೇಶ ಮಾಡಿ 14 ತಿಂಗಳು ಕಳೆದರೂ ಇನ್ನೂ ಸಮಸ್ಯೆ ಬಗೆಹರಿದಿಲ್ಲ. ರೈತರು ಭೂಮಿ ಹಕ್ಕುಪತ್ರ ಪಡೆದಿರುವ ಕಾನು, ಸೊಪ್ಪಿನಬೆಟ್ಟ, ಜಾಡಿ, ದನಗಳಿಗೆ ಮುಫತ್ತು, ಗೋಮಾಳ, ಹುಲ್ಲುಬನಿ ಪ್ರದೇಶಗಳನ್ನು ಅರಣ್ಯ ಎಂದು ಘೋಷಿಸಲಾಗಿದೆ. ಒಂದು ವೇಳೆ ಶರಾವತಿ ಮುಳುಗಡೆ ಸಂತ್ರಸ್ತರನ್ನು ಒಕ್ಕಲೆಬ್ಬಿಸುವ ಕ್ರಮ ಮುಂದುವರಿದರೆ ದೆಹಲಿಯ ರೈತರ ಮಾದರಿ ಹೋರಾಟವನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

### ರೂ.16 ಲಕ್ಷ ಮೌಲ್ಯದ ಬೈಕ್ ವಶ

• ಉದಯವಾಹಿನಿ ಹುನಗುಂದ

ಮೋಟಾರ್ ಸೈಕಲ್ ಕಳ್ಳತನದ ಜಾಲ ಬೆನ್ನತ್ತಿದ ಹುನಗುಂದ ಪೊಲೀಸರು ಕಳ್ಳತನವಾಗಿದ್ದ 27 ಮೋಟಾರ್ ಸೈಕಲ್‌ಗಳನ್ನು ವಶಕ್ಕೆ ಪಡೆದುಕೊಂಡು ಇದರಲ್ಲಿ ಭಾಗಿಯಾದ ಮೂವರ ವಿರುದ್ಧ ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಹುನಗುಂದ ಪೊಲೀಸ್ ಠಾಣೆಯಲ್ಲಿ ಈ ಕುರಿತು ಸುದ್ದಿಗೋಷ್ಠಿ ನಡೆಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಬೈಕ್ ಕಳೆದುಕೊಂಡಿದ್ದ ತಾಲ್ಲೂಕಿನ ಹಡಗಲಿ ಗ್ರಾಮದ ಸಂಗಪ್ಪ ಬಸಪ್ಪ ಅಂಗಡಿ ನೀಡಿದ ದೂರಿನ ಮೇರೆಗೆ ಹುನಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಎಸ್ಪಿ ಸಿದ್ದಾರ್ಥ ಗೋಯಲ್, ಡಿವೈಎಸ್ಪಿ. ಸಂತೋಷ ಬನ್ನಟ್ಟಿ, ಸಿಪಿಐ. ಎಸ್.ಬಿ. ಆಜೂರ ಮಾರ್ಗದರ್ಶನದಲ್ಲಿ ಪಿಎಸ್‌ಐ. ಎಸ್.ಜಿ. ಆಲದಕಟ್ಟಿ ನೇತೃತ್ವದ ತಂಡ ಈ ಕುರಿತು ತನಿಖೆ ಕೈಗೊಂಡಿತ್ತು ಎಂದರು.

### ಗುಂಪುಗಾರಿಕೆ ಕಾಂಗ್ರೇಸ್‌ನಲ್ಲಿ ನಡೆಯಲ್ಲ ಎಸ್.ಎಸ್. ಮಲ್ಲಿಕಾರ್ಜುನ್

• ಉದಯವಾಹಿನಿ ದಾವಣಗೆರೆ

ಚುನಾವಣೆ ಸಮೀಪಿಸುತ್ತಿದ್ದಂತೆ ಪ್ರತ್ಯೇಕ ಸಭೆಗಳನ್ನು ನಡೆಸುವುದು ಸರಿಯಲ್ಲ. ಇಂತಹ ಗುಂಪುಗಾರಿಕೆ ಕಾಂಗ್ರೇಸ್‌ನಲ್ಲಿ ಬಹುದಿನ ನಡೆಯುವುದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಹಿನ್ನೆಲೆಯಲ್ಲಿ ಮುಸ್ಲಿಂ ಸಮುದಾಯದ ನಾಯಕರು ನಡೆಸುತ್ತಿರುವ ಪ್ರತ್ಯೇಕ ಸಭೆಗಳ ಕುರಿತು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಉಪಚುನಾವಣೆಯ ದಿನಾಂಕ ಇನ್ನೂ ಘೋಷಣೆ ಆಗಿಲ್ಲ. ಇಂತಹ ಸಂದರ್ಭದಲ್ಲಿ ಪ್ರತ್ಯೇಕ ಸಭೆ, ಸಮಾರಂಭಗಳನ್ನು ನಡೆಸುವುದು ಅನಗತ್ಯ. ಇದೇ ರೀತಿಯ ಸಭೆಗಳನ್ನು ನಡೆಸಲು ಉಳಿದವರಿಗೂ ಬರುತ್ತದೆ. ಆದರೆ, ಇದು ಗುಂಪುಗಾರಿಕೆ ಮಾಡಿದಂತೆ ಆಗುತ್ತದೆ' ಎಂದರು. ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಇನ್ನೂ ಶುರುವಾಗಿಲ್ಲ. ಕ್ಷೇತ್ರದ ಗೆಲುವಿಗೆ ಸಂಬಂಧಿಸಿದಂತೆ ಪೂರಕ ಮಾಹಿತಿಗಳನ್ನು ಇಟ್ಟುಕೊಂಡು ಚರ್ಚಿಸಬೇಕು. ಈ ಮೂಲಕ ಪರಿಹಾರ ಕಂಡುಕೊಳ್ಳುವುದು ಸೂಕ್ತ. ಉಪಚುನಾವಣೆಯ ಕುರಿತು ಕುಟುಂಬ ಇನ್ನೂ ತೀರ್ಮಾನಕ್ಕೆ ಬಂದಿಲ್ಲ. ಪುತ್ರ ಸಮರ್ಥ್ ಶಾಮನೂರು ಅಭಿಪ್ರಾಯವನ್ನೂ ಕೇಳಲಾಗುವುದು ಎಂದು ನುಡಿದರು.

# ಬಂಜಾರ ಕಲಾ ಪ್ರತಿಭಾನ್ವೇಷಣೆ ಯಶಸ್ವಿಗೆ ನಿರಂತರ ರಿಯ ತೀರ್ಪುಗಾರ ಪರಿಶ್ರಮ

## ಬಂಜಾರ ಸಂಸ್ಕೃತಿಯ ಪುನಶ್ಚೇತನ, ಕಲಾದರ ಪ್ರತಿಭೆಗೆ ವೇದಿಕೆ ಮತ್ತು ಜಾಗತೀಕರಣದ ಪ್ರಭಾವದಿಂದ ಕಲೆಗಳನ್ನು ರಕ್ಷಿಸುವುದು

• ಉದಯವಾಹಿನಿ ನ್ಯಾಮತಿ

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿರಂತರ ಕಲೆ ಜೀವಂತ ಉಳಿಸುವ ಪ್ರಯತ್ನಕ್ಕೆ ಮುಂದಾಗಿದ್ದು, ನಶಿಸುತ್ತಿರುವ ಬಂಜಾರ ಸಮುದಾಯ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಲಂಬಾಣಿ ನೃತ್ಯ, ಸಾಂಪ್ರದಾಯಕ ಗಾಯನ ಮತ್ತು ಕಲೆ ಗುರುತಿಸಿ, ಉಳಿಸಿ ಬೆಳೆಸುವ ಉದ್ದೇಶ ಹೊಂದಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಿಂದ ಕೋಟ್ಯಾಂತರ ರೂಪಾ ಹಣ ಉಪಯೋಗಿಸಿ ಆಯೋಜಿತವಾಗುವ ರಾಜ್ಯದಾದ್ಯಂತ ಆಡಿಷನ್ ಮೂಲಕ ಪ್ರತಿಭೆ ಗುರುತಿಸಿ ವಲಯ ಮಟ್ಟದಿಂದ, ರಾಜ್ಯಮಟ್ಟಕ್ಕೆ ಒಳ್ಳೆಯ ಪ್ರತಿಭೆಯ ಕಲಾದ ಬೆಳಕಿಗೆ ತಂದು ರಾಜ್ಯ ಮಟ್ಟದಲ್ಲಿ ಪ್ರತಿಭೆಗಳಿಗೆ ಫಲಿತಾಂಶದಲ್ಲಿ ಮೋಸ, ಅನ್ಯಾಯಮಾಡಿ ಕೆಲವು ತೀರ್ಪುಗಾರರ ಸ್ವಂತ ಜಿಲ್ಲೆಯವರಿಗೆ ದುಡ್ಡಿನ ಆಸೆಗೆ ಪ್ರಥಮ ದ್ವಿತಿಯ ಫಲಿತಾಂಶ ನೀಡಿರುವದು ಬೆಳಕಿಗೆ ತಂದಿರುವ ಆರೋಪ ಭಾಯಾಗಡ್ ಸೂರಗೊಂಡನಕೊಪ್ಪದಲ್ಲಿ ನಡೆದಿದೆ ಎಂದು ಕಲಾದ ಪಾಲಕರು, ಬಾಲಕರು ಪತ್ರಿಕೆಗೆ ತಮ್ಮ ನೋವಿನ ಮೂಲಕ ಆರೋಪಿಸಿದ್ದಾರೆ, ಈ ಹಿಂದೆ ಕೂಡಾ ಅನೇಕ ಭಾರಿ ಆರೋಪಿಸಿದ್ದರು ಕೂಡಾ ಯಾವ ನ್ಯಾಯ ಸಿಗದೇ ಹೀಗೆ ಪ್ರತಿ ಭಾರಿ ಮುಂದೆ ಸಾಗುತ್ತಿರುವದಕ್ಕೆ ನೇರ ಹೊಣೆ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ ನಾಯ್ಕ ಅಥವಾ ತಮ್ಮ ಜೀವನೋಪಾಯಕ್ಕೆ ಯಾವುದೇ ಕಲೆಯಲ್ಲಿ ಪ್ರತಿಭೆಯನ್ನು ಪಡೆಯದೆ ಚಲನಚಿತ್ರ ನಿರ್ದೇಶಕ ಎಂದು ಗುರುತಿಸಿಕೊಂಡು ಸುಳ್ಳು ತೀರ್ಪುಗಾರರಾಗಿ ಗುರುತಿಸಿ ಕೊಂಡಿರುವರಾ ? ಸೂರಗೊಂಡನಕೊಪ್ಪ ಭಾಯಾಗಡ ಸದಸ್ಯರಾಗಿ ರಾಜಕೀಯ ಪ್ರೇರಿತದಿಂದ ತೀರ್ಪುಗಾರರಾಗಿರುವ ತೀರ್ಪುಗಾರಾ ? ಎಂದು ಸಾರ್ವಜನಿಕ ಆರೋಪ, ಕಲಾಕಾರರಿಗೆ ಪ್ರೋತ್ಸಾಹ ಧನ ಹಂಚಿಕೆಯಲ್ಲಿ ಕೂಡಾ ಸಿಬ್ಬಂದಿಗಳು ಗೋಲಮಾಲ ಆರೋಪ, ಇಷ್ಟೊಂದು ಆರೋಪ ಕೇಳಿಬಂದರು ನಿಗಮ ಮೌನ ಯಾಕೆ ? ಕಲಾ ಮಳಾವೋ ಯಾರ ಮನೆ ಆಸ್ತಿ ? ಉತ್ತರ ಕರ್ನಾಟಕದ ಭಾಗದ ಕಲ್ಬುರ್ಗಿ, ಜಯಪುರ, ಬಾಗಲಕೋಟ, ಯಾದಗಿರಿ, ರಾಯಚೂರ, ಬೆಳಗಾ, ಈ ಜಿಲ್ಲೆಯಲ್ಲಿ ಅತೀ ಹೆಚ್ಚು ಬಂಜಾರಾ ಕಲಾದರು ಪ್ರತಿವರ್ಷ ಸಾರಾರು ಕಲಾದರು ಹುಟ್ಟಿಸುವ ಜಿಲ್ಲೆಗಳಲ್ಲಿ ತೀರ್ಪುಗಾರರನ್ನು ನೇಮಕ ಮಾಡದೇ ಯಾವುದೋ ರಾಜಕೀಯಕ್ಕೆ ಮನೆದು, ಯಾವುದೇ ಕಲೆಯಲ್ಲಿ ಪರಿಣಿತ ಹೊಂದದೆ ಇರುವ ಕಲಾದರನ್ನು ತೀರ್ಪುಗಾರರೆಂದು ಹೇಳುವದು ಯಾವ ನ್ಯಾಯ ? ಮುಗ್ದ ಕಲಾದರ ಮುಕಕ್ಕೆ ನೀರು ಎರಚುವ ಕೆಲಸ ಯಾಕೆ ಈ ಕಲಾ ಮಳಾವೋದಲ್ಲಿ ನಡೆದಿದೆ ಎಂದು ಕಲಾದರ ಆಕ್ರೋಶ, ತೀರ್ಪುಗಾರರ ಜಿಲ್ಲೇಯಲ್ಲಿ ಒಂದೇ ತಾಂಡಾದ ಎರಡು ಮೂರು ತಂಡ ಪ್ರಥಮ ದ್ವಿತಿಯ ಸ್ಥಾನ ಆಯ್ಕೆಂದೆ ಷಡ್ಯಂತರ ಅಡಗಿದೆ ಎಂದು ಕಲಾದರು ಪಾಲಕರ ಆರೋಪ ಕೇಳಿ ಬಂದಿದೆ.

ಲಂಬಾಣಿ ಸಾಂಪ್ರದಾಯಕ ನೃತ್ಯ, ಬಂಜಾರ ಜನಪದ ನೃತ್ಯ, ಸಮೂಹ ಗಾಯನ, ಸುಗಮ ಸಂಗೀತ ಮತ್ತು ವಾದ್ಯ ಕಲೆಗಳಲ್ಲಿ ಒಂದಕ್ಕಿಂತ ಒಂದು ತಂಡ ಪರಿಣಿತ ಕಲಾದರು ಕಲೆ ಪ್ರದರ್ಶಿಸಿದರು, ಅಂತವರಿಗೆ ಸ್ಥಾನ ನೀಡದೆ ಅನೇಕ ವ್ಯತ್ಯಾಸ ಕಂಡು ಬಂದ ತಂಡಗಳನ್ನು ಆಯ್ಕೆ ಮಾಡಿರುವದು ನೋವಿನ ಸಂಗತಿ ಎಂದು ಕಲಾದರ ಆರೋಪ ಕೇಳಿ ಬಂದಿದ್ದು. ಇದರ ರುದ್ದ ಹೋರಾಟ ಅನಿವಾರ್ಯ ಎಂದರು.

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಿಂದ ನಡೆಯುವ ಕಲಾ ಮಳಾವೋ, ಯುವಕ -ಯುವತಿಯರು ಮತ್ತು ಸಾಂಪ್ರದಾಯಿಕ ಉಡುಗೆ ತೊಟ್ಟು ಮಕ್ಕಳು ಇದರಲ್ಲಿ ಶೇಷವಾಗಿ ಭಾಗವಸುತ್ತಾರೆ, ಬಂಜಾರ ಸಮುದಾಯದ ಕಲಾದರನ್ನು ಗುರುತಿಸಿ, ಅವರ ಕಲೆಗೆ ಹೊಸ ಆಯಾಮವನ್ನು ನೀಡುವುದಲ್ಲದೆ, ಮುಂದಿನ ಪೀಳಿಗೆಗೆ ಈ ಸಾಂಸ್ಕೃತಿಕ ಪರಂಪರೆಯನ್ನು ಪರಿಚುಸುವ ಬದಲು ತಮ್ಮ ಲಾಭದ ಕಡೆ ಗಮನ ಸೆಳೆಯುವ ಹುನ್ನಾರ ಈ ಆಯೋಜಕರದಾಗಿದೆ ಎಂದು ಬಂಜಾರ ಯುವ ಹೋರಾಟಗಾರರ ಆರೋಪ.


ಉದಯವಾಹಿನಿ ಚಿತ್ರ

**ಸಾರ್ವಜನಿಕರ ಆಕ್ರೋಶ**

ಬಂಜಾರ ಸಂಸ್ಕೃತಿಯ ಪುನಶ್ಚೇತನ, ಕಲಾದರ ಪ್ರತಿಭೆಗೆ ವೇದಿಕೆ ಮತ್ತು ಜಾಗತೀಕರಣದ ಪ್ರಭಾವದಿಂದ ಕಲೆಗಳನ್ನು ರಕ್ಷಿಸುವುದು. ಕಲಾ ಮಳಾವೋ ಉದ್ದೇಶ ಆದರೆ ಇದರ ಲಾಭ ಗಟಿಸುತ್ತಿರುವದು ಕೆಲವು ರಾಜಕೀಯ ಬೆಂಬಲಿತ ಸುಳ್ಳು ತೀರ್ಪುಗಾರರು, ಶಶಿಕುಮಾರ ಎಂಬಾತ ಚಲನಚಿತ್ರ ನಿರ್ದೇಶಕ ಎಂದು ಗುರುತಿಸಿಕೊಂಡು ಬಂಜಾರಾ ಕಲಾದರ ತೀರ್ಪುಗಾರ ಎಂದು ಹೇಳಿಕೊಳ್ಳುವದು ಯಾವ ನ್ಯಾಯ ?, ಇವರನ್ನು ಹೇಗೆ ತೀರ್ಪುಗಾರನ್ನಾಗಿ ನೇಮಕ ಮಾಡಲಾಯಿತು, ಇವರಂದೆ ನಿಂತಿರುವ ಕಾಣದ ಕೈಗಳು ಯಾವವು ಸಾರ್ವಜನಿಕ ಪ್ರಶ್ನೆ, ಜೊತೆಗೆ ಇವರ ವಿರುದ್ಧ ಪತ್ರಿಕೆಯಲ್ಲಿ ಬರೆದರೆ ಮಾನನಷ್ಟ ಮೊಕದ್ದಮೆ ಹೋಡುತ್ತೇನೆ ಎಂದು ಮಾಧ್ಯಮ ವಿರುದ್ಧ ಚೇಲಗಳನ್ನು ಬಿಟ್ಟು ಹೆದರಿಸುವದು ಈತನ ಹವ್ಯಾಸನಾ ? ಜೊತೆಗೆ ಮೆಲೋಡಿಸ್ ಸಂಗೀತದಲ್ಲಿ ಪರಿಣಿತ ಈ ಬಂಜಾರಾ ಕಲಾ ಮಳಾವೋ ತೀರ್ಪುಗಾರನಾ ? ಎಂದು ಸಾರ್ವಜನಿಕ ಆಕ್ರೋಶದ ಮಾತುಗಳು ಕೇಳಿಬರುತ್ತಿದೆ.

**ಕೆಲವು ತೀರ್ಪುಗಾರ ಮೋಖ ನೋಡಿ ಫಲಿತಾಂಶ ನೀಡಿರುವ ಆರೋಪ**

ತೈವಾನ್ ಎಂಬ ಸ್ವತಂತ್ರವಾಗಿ ಆಳಲ್ಪಡುತ್ತಿರುವ ದೇಶವನ್ನು ಚೀನಾ ತನ್ನ ಭೂಭಾಗವೆಂದು ಪ್ರತಿಪಾದಿಸುತ್ತಿದೆ

# ತೈವಾನ್ ಒಪ್ಪಂದದ ಬಗ್ಗೆ ಶೀಘ್ರವೇ ತೀರ್ಮಾನಿಸ್ತೀವಿ: ಟ್ರಂಪ್

**ವಾಷಿಂಗ್ಟನ್:** ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾದೊಂದಿಗೆ ಒಪ್ಪಂದ ಮಾಡಿಕೊಳ್ಳುವ ತವಕದಲ್ಲಿದ್ದು, ಇದಕ್ಕೆಂದು ಈಗಾಗಲೇ ಏಪ್ರಿಲ್ ತಿಂಗಳಿನಲ್ಲಿ ಚೀನಾ ಪ್ರವಾಸ ಹೋಗಲು ಸಹ ಸಿದ್ಧತೆ ನಡೆಸುತ್ತಿದ್ದಾರೆ. ಆದರೆ, ಅಮೆರಿಕಾ ಹಾಗೂ ಚೀನಾ ದ್ವಿಪಕ್ಷೀಯ ಸಂಬಂಧಕ್ಕೆ ಪ್ರಮುಖ ಅಡ್ಡಿಯಾಗಿರುವುದು ತೈವಾನ್. ಈ ಸಮಸ್ಯೆಯನ್ನು ಬಗೆಹರಿಸಿದಾಗ ಮಾತ್ರವೇ ಈ ಸಂಬಂಧ ವೃದ್ಧಿಯಾಗಲು ಸಾಧ್ಯ ಎಂದು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಹೇಳಿದ್ದಾರೆ. ಸದ್ಯ ಅಮೆರಿಕಾ ತೈವಾನ್‌ನೊಂದಿಗೆ ಮಾಡಿಕೊಳ್ಳಬೇಕಿದ್ದ ರಕ್ಷಣಾ ಒಪ್ಪಂದಕ್ಕೆ ಕೊಂಚ ಬ್ರೇಕ್ ನೀಡಿದ್ದು ಈ ಕುರಿತು ಆಲೋಚಿಸುವುದಾಗಿ ಹೇಳಿದೆ.

ತೈವಾನ್ ಎಂಬ ಸ್ವತಂತ್ರವಾಗಿ ಆಳಲ್ಪಡುತ್ತಿರುವ ದೇಶವನ್ನು ಚೀನಾ ತನ್ನ ಭೂಭಾಗವೆಂದು ಪ್ರತಿಪಾದಿಸುತ್ತಿದ್ದು, ಇದಕ್ಕೆ ಸಹಾಯ ಮಾಡುವ ದೇಶಗಳ ವಿರುದ್ಧ ಕಿಡಿಕಾರುತ್ತಾ ಚೀನಾ ಸಾರ್ವಭೌಮತ್ವಕ್ಕೆ ಧಕ್ಕೆ ತರುತ್ತಿವೆ ಎಂದು ಆರೋಪಿಸುತ್ತಿದೆ. ಅದರಲ್ಲೂ ಪ್ರಮುಖವಾಗಿ ಈ ವಿಚಾರದಲ್ಲಿ ಅಮೆರಿಕಾ ಹಾಗೂ ಚೀನಾ ನಡುವೆ ವಾಕ್ಸಮರ ಮುಂದುವರೆಯುತ್ತಲೇ ಇದೆ. ಇದಕ್ಕೆ ಕಾರಣ ಅಮೆರಿಕಾ ನಿರಂತರವಾಗಿ ತೈವಾನ್ ಗೆ ಶಸ್ತ್ರಾಸ್ತ್ರ ಮಾರಾಟ ಮಾಡುವುದು. ಇನ್ನು, ಇತ್ತೀಚೆಗೆ ತೈವಾನ್ ಗೆ ಯುಎಸ್ 10 ಶತಕೋಟಿ ಡಾಲರ್‌ಗಳಿಗೂ ಹೆಚ್ಚಿನ ಮೌಲ್ಯದ ಭಾರಿ ಪ್ರಮಾಣದ ಶಸ್ತ್ರಾಸ್ತ್ರ ಮಾರಾಟ ಮಾಡುವುದಾಗಿ ಘೋಷಿಸಿದ ಬಳಿಕ ಸಂಬಂಧ ಮತ್ತಷ್ಟು ಹಳಸಿತ್ತು.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಟ್ರಂಪ್ ತೈವಾನ್ ಕುರಿತು, ಕ್ಸಿಯೊಂದಿಗಿನ ಇತ್ತೀಚಿನ ಸಂಭಾಷಣೆ ಉತ್ತಮವಾಗಿತ್ತು. ನಾನು ಅವರೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದ್ದೇನೆ ಎಂದಿದ್ದು ಈ ವಿಚಾರವಾಗಿ ನಾನು ಅವರೊಂದಿಗೆ ಮಾತನಾಡುತ್ತಿದ್ದೇನೆ. ನಾವು ಉತ್ತಮ ಸಂಭಾಷಣೆ ನಡೆಸಿದ್ದೇವೆ ಮತ್ತು ಶೀಘ್ರದಲ್ಲೇ ನಾವು ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಹೇಳಿದ್ದಾರೆ. ಇದು ಚೀನಾದೊಂದಿಗೆ ಮಾತುಕತೆ ಬಳಿಕ ನಿರ್ಧರಿಸುವುದಾಗಿ ಸೂಚಿಸುವಂತಿದೆ.

ಹೀಗೆ ಚೀನಾ ಬೆದರಿಕೆಗಳಿಗೆ ಅಮೆರಿಕಾ ಯಾಕೋ ಥಂಡಾ ಹೊಡೆದಂತೆ ಕಾಣುತ್ತಿದ್ದು, ತೈವಾನ್ ಕುರಿತಂತೆ ಈಗಾಗಲೇ ಘೋಷಿಸಿದ್ದ ಒಪ್ಪಂದಕ್ಕೆ ಸಹಿ ಹಾಕುವ ಕುರಿತು ಮರು ಆಲೋಚನೆ ಮಾಡುತ್ತಿದ್ದು, ಟ್ರಂಪ್ ಚೀನಾ ಪ್ರವಾಸದ ಸುಗಮವಾಗಿ ಸಾಗಲಿ ಎನ್ನುವ ನೆಪದಲ್ಲಿ, ತೈವಾನ್ ಕುರಿತ ನಿಲುವಿನಿಂದ ಯೂಟರ್ನ್ ಪಡೆದುಕೊಂಡಂತೆ ಮೇಲ್ನೋಟಕ್ಕೆ ಭಾಸವಾಗುತ್ತಿದೆ.



## ಅಮೆರಿಕಾ ಹಾಗೂ ಚೀನಾ ನಡುವೆ ವಾಕ್ಸಮರ

### ತೈವಾನ್ ನಿಲುವಿನಿಂದ ಟ್ರಂಪ್ ಹಿಂದೇಟು?

ಸದ್ಯ, ಈ ಹಳಸಿದ ಸಂಬಂಧವನ್ನು ಸ್ವಲ್ಪಮಟ್ಟಿಗಾದರೂ ಸರಿ ದಾರಿಗೆ ತಂದು ಅಮೆರಿಕಾ ಚೀನಾದೊಂದಿಗೆ ಒಪ್ಪಂದ ಮಾಡಿಕೊಳ್ಳುವ ತವಕದಲ್ಲಿದೆ. ಹೀಗಾಗಿಯೇ ಕಳೆದ ವಾರ ಚೀನಾ ಅಧ್ಯಕ್ಷರೊಂದಿಗೆ ಫೋನ್ ಕಾಲ್ ಬಳಿಕ ಈಗ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈಗಾಗಲೇ ಅಂತಿಮವಾಗಿರುವ ಒಪ್ಪಂದದಿಂದ ಹಿಂದೇಟು ಹಾಕಿದ್ದು, ತೈವಾನ್ ಗೆ ಶಸ್ತ್ರಾಸ್ತ್ರ ಮಾರಾಟಕ್ಕೆ ಸಹಿ ಹಾಕುವ ಬಗ್ಗೆ ಶೀಘ್ರವೇ ನಿರ್ಧರಿಸಲಿದ್ದೇನೆ ಎಂದು ಹೇಳಿದ್ದಾರೆ.

- ಟ್ರಂಪ್-ಕ್ಸಿ ಜಿನ್ ಪಿಂಗ್ ಫೋನ್ ಕಾಲ್ ಸಂಭಾಷಣೆ ಬೆನ್ನಲ್ಲೇ ತೈವಾನ್ ನಿಲುವಿನಿಂದ ಹಿಂದೆ ಸರಿದ ಟ್ರಂಪ್
- ತೈವಾನ್‌ಗೆ ಮಾರಾಟ ಮಾಡುತ್ತೇವೆ ಎಂದು ಘೋಷಿಸಿದ್ದ ಶಸ್ತ್ರಾಸ್ತ್ರಗಳ ಬಗ್ಗೆ ಆಲೋಚಿಸಿ ಶೀಘ್ರ ನಿರ್ಧಾರಕ್ಕೆ ಬರುತ್ತಿವಿ

### ತೈವಾನ್‌ಗೆ ಶಸ್ತ್ರಾಸ್ತ್ರ ಮಾರಾಟ ಬೇಡ: ಯುಎಸ್‌ಗೆ ಚೀನಾ ಒತ್ತಾಯ

ಇನ್ನು, ಇತ್ತೀಚೆಗೆ ನಡೆದ ಫೋನ್ ಕಾಲ್‌ನಲ್ಲಿ ಕ್ಸಿ ಜಿನ್ ಪಿಂಗ್, ಡೊನಾಲ್ಡ್ ಟ್ರಂಪ್ ಅವರೊಂದಿಗೆ ಮಾತನಾಡಿದ ಸಂದರ್ಭವನ್ನು ಉದ್ದೇಶಿಸಿ ಚೀನಾ ನೀಡಿದ ಹೇಳಿಕೆ ಪ್ರಕಾರ, ಉಭಯ ದೇಶಗಳ ನಡುವೆ ಪರಸ್ಪರ ಗೌರವದ ಅವಶ್ಯ ಎಂದಿದ್ದು, ಮಾತುಕತೆಗಳು ಬಹುತೇಕವಾಗಿ ತೈವಾನ್‌ಗೆ ಅಮೆರಿಕಾ ನೀಡುತ್ತಿರುವ ಶಸ್ತ್ರಾಸ್ತ್ರಗಳ ಬಗ್ಗೆ ಆಗಿದೆ ಎಂದಿದ್ದು, ಚೀನಾ-ಯುಎಸ್ ಸಂಬಂಧಗಳಲ್ಲಿ ತೈವಾನ್ ಪ್ರಶ್ನೆ ಅತ್ಯಂತ ಪ್ರಮುಖ ವಿಷಯವಾಗಿದೆ... ಅಮೆರಿಕಾವು ತೈವಾನ್‌ಗೆ ಶಸ್ತ್ರಾಸ್ತ್ರ ಮಾರಾಟವನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು ಎಂದು ಕ್ಸಿ ಹೇಳಿದ್ದಾರೆ ಎಂದು ತಿಳಿಸಿತ್ತು.

### ತೈವಾನ್ ಒಪ್ಪಂದಕ್ಕೂ ಚೀನಾ ಭೇಟಿಗೂ ಸಂಬಂಧ?

ಅಲ್ಲದೆ, ಕ್ಸಿ ಜಿನ್‌ಪಿಂಗ್ ಅಮೆರಿಕಾ ತೈವಾನ್‌ಗೆ ಶಸ್ತ್ರಾಸ್ತ್ರ ಒಪ್ಪಂದಕ್ಕೆ ಸಹಿ ಹಾಕದಂತೆ ಒತ್ತಾಯಿಸಿದ್ದು, ಅಮೆರಿಕಾ ಈ ಒಪ್ಪಂದಕ್ಕೆ ಸಹಿ ಹಾಕಿದ್ದೇ ಆದಲ್ಲಿ ಇದು ಮುಂಬರುವ ಟ್ರಂಪ್ ಚೀನಾ ಪ್ರವಾಸದ ಭೇಟಿ ಮೇಲೆ ವ್ಯತಿರಿಕ್ತ ಪರಿಣಾಮ ಬೀಳಬಹುದು ಎಂದು ಚೀನಾ ಅಧಿಕಾರಿಗಳು ತಿಳಿಸಿರುವುದಾಗಿ ವರದಿಯಾಗಿದೆ.

## ಸಿಬಿಎಸ್‌ಇ 10 ಮತ್ತು 12ನೇ ತರಗತಿ ಪರೀಕ್ಷೆ ಆರಂಭ

**ನವದೆಹಲಿ:** ದೇಶದಾದ್ಯಂತ ಇಂದು ಸಿಬಿಎಸ್‌ಇ 10 ಮತ್ತು 12ನೇ ತರಗತಿಯ ಬೋರ್ಡ್ ಪರೀಕ್ಷೆಗಳು ಆರಂಭವಾಗಿದೆ. ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ (ಸಿಬಿಎಸ್‌ಇ) ಪರೀಕ್ಷೆ ಇಂದು ಆರಂಭವಾಗಿದ್ದು ಭಾರತದಾದ್ಯಂತ ಮತ್ತು ವಿದೇಶದ 26 ದೇಶಗಳಲ್ಲಿ 43 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ.

ಮೊದಲ ದಿನ, 10ನೇ ತರಗತಿಯ ವಿದ್ಯಾರ್ಥಿಗಳು ಗಣಿತ (ಮೂಲ) ಮತ್ತು ಗಣಿತ (ಪ್ರಮಾಣಿತ) ಪರೀಕ್ಷೆ ಬರೆದಿದ್ದು, 12ನೇ ತರಗತಿಯ ಅಭ್ಯರ್ಥಿಗಳು ಜೈವಿಕ ತಂತ್ರಜ್ಞಾನ, ಉದ್ಯಮಶೀಲತೆ, ಎಂಜಿನಿಯರಿಂಗ್ ಗ್ರಾಫಿಕ್ಸ್ ಮತ್ತು ವ್ಯವಹಾರ ಅಧ್ಯಯನ ಪರೀಕ್ಷೆ ಬರೆದು ಮುದಲ ದಿನದ ಮಹತ್ವದ ಹೆಜ್ಜೆ ಮುಂದಿಟ್ಟಿದ್ದಾರೆ.

10ನೇ ತರಗತಿಯ ಪರೀಕ್ಷೆ 8,074 ಕೇಂದ್ರಗಳಲ್ಲಿ ಮತ್ತು 12ನೇ ತರಗತಿಯ ಪರೀಕ್ಷೆ 7,574 ಕೇಂದ್ರಗಳಲ್ಲಿ ಬೆಳಿಗ್ಗೆ 10:30 ರಿಂದ ಮಧ್ಯಾಹ್ನ 1:30 ರವರೆಗೆ ಒಂದೇ ಪಾಳಿಯಲ್ಲಿ ನಡೆಸಲಾಗಿದೆ. ಸಂಚಾರ ಪರಿಸ್ಥಿತಿಗಳನ್ನು ಪರಿಗಣಿಸಿ ಬೆಳಿಗ್ಗೆ 10 ಗಂಟೆಗೆ ಒಳಗೆ ಪರೀಕ್ಷಾ ಕೇಂದ್ರ ತಲುಪಲು ವಿದ್ಯಾರ್ಥಿಗಳಿಗೆ ಸೂಚಿಸಲಾಗಿತ್ತು. ಮೂಲಗಳ ಪ್ರಕಾರ ಸುಮಾರು 14 ಲಕ್ಷ ಹುಡುಗರು ಮತ್ತು 10.9 ಲಕ್ಷ ಹುಡುಗಿಯರು ಸೇರಿದಂತೆ 10ನೇ ತರಗತಿಗೆ ಸುಮಾರು 25 ಲಕ್ಷ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ.



12ನೇ ತರಗತಿಗೆ 18.5 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದು, ಅದರಲ್ಲಿ 10.2 ಲಕ್ಷ ಹುಡುಗರು ಮತ್ತು 8.3 ಲಕ್ಷ ಹುಡುಗಿಯರು ಸೇರಿದ್ದಾರೆ. 10 ನೇ ತರಗತಿಗೆ ಪರೀಕ್ಷೆಗಳು ಆರಂಭಗೊಂಡಿದ್ದು ಮಾರ್ಚ್10 ರಂದು ಮುಕ್ತಾಯಗೊಳ್ಳಲಿದ್ದು, 12ನೇ ತರಗತಿ ಪರೀಕ್ಷೆಗಳು ಏಪ್ರಿಲ್ 10 ರಂದು ಕೊನೆಗೊಳ್ಳಲಿವೆ.

## ಕಲುಷಿತ ನೀರು ಸೇವಿಸಿ 7 ಮಂದಿ ಸಾವು

**ಚಂಡಿಗಢ:** ಹರಿಯಾಣದ ಪಲ್ವಾಲ್ ಜಿಲ್ಲೆಯ ಚಯಾನ್ಸಾ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಏಳು ಮಂದಿ ಸಾವನ್ನಪ್ಪಿದ್ದಾರೆ. ಅಮಾಯಕರ ಈ ಸಾವಿಗೆ ಹೆಪಟೈಟಿಸ್ ಬಿ ಇಲ್ಲವೇ ಕಲುಷಿತ ನೀರು ಸೇವನೆ ಕಾರಣ ಇರಬಹುದು ಎಂದು ಆರೋಗ್ಯಾಧಿಕಾರಿಗಳು ಶಂಕಿಸಿದ್ದಾರೆ.

ಪ್ರಾಥಮಿಕ ತನಿಖೆಯು ವೈರಲ್ ಹೆಪಟೈಟಿಸ್ ಮತ್ತು ಸಂಭವನೀಯ ನೀರಿನ ಮಾಲಿನ್ಯವು ಸಾವಿನ ಹಿಂದೆ ಇದೆ ಎಂದು ಸೂಚಿಸುತ್ತದೆ, ಆದಾಗ್ಯೂ, ದೃಢೀಕರಣಕ್ಕಾಗಿ ಕಾಯಲಾಗುತ್ತಿದೆ. ಈ ಸಾವುಗಳು ಅಧಿಕಾರಿಗಳನ್ನು ತಂಡಗಳನ್ನು ನಿಯೋಜಿಸಲು ಮತ್ತು ನಿವಾಸಿಗಳ ರಕ್ತದ ಮಾದರಿಗಳನ್ನು ಪರೀಕ್ಷಿಸಲು ಪ್ರೇರೇಪಿಸಿವೆ.

ಸಾವನ್ನಪ್ಪಿದ ಏಳು ಜನರಲ್ಲಿ 9 ಮತ್ತು 14 ವರ್ಷ ವಯಸ್ಸಿನ ಇಬ್ಬರು ಹುಡುಗರು, 9 ಮತ್ತು 15 ವರ್ಷ ವಯಸ್ಸಿನ ಇಬ್ಬರು ಹುಡುಗಿಯರು, 42 ವರ್ಷ ವಯಸ್ಸಿನ ವ್ಯಕ್ತಿ, 22 ವರ್ಷ ವಯಸ್ಸಿನ ವ್ಯಕ್ತಿ ಮತ್ತು 67 ವರ್ಷ ವಯಸ್ಸಿನ ಮಹಿಳೆ ಸೇರಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೃತರಲ್ಲಿ ನಾಲ್ವರು ಹೆಪಟೈಟಿಸ್ ಬಿ ವೈರಸ್‌ನಿಂದ ಉಂಟಾಗುವ ಗಂಭೀರ ಯಕೃತ್ತಿನ ಸೋಂಕಿಗೆ ಧನಾತ್ಮಕ ಪರೀಕ್ಷೆ ಮಾಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗ್ರಾಮಕ್ಕೆ ಭೇಟಿ ನೀಡಿದ ಪಲ್ವಾಲ್ ಉಪ ಆಯುಕ್ತ ಹರೀಶ್ ಕುಮಾರ್ ವಶಿಷ್ಠ ಪಿಟಿಐಗೆ ಮಾಹಿತಿ ನೀಡುತ್ತಾ, ಪರಿಸ್ಥಿತಿ ನಿಯಂತ್ರಣದಲ್ಲಿದೆ, ಆದರೂ ಇದನ್ನು 24/7 ಮೇಲ್ವಿಚಾರಣೆ ಮಾಡಲಾಗುತ್ತಿದೆ, ಕಳೆದ ಎರಡು ವಾರಗಳಿಂದ ಗ್ರಾಮದಲ್ಲಿ ತಂಡಗಳು ಬೀಡುಬಿಟ್ಟಿವೆ. ಬಲಿಪಶುಗಳ ವಿವರವಾದ ದಾಖಲೆಗಳು, ಕುಟುಂಬಗಳ ವೈದ್ಯಕೀಯ ಇತಿಹಾಸ ಇತ್ಯಾದಿಗಳನ್ನು ಸಿದ್ಧಪಡಿಸಲಾಗುತ್ತಿದೆ.



> ಈಗ ಪರಿಸ್ಥಿತಿ ನಿಯಂತ್ರಣದಲ್ಲಿದೆ. ತೀವ್ರವಾದ ಹೆಪಟೈಟಿಸ್ ಅಥವಾ ಯಕೃತ್ತಿನ ವೈಫಲ್ಯದಿಂದಾಗಿ ನಾಲ್ಕು ಸಾವುಗಳು ಸಂಭವಿಸಿವೆ. ವಿಸ್ತೃತ ತಪಾಸಣೆ ಮತ್ತು ಪರೀಕ್ಷೆ ನಡೆಯುತ್ತಿದೆ. ಹೆಪಟೈಟಿಸ್ ಎ, ಬಿ, ಸಿ ಮತ್ತು ಇ ಗಾಗಿ ರಕ್ತದ ಮಾದರಿಗಳನ್ನು ಪರೀಕ್ಷಿಸಲಾಗುತ್ತಿದೆ
> -ಸತೀಂದರ್ ವಶಿಷ್ಠ.

ಸೋಂಕಿನ ಮೂಲ ಮತ್ತು ಅದರ ಹರಡುವಿಕೆಯ ಕಾರಣಗಳನ್ನು ನಿಖರವಾಗಿ ಗುರುತಿಸಬಹುದೆಂದು ಖಚಿತಪಡಿಸಿಕೊಳ್ಳಲು ಆರೋಗ್ಯ ಇಲಾಖೆಯು ಫರಿದಾಬಾದ್ ಮತ್ತು ಗುರುಗ್ರಾಮ್‌ನ ಆಸ್ಪತ್ರೆಗಳನ್ನು ಸಂಪರ್ಕಿಸಿ ಚಿಕಿತ್ಸೆಯ ದಾಖಲೆಗಳನ್ನು ಸಂಗ್ರಹಿಸುತ್ತಿದೆ ಎಂದು ಹೇಳಿದರು.

## ಇಸ್ರೇಲ್ ದಾಳಿ: 12 ಮಂದಿ ಸಾವು

**ಟೆಲ್ ಅವೀವಾ:** ಗಾಜಾದ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ 12 ಮಂದಿ ಸಾವನ್ನಪ್ಪಿದ್ದು ಹಲವು ಮಂದಿಗೆ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಉತ್ತರ ಗಾಜಾದಲ್ಲಿ ಟೆಂಟ್ ಶಿಬಿರದ ಮೇಲೆ ನಡೆದ ದಾಳಿಯಲ್ಲಿ ಕನಿಷ್ಠ ಆರು ಜನರು ಸಾವನ್ನಪ್ಪಿದ್ದಾರೆ ಮತ್ತು ಪಟ್ಟಿಯ ದಕ್ಷಿಣದಲ್ಲಿ ನಡೆದ ಮತ್ತೊಂದು ದಾಳಿಯಲ್ಲಿ ಐದು ಜನರು ಸಾವನ್ನಪ್ಪಿದ್ದಾರೆ ಮತ್ತು ಗಾಯಗೊಂಡಿದ್ದ ಓರ್ವ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಪ್ಯಾಲೆಸ್ತೀನಿಯನ್ ರೆಡ್ ಕ್ರೆಸೆಂಟ್ ಹೇಳಿದೆ. ಹಮಾಸ್‌ನ ಕದನ ವಿರಾಮ ಉಲ್ಲಂಘನೆಗೆ ಪ್ರತಿಕ್ರಿಯೆಯಾಗಿ ಭಯೋತ್ಪಾದಕ ಗುರಿಗಳ ಮೇಲೆ ದಾಳಿ ನಡೆಸಲಾಗಿದೆ ಮತ್ತು ಇಸ್ರೇಲ್ ಮಿಲಿಟರಿ ನಿಯಂತ್ರಿಸುವ ಪಟ್ಟಿಯ ಪ್ರದೇಶಕ್ಕೆ ಸುರಂಗದಿಂದ ಹೊರಬಂದ ನಂತರ ಉಗ್ರಗಾಮಿಗಳನ್ನು ದಾಳಿ ನಡೆಸಿ ಹತ್ಯೆ ಮಾಡಲಾಗಿದೆ ಎಂದು ಇಸ್ರೇಲ್ ರಕ್ಷಣಾ ಪಡೆಗಳು ತಮ್ಮ ಕೆಲಸವನ್ನು ಸಮರ್ಥಿಸಿಕೊಂಡಿದ್ದಾರೆ.

ಅಕ್ಟೋಬರ್ 10 ರಂದು ಜಾರಿಗೆ ಬಂದ ನಂತರ ಇಸ್ರೇಲ್ ಮತ್ತು ಹಮಾಸ್ ಎರಡೂ ಕದನ ವಿರಾಮ ಒಪ್ಪಂದದ ದೈನಂದಿನ ಉಲ್ಲಂಘನೆಗಳ ಬಗ್ಗೆ ಪರಸ್ಪರ ಆರೋಪ ಹೊರಿಸುತ್ತಿವೆ. ಹೊಸದಾಗಿ ನಡೆದ ದಾಳಿಯಲ್ಲಿ 11 ಜನರು ಸಾವನ್ನಪ್ಪಿದ್ದಾರೆ ಎಂದು ಗಾಜಾದ ನಾಗರಿಕ ರಕ್ಷಣಾ ಇಲಾಖೆ ಹೇಳಿದೆ.



**600 ಮಂದಿ ಸಾವು:** ವಾಯುದಾಳಿಯಿಂದ ಹೊರತುಪಡಿಸಿ, ಗುಂಡಿನ ಚಕಮಕಿಯಲ್ಲಿ 12ನೇ ವ್ಯಕ್ತಿ ಸಾವನ್ನಪ್ಪಿದ್ದಾರೆ ಎಂದು ಅಲ್-ಶಿಫಾ ಆಸ್ಪತ್ರೆಯ ಸಿಬ್ಬಂದಿ ತಿಳಿಸಿದ್ದಾರೆ. ಕದನ ವಿರಾಮ ಜಾರಿಗೆ ಬಂದ ನಂತರ ಕನಿಷ್ಠ 600 ಜನರು ಸಾವನ್ನಪ್ಪಿದ್ದಾರೆ ಎಂದು ಹಮಾಸ್ ನಡೆಸುತ್ತಿರುವ ಗಾಜಾ ಆರೋಗ್ಯ ಸಚಿವಾಲಯ ಹೇಳಿದೆ.

ಈ ತಿಂಗಳ ಆರಂಭದಲ್ಲಿ ಗಾಜಾದಾದ್ಯಂತ ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ ಕನಿಷ್ಠ 32 ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕ ಮಧ್ಯಸ್ಥಿಕೆಯ ಕದನ ವಿರಾಮ ಒಪ್ಪಂದದ ಎರಡನೇ ಹಂತದ ಅನುಷ್ಠಾನಕ್ಕೆ ಸಿದ್ಧತೆಗಳು ಮುಂದುವರಿದಿರುವಂತೆಯೇ ಇತ್ತೀಚಿನ ದಾಳಿಗಳು ನಡೆದಿವೆ.

## ನೂತನ ಪ್ರಧಾನಮಂತ್ರಿಯಾಗಿ ತಾರಿಕ್ ರಹಮಾನ್ ಅಧಿಕಾರ ಸ್ವೀಕಾರ

**ಢಾಕಾ:** ತಾರಿಕ್ ರಹಮಾನ್ ಮಂಗಳವಾರ ಬಾಂಗ್ಲಾದೇಶದ ಪ್ರಧಾನಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಾರ್ಟಿ (ಬಿಎನ್‌ಪಿ) ಸಂಸದೀಯ ಪಕ್ಷದ ನಾಯಕನಾಗಿ ಆಯ್ಕೆಯಾದ ನಂತರ ಅವರು ಅಧಿಕಾರ ಸ್ವೀಕರಿಸಿದರು.

ಢಾಕಾದ ಜಾತೀಯ ಸಂಸತ್ ಭವನ ನಲ್ಲಿ ನಡೆದ ಸಮಾರಂಭದಲ್ಲಿ ರಹಮಾನ್ ಪ್ರಮಾಣ ವಚನ ಸ್ವೀಕರಿಸಿದರು. ಇತ್ತೀಚಿನ ಸಂಸತ್ ಚುನಾವಣೆಯಲ್ಲಿ ಬಿಎನ್‌ಪಿ 297 ಸ್ಥಾನಗಳಲ್ಲಿ 209 ಸ್ಥಾನಗಳನ್ನು ಗೆದ್ದಿದೆ. ಬಲಪಂಥೀಯ ಜಮಾತ್-ಎ-ಇಸ್ಲಾಮಿ 68 ಸ್ಥಾನಗಳನ್ನು ಪಡೆದುಕೊಂಡಿದೆ. ಮಾಜಿ ಪ್ರಧಾನಮಂತ್ರಿ ಶೇಖ್ ಹಸೀನಾ ಅವರ ಅವಾಮಿ ಲೀಗ್ ಪಕ್ಷವನ್ನು ಚುನಾವಣೆಯಲ್ಲಿ ಸ್ಪರ್ಧಿಸಲು ನಿರ್ಬಂಧಿಸಲಾಗಿತ್ತು.

ರಹಮಾನ್ ಜೊತೆಗೂಡಿ 25 ಸಚಿವರು ಹಾಗೂ 24 ರಾಜ್ಯ ಸಚಿವರು ಪ್ರಮಾಣ ವಚನ ಸ್ವೀಕರಿಸಿದರು. ಒಟ್ಟು 50 ಸದಸ್ಯರ ಸಚಿವ ಸಂಪುಟದಲ್ಲಿ 25 ಸಚಿವರು, 24 ರಾಜ್ಯ ಸಚಿವರು ಮತ್ತು ಮೂವರು ತಾಂತ್ರಿಕ ತಜ್ಞರು ಸೇರಿದ್ದಾರೆ. 25 ಸಚಿವರಲ್ಲಿ 17 ಮಂದಿ ಹೊಸ ಮುಖಗಳಾಗಿದ್ದು, ಎಲ್ಲಾ ರಾಜ್ಯ ಸಚಿವರು ಕೂಡ ಇದೇ ಮೊದಲ ಬಾರಿಗೆ ಪದಗ್ರಹಣ ಮಾಡಿದ್ದಾರೆ. ರಹಮಾನ್ ಕೂಡ ಇದೇ ಮೊದಲ ಬಾರಿ ಸಚಿವ ಸಂಪುಟದ ಸದಸ್ಯರಾಗಿದ್ದಾರೆ.



### ಸಂಸತ್ತಿಗೆ ಆಯ್ಕೆಯಾದ ಇಬ್ಬರು ಹಿಂದೂಗಳು

ಪ್ರಮಾಣ ವಚನ ಸಮಾರಂಭದಲ್ಲಿ ಭಾರತವನ್ನು ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಪ್ರತಿನಿಧಿಸಿದರು. ಅವರು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಸೇರಿದಂತೆ ಅಧಿಕಾರಿಗಳೊಂದಿಗೆ ಢಾಕಾಗೆ ಆಗಮಿಸಿದರು. ಆಗಮಿಸಿದ ವೇಳೆ ಅವರನ್ನು ಬಾಂಗ್ಲಾದೇಶದ ವಿದೇಶಾಂಗ ಕಾರ್ಯದರ್ಶಿ ನಜ್ರುಲ್ ಇಸ್ಲಾಂ ಸ್ವಾಗತಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ರಹಮಾನ್ ಗೆಲುವಿಗೆ ಶುಭಾಶಯ ಕೋರಿದ್ದರೂ, ಮುಂಬೈಯಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಅವರೊಂದಿಗೆ ಪೂರ್ವನಿಗದಿತ ಸಭೆ ಇದ್ದ ಕಾರಣ ಸಮಾರಂಭಕ್ಕೆ ಹಾಜರಾಗಲಿಲ್ಲ. ಇನ್ನೊಂದೆಡೆ, ಮಧ್ಯಂತರ ಸರ್ಕಾರದ ನಾಯಕ ಮಹಮ್ಮದ್ ಯೂನಸ್ ರಾಜೀನಾಮೆ ನೀಡಿದರು. ಮಧ್ಯಂತರ ಸರ್ಕಾರ ಸ್ಥಾನ ತ್ಯಜಿಸುತ್ತಿದೆ. ಆದರೆ ಪ್ರಜಾಪ್ರಭುತ್ವ, ಮಾತಿನ ಸ್ವಾತಂತ್ರ್ಯ ಮತ್ತು ಮೂಲಭೂತ ಹಕ್ಕುಗಳ ಅಭ್ಯಾಸ ನಿಲ್ಲಬಾರದು, ಎಂದು ಅವರು ರಾಷ್ಟ್ರಕ್ಕೆ ವಿದಾಯ ಸಂದೇಶದಲ್ಲಿ ಹೇಳಿದರು.

ಪ್ರಮಾಣ ವಚನ ಸಮಾರಂಭದ ಹಿನ್ನೆಲೆಯಲ್ಲಿ ಜಾತೀಯ ಸಂಸತ್ ಭವನ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭದ್ರತೆಯನ್ನು ಕಟ್ಟುನಿಟ್ಟಾಗಿ ಏರ್ಪಡಿಸಲಾಗಿತ್ತು. ವಿಶೇಷ ಭದ್ರತಾ ಪಡೆ, ಪೊಲೀಸ್ ಸಿಬ್ಬಂದಿ, ಪ್ರೆಸಿಡೆನ್ಷಿಯಲ್ ಗಾರ್ಡ್ ರೆಜಿಮೆಂಟ್, ಜಾಮರ್ ವ್ಯವಸ್ಥೆಗಳು ಹಾಗೂ ವೈದ್ಯಕೀಯ ಸಹಾಯ ತಂಡಗಳನ್ನು ನಿಯೋಜಿಸಲಾಗಿತ್ತು.

## ಭಾರತದಲ್ಲಿ ಬರಲಿವೆ 50ಕ್ಕೂ ಹೆಚ್ಚು ಡೀಪ್‌ಟೆಕ್ ಕಂಪನಿಗಳು: ಅಶ್ವಿನಿ ವೈಷ್ಣವ್

**ನವದೆಹಲಿ:** ಕ್ರಿಯೇಟ್ ಇನ್ ಇಂಡಿಯಾ ಉಪಕ್ರಮದ ಅಡಿಯಲ್ಲಿ ಮುಂಬರುವ ವರ್ಷಗಳಲ್ಲಿ ಭಾರತದಲ್ಲಿ 50ಕ್ಕೂ ಹೆಚ್ಚು ಡೀಪ್-ಟೆಕ್ ಕಂಪನಿಗಳು ತಲೆ ಎತ್ತುವ ನಿರೀಕ್ಷೆ ಇದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವ ಡಾ. ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆಯಿಂದ ನಡೆಯುತ್ತಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಯ ಭಾಗವಾಗಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಎಐ ಆವಿಷ್ಕಾರಗಳಿಗೆ ಪೂರಕವಾಗಿ ಭಾರತದ ಸೆಮಿಕಂಡಕ್ಟರ್ ಮಿಷನ್ನ ಹಾದಿ ಸಾಗುತ್ತದೆ ಎಂದಿದ್ದಾರೆ.

ಹಾಗೆಯೇ, ಮಿಷನ್‌ನ ಮುಂದಿನ ಹಂತದಲ್ಲಿ ಚಿಪ್ ಡಿಸೈನ್ ಮೇಲೆ ಪ್ರಧಾನ ಗಮನ ಇರುತ್ತದೆ ಎಂದು ವಿವರಿಸಿದ್ದಾರೆ. ಇದೇ ವೇಳೆ, ಭಾರತದಲ್ಲಿ 38,000 ಜಿಪಿಯುಗಳಿದ್ದು, ಈಗ ಮತ್ತಷ್ಟು 20,000 ಜಿಪಿಯುಗಳು ಸೇರ್ಪಡೆಯಾಗಲಿವೆ. ಇದರಿಂದ ದೇಶದ ಎಐ ಕಂಪ್ಯೂಟ್ ಇನ್ಫ್ರಾಸ್ಟ್ರಕ್ಚರ್ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಅಶ್ವಿನಿ ವೈಷ್ಣವ್ ಹೇಳಿದ್ದಾರೆ.



ಭಾರತದ ಐಟಿ ಸೆಕ್ಟರ್ ನಮ್ಮ ಪಾಲಿಗೆ ಮಹತ್ವದ ಆಸ್ತಿ ಎನಿಸಿದೆ. ಯಾವುದೇ ತಂತ್ರಜ್ಞಾನ ಪರಿವರ್ತನೆಯ ಸಂದರ್ಭದಲ್ಲಿ ಉದ್ಯಮ, ಶೈಕ್ಷಣಿಕ ಮತ್ತು ಸರ್ಕಾರದ ನಡುವೆ ಸಹಭಾಗಿತ್ವ ಸಾಧಿಸುವುದು ಅಗತ್ಯ. ಈಗಿರುವ ಕೆಲಸಗಾರರಿಗೆ ಕೌಶಲ್ಯ ಮರುಪೂರಣ, ಕೌಶಲ್ಯ ಅಭಿವೃದ್ಧಿ, ಹೊಸ ಪ್ರತಿಭೆಗಳ ಬೆಳವಣಿಗೆ, ಮತ್ತು ಉದಯೋನ್ಮುಖ ತಂತ್ರಜ್ಞಾನಗಳಿಗೆ ಭವಿಷ್ಯದ ತಲೆಮಾರುಗಳನ್ನು ಸಜ್ಜುಗೊಳಿಸುವುದು, ಈ ಮೂರು ಕ್ಷೇತ್ರಗಳಲ್ಲಿ ಉದ್ಯಮ ಮತ್ತು ಶಿಕ್ಷಣ ವಲಯದ ಜೊತೆ ಸಹಭಾಗಿತ್ವ ಮಾಡಿಕೊಳ್ಳುತ್ತಿದ್ದೇವೆ ಎಂದು ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

# ವೀಸಾ ನಿಮ್ಮ ಹಕ್ಕಲ್ಲ, ನಾವು ಕೊಡ್ತೋ ಪರ್ಮಿಶನ್ ಅಷ್ಟೇ?

● ದೇಶದ ಹಿತಾಸಕ್ತಿಗೆ ಧಕ್ಕೆಯಾದ್ರೆ, ವೀಸಾ ಕ್ಯಾನ್ಸಲ್ ಪಕ್ಕಾ ಎಂದು ಮಾರ್ಕೊ ರುಬಿಯೊ ವಾರ್ನಿಂಗ್

**ವಾಷಿಂಗ್ಟನ್:** ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಂಡಾಗಿನಿಂದಲೂ ಯುಎಸ್ ವೀಸಾ ಸಿಗುವುದು ಎಂಬ ವಿಚಾರವೇ ಅತ್ಯಂತ ಕಷ್ಟಕರವಾವಾದ ಸಂಗತಿ ಎಂಬಂತಾಗಿದೆ. ಅಮೆರಿಕಾದಲ್ಲಿ ಹೆಚ್ಚುತ್ತಿರುವ ವಲಸೆ ವಿರೋಧಿ ನೀತಿಗಳಿಂದ ಈಗಾಗಲೇ ವೀಸಾ ಸಿಗುವುದೇ ಅತ್ಯಂತ ದೊಡ್ಡ ಸಮಸ್ಯೆ, ಒಂದು ವೇಳೆ ವೀಸಾ ಸಿಕ್ಕರೂ ಯುಎಸ್‌ನಲ್ಲಿ ಭಯದಲ್ಲೇ ಬದುಕುವ ವಾತವರಣ ಸೃಷ್ಟಿಯಾಗಿದೆ.

ಇದಕ್ಕೆ ಮತ್ತಷ್ಟು ಪುಷ್ಟಿ ನೀಡುವಂತೆ ಅಮೆರಿಕಾದ ಅಧಿಕಾರಿಗಳು ದಿನಕ್ಕೊಂದು ಹೇಳಿಕೆಗಳನ್ನು, ನೀತಿಯನ್ನು ಮುಂದಿಡುತ್ತಿದ್ದು, ಸದ್ಯ ಅಮೆರಿಕಾದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಯುಎಸ್ ವೀಸಾ ಯಾರ ಹಕ್ಕು ಅಲ್ಲ, ಒಂದುವೇಳೆ ವೀಸಾ ಪಡೆದಿರುವ ವಿದೇಶಿ ಪ್ರಜೆಗಳು ಅಮೆರಿಕಾದ ರಾಷ್ಟ್ರೀಯಹಿತಾಸಕ್ತಿಗೆ ಧಕ್ಕೆ ತರುವ ಚಟುವಟಿಕೆಗಳನ್ನು ತೊಡಗಿಸಿಕೊಂಡಿರುವುದು ಕಂಡುಬಂದಲ್ಲಿ ಅಂತವರ ವೀಸಾವನ್ನು ರದ್ದುಗೊಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

- ಅಮೆರಿಕಾ ವೀಸಾ ಪಡೆಯಲು ಬಯಸುವವರಿಗೆ ಮತ್ತೊಂದು ವಾರ್ನಿಂಗ್ ಕೊಟ್ಟ ಯುಎಸ್
- ಅಮೆರಿಕಾ ವೀಸಾ ನಿಮ್ಮ ಹಕ್ಕಲ್ಲ ನಾವು ನಿಮಗೆ ನೀಡುವ ಅನುಮತಿಯಷ್ಟೇ ಎಂದ ಮಾರ್ಕೊ ರುಬಿಯೊ
- ವೀಸಾ ಪಡೆದು ಅಮೆರಿಕಾದಲ್ಲಿರುವಾಗ ರಾಷ್ಟ್ರೀಯ ಹಿತಾಸಕ್ತಿಗೆ ಧಕ್ಕೆಯುಂಟಾಗುವ ಕೆಲಸ ಮಾಡಿದ್ರೆ ವೀಸಾ ಕ್ಯಾನ್ಸಲ್ ಆಗೋದು ಪಕ್ಕಾ

ಬುಡಾಪೆಸ್ಟ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಮಾರ್ಕೊ ರುಬಿಯೊ ವೀಸಾ ಅನುಮತಿಗಳು ಷರತ್ತು ಬದ್ಧವಾಗಿದೆ ಎಂದು ಪುನರುಚ್ಚರಿಸಿದ್ದಾರೆ. ಈ ಕುರಿತು ಯಾರೂ ಸಹ ಯುಎಸ್ ವೀಸಾವನ್ನು ಹಕ್ಕೆಂದು ಭಾವಿಸಲು ಸಾಧ್ಯವಿಲ್ಲ. ನಾನು ಈಗಾಗಲೇ ಈ ವಿಚಾರವನ್ನು ಹಲವು ಬಾರಿ ಹೇಳಿದ್ದೇನೆ. ಆದಾಗ್ಯೂ, ಕೆಲವರಿಗೆ ಈ ವಿಚಾರವನ್ನು ಅರ್ಥಮಾಡಿಕೊಳ್ಳಲು ಯಾಕೆ ಕಷ್ಟವಾಗುತ್ತಿದೆ ಎಂದು ನನಗೆ ತಿಳಿಯುತ್ತಿಲ್ಲ ಎಂದಿದ್ದಾರೆ.

### ರಾಷ್ಟ್ರೀಯ ಹಿತಾಸಕ್ತಿಗೆ ಧಕ್ಕೆ



ಮುಂದುವರೆದು, ವೀಸಾ ಯಾವುದೇ ರೀತಿಯ ಹಕ್ಕಲ್ಲ. ಸಂವಿಧಾನಿಕವಾಗಿ ವೀಸಾಗೆ ಯಾವುದೇ ರೀತಿಯ ಹಕ್ಕನ್ನು ಹೊಂದಿಲ್ಲ. ವೀಸಾ ಕೇವಲ ನಮ್ಮ ದೇಶವನ್ನು ಪ್ರವೇಶಿಸಲು ಸಂದರ್ಶಕರು/ವಿದೇಶಿ ಪ್ರಜೆಗಳಿಗೆ ನಾವು ನೀಡುವ ಅನುಮತಿಯಷ್ಟೇ ಎಂದಿದ್ದಾರೆ. ಅಲ್ಲದೆ, ಈ ನೀತಿಯು ವಿದ್ಯಾರ್ಥಿಗಳು, ಪ್ರವಾಸಿಗರು ಮತ್ತು ಪತ್ರಕರ್ತರು ಸೇರಿದಂತೆ ಎಲ್ಲಾ ವರ್ಗದ ತಾತ್ಕಾಲಿಕ ಸಂದರ್ಶಕರಿಗೆ ಅನ್ವಯಿಸುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇನ್ನು, ವಿದ್ಯಾರ್ಥಿಗಳಾಗಿ, ಪ್ರವಾಸಿಗರಾಗಿ ಮತ್ತು ಪತ್ರಕರ್ತರಾಗಿ ವೀಸಾದ ಮೂಲಕ ಅಮೆರಿಕಾವನ್ನು ಪ್ರವೇಶಿಸಿದವರು ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗಳಿಗೆ ವಿರುದ್ಧವಾದ ಚಟುವಟಿಕೆಗಳನ್ನು ಕೈಗೊಂಡರೆ ಅಂತಹವರ ವೀಸಾವನ್ನು ರದ್ದುಮಾಡುತ್ತೇವೆ. ಏಕೆಂದರೆ, ಯಾರಾದರೂ ಅಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುತ್ತಾರೆಂದು ನಮಗೆ ತಿಳಿದಿದ್ದರೆ, ಆರಂಭಿಕವಾಗಿಯೇ ನಾವು ಬಹುಶಃ ಅಂತವರಿಗೆ ವೀಸಾ ನೀಡುತ್ತಿರಲಿಲ್ಲ ಎಂದು ತಿಳಿಸಿದ್ದಾರೆ.

### 75 ದೇಶಗಳ ವೀಸಾ ಸ್ಥಗಿತ

ಇನ್ನು, ಮಾರ್ಕೊ ರುಬಿಯೊ ವಲಸೆ ನೀತಿಗಳ ಬಗ್ಗೆ ಕಠಿಣ ನಿಲುವನ್ನು ಹಲವು ಸಂದರ್ಭಗಳಲ್ಲಿ ಉಲ್ಲೇಖಿಸಿದ್ದಾರೆ. ಈ ಹಿಂದೆ ಕಳೆದ ತಿಂಗಳು ಮಾರ್ಕೊ ರುಬಿಯೊ ನೇತೃತ್ವದ ಅಮೆರಿಕಾದ ವಿದೇಶಾಂಗ ಇಲಾಖೆ ಅಮೆರಿಕನ್ನರಿಂದ ಸ್ವೀಕಾರಾರ್ಹವಲ್ಲದ ದರದಲ್ಲಿ ಸೇವೆಯ ಲಾಭಗಳನ್ನು ಪಡೆಯುತ್ತಿರುವ ವಿದೇಶಿ ಪ್ರಜೆಗಳನ್ನು ನಿರ್ಬಂಧಿಸಬೇಕು ಎಂದು ಹೇಳಿ ಬರೋಬ್ಬರಿ 75 ದೇಶಗಳ ವೀಸಾ ಅನುಮೋದನೆಯನ್ನು ಸ್ಥಗಿತಗೊಳಿಸಿತ್ತು.

ಹೀಗೆ ಅಮೆರಿಕಾ ವೀಸ ಸಿಗುವುದು ಈಗಾಗಲೇ ಕಠಿಣವಾಗಿರುವ ಪರಿಸ್ಥಿತಿಯಲ್ಲಿ ಮಾರ್ಕೊ ರುಬಿಯೋ ಅವರ ಈ ಹೇಳಿಕೆಗಳು ಅಮೆರಿಕಾದಲ್ಲಿ ಯಾವುದೇ ಸಣ್ಣ ತಪ್ಪು ನಡೆದರು ವೀಸಾ ರದ್ದಾಗುವ ಆತಂಕವನ್ನು ವಿದೇಶಿ ಪ್ರಜೆಗಳನ್ನು ಮೂಡಿಸುವಂತೆ ಮಾಡಿದೆ.

## ಮಿನಿ ನ್ಯೂಸ್

### ಬೈಕ್‌ನಲ್ಲಿ ಬಂದು ಮಹಿಳೆ ಮೇಲೆ ಆ್ಯಸಿಡ್ ದಾಳಿ ಮಾಡಿದ ದುಷ್ಕರ್ಮಿ

**ಲುಧಿಯಾನ:** ಬೈಕ್‌ನಲ್ಲಿ ಬಂದ ದುಷ್ಕರ್ಮಿಯೊಬ್ಬ ಮಹಿಳೆ ಮೇಲೆ ಆ್ಯಸಿಡ್ ಎರಚಿರುವ ಹೀನಕೃತ್ಯ ಪಂಜಾಬ್‌ನ ಲೂಧಿಯಾನದಲ್ಲಿ ನಡೆದಿದೆ. ಲೂಧಿಯಾನದ ದುಗ್ರಿ ಕಾಲೋನಿಯಲ್ಲಿ 40 ವರ್ಷದ ಕಾರ್ಮಿಕ ಮಹಿಳೆಯ ಮೇಲೆ ಮೋಟಾರ್ ಸೈಕಲ್‌ನಲ್ಲಿ ಬಂದ ಅಪರಿಚಿತ ವ್ಯಕ್ತಿಯೊಬ್ಬ ಆ್ಯಸಿಡ್ ಎರಚಿದ್ದು, ಆಕೆ ಗಂಭಿರವಾಗಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬಲಿಪಶು ಉತ್ತರ ಪ್ರದೇಶದವರಾಗಿದ್ದು, ಮೂರು ಮಕ್ಕಳ ತಾಯಿಯಾಗಿದ್ದಾರೆ. ದಾಳಿಕೋರ ವಿಳಾಸ ಕೇಳುವ ನೆಪದಲ್ಲಿ ಮಹಿಳೆಯನ್ನು ತನ್ನ ಕಡೆಗೆ ಕರೆದ, ನಂತರ ಆಕೆಯ ಮೇಲೆ ಆಸಿಡ್ ಎಸೆದಿದ್ದಾನೆ ಎಂದು ಆರೋಪಿಸಲಾಗಿದೆ. ಮಹಿಳೆಯ ಮುಖ ಮತ್ತು ಕಣ್ಣುಗಳು ದಾಳಿಯ ತೀವ್ರತೆಯನ್ನು ತೋರಿಸಿದ್ದು, ಚಿಕಿತ್ಸೆಗಾಗಿ ಆಕೆಯನ್ನು ಸಿವಿಲ್ ಆಸ್ಪತ್ರೆಗೆ ಸಾಗಿಸಲಾಗಿದೆ. ಹೆಲ್ಮೆಟ್ ಧರಿಸಿದ್ದ ಆರೋಪಿ ಸ್ಥಳದಿಂದ ಪರಾರಿಯಾಗಿದ್ದಾನೆ. ದುಷ್ಕರ್ಮಿಯನ್ನು ಪತ್ತೆಹಚ್ಚಲು ಸಿಸಿಟಿವಿ ದೃಶ್ಯಾವಳಿಗಳನ್ನು ವಿಶ್ಲೇಷಿಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯನ್ನು ಗುರುತಿಸಲು ಮತ್ತು ಬಂಧಿಸಲು ನಾವು ಲಭ್ಯವಿರುವ ಎಲ್ಲಾ ಸಂಪನ್ಮೂಲಗಳನ್ನು ಬಳಸುತ್ತಿದ್ದೇವೆ ಎಂದು ಡಿಸಿಪಿ ಜಸ್ಕರಂಜಿತ್ ಸಿಂಗ್ ತೇಜ ಹೇಳಿದರು. ದಾಳಿಕೋರನಿಗಾಗಿ ಹುಡುಕಾಟ ನಡೆಯುತ್ತಿದೆ, ಮತ್ತು ಮಾಹಿತಿ ಇರುವ ಯಾರಾದರೂ ಮುಂದೆ ಬರುವಂತೆ ಅಧಿಕಾರಿಗಳು ಒತ್ತಾಯಿಸಿದ್ದಾರೆ.

### ಪ್ರೇಯಸಿಯನ್ನು ಕೊಂದು ಆಕೆಯ ಆತ್ಮದ ವಶೀಕರಣಕ್ಕೆ ಯತ್ನಿಸಿದ್ದ ಸೈಕೋ ಲವ್ವರ್

**ಭೋಪಾಲ್:** ಮದುವೆಗೆ ಒಲ್ಲೆ ಎಂದ ಗೆಳತಿಯ ಎದೆಗೆ ಚಾಕುವಿನಿಂದ ಇರಿದು ಕೊಲೆ ಮಾಡಿ ನಂತರ ಆಕೆಯ ಆತದ ವಶೀಕರಣಕ್ಕೆ ಯತ್ನಿಸಿರುವ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಪ್ರೇಯಸಿಯನ್ನು ಕೊಲೆ ಮಾಡಿ ಆತದ ವಶೀಕರಣಕ್ಕೆ ಯತ್ನಿಸರುವ ಆರೋಪಿಯನ್ನು ಪಿಯೂಷ್ ಧಮ್ನೋಡಿಯಾ ಎಂದು ಗುರುತಿಸಲಾಗಿದೆ. ಇಂದೋರ್‌ನ ದ್ವಾರಕಪುರಿಯ ಅಪಾರ್ಟ್‌ಮೆಂಟ್ ವೊಂದರಲ್ಲಿ ತನ್ನೊಂದಿಗೆ ಸಂಬಂಧದಲ್ಲಿದ್ದ 24 ವರ್ಷದ ಗೆಳತಿಯನ್ನು ಪಿಯೂಷ್ ಕತ್ತು ಹಿಸುಕಿ ಹತ್ಯೆ ಮಾಡಿ, ಶವದ ಮೇಲೆ ಅತ್ಯಾಚಾರ ನಡೆಸಿದ್ದಾನೆ. ಮದುವೆ ವಿಚಾರಕ್ಕೆ ಇಬ್ಬರ ನಡುವೆ ಜಗಳವಾಗಿತ್ತು. ಗಲಾಟೆ ತಾರಕಕ್ಕೇರಿದ ಬಳಿಕ ಹತ್ಯೆ ನಡೆದಿದೆ. ಬಳಿಕ ಅಲ್ಲಿಂದ ಮಹಾರಾಷ್ಟ್ರದ ಪನ್ವೇಲ್‌ಗೆ ಆರೋಪಿ ಪ್ರಯಾಣಿಸಿದ್ದ, ಖಾಸಗಿ ಹೋಟೆಲ್‌ನಲ್ಲಿ ಯುವತಿ ಆತ್ಮ ವಶೀಕರಣಕ್ಕೆ ಮಾಟ ಮಂತ್ರ ಮಾಡಿದ್ದ. ಆತ್ಮದ ಜೊತೆಗೆ ಮಾತುಕತೆ ನಡೆಸಲು ಆರೋಪಿ ಯತ್ನಿಸಿದ್ದ. ಯುವತಿ ನಾಪತ್ತೆಯಾದ ಬಳಿಕ ಫೆ.11 ರಂದು ಯುವತಿ ತಂದೆಯಿಂದ ದೂರು ದಾಖಲಾಗಿತ್ತು.

### ಸೀರೆಗೆ ಬೆಂಕಿ ತಗುಲಿ ವೃದ್ಧೆ ಸಾವು

**ಥಾಣೆ:** ದೇವರ ದರ್ಶನಕ್ಕೆ ಹೋಗಿದ್ದ ವೃದ್ಧೆಯೊಬ್ಬರ ಸೀರೆಗೆ ಆಕಸ್ಮಿಕ ಬೆಂಕಿ ತಗುಲಿದ ಪರಿಣಾಮ ಆಕೆ ಮೃತಪಟ್ಟಿರುವ ಘಟನೆ ಥಾಣೆಯಲ್ಲಿ ನಡೆದಿದೆ. ಮಹಾರಾಷ್ಟ್ರದ ಥಾಣೆ ಜಿಲ್ಲೆಯ ದೇವಸ್ಥಾನವೊಂದರಲ್ಲಿ ಸೀರೆಗೆ ಬೆಂಕಿ ತಗುಲಿ 73 ವರ್ಷದ ಮಹಿಳೆಯೊಬ್ಬರು ಸುಟ್ಟ ಗಾಯಗಳಿಂದ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಂಬರ್‌ನಾಥ್‌ನ ಬುವಾಪಾಡ ನಿವಾಸಿಯಾಗಿರುವ ಬಿಂದೇಶ್ವರಿ ಕುಶಾವಾ ಶಿವರಾತ್ರಿ ಹಬ್ಬದ ದಿನ ದೇವಸ್ಥಾನಕ್ಕೆ ಪ್ರಾರ್ಥನೆ ಸಲ್ಲಿಸಲು ಹೋಗಿದ್ದರು. ಆಕಸ್ಮಿಕವಾಗಿ ಆಕೆಯ ಸೀರೆ ದೇವಸ್ಥಾನದಲ್ಲಿ ಬೆಳಗಿದ ದಿಯಾ (ಸಾಂಪ್ರದಾಯಿಕ ಎಣ್ಣೆ ದೀಪ) ಸ್ಪರ್ಶಿಸಿ ಬೆಂಕಿಯಲ್ಲಿ ಸುಟ್ಟು ಕರಕಲಾದರು ಎಂದು ಅಂಬರ್ ನಾಥ್ ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತಕ್ಷಣ ಅವರನ್ನು ಉಲ್ಹಾಸ್‌ನಗರ ಕೇಂದ್ರ ಆಸ್ಪತ್ರೆಗೆ ಕರೆದೊಯ್ದರು, ಅಲ್ಲಿ ಅವರು ನಿನ್ನೆ ನಿಧನರಾಗಿದ್ದಾರೆ ಎಂದು ಅವರು ಹೇಳಿದರು. ಪೊಲೀಸರು ಆಕಸ್ಮಿಕ ಸಾವು ಪ್ರಕರಣ ದಾಖಲಿಸಿದ್ದಾರೆ.

### ಭಾರತದಲ್ಲಿ ಹಸಿರು ಹೈಡ್ರೋಜನ್ ಬೆಲೆ ದಾಖಲೆಯ ಮಟ್ಟಕ್ಕೆ ಇಳಿಕೆ: ಜೋಶಿ

**ಮುಂಬೈ:** ಭಾರತದಲ್ಲಿ ಹಸಿರು ಹೈಡ್ರೋಜನ್ ಬೆಲೆ ಐತಿಹಾಸಿಕ ಮಟ್ಟಕ್ಕೆ ಇಳಿಕೆ ಕಂಡಿದೆ. 279 ರೂ. ದರದೊಂದಿಗೆ ಭಾರತ ಹಸಿರು ಹೈಡ್ರೋಜನ್ ಕ್ಷೇತ್ರದಲ್ಲಿ ಹೊಸ ಜಾಗತಿಕ ಮಾನದಂಡ ಸ್ಥಾಪಿಸಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಘೋಷಿಸಿದ್ದಾರೆ. ಮುಂಬೈಯಲ್ಲಿ ಆಯೋಜಿಸಿದ್ದ ಹವಾಮಾನ ಸಪ್ತಾಹ 2026 ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್ ಅಡಿಯಲ್ಲಿ ಹಸಿರು ಹೈಡ್ರೋಜನ್ ಬೆಲೆ ಪ್ರತಿ ಕೆಜಿಗೆ 279 ರೂ. ಕನಿಷ್ಠ ಮಟ್ಟಕ್ಕೆ ಇಳಿದಿದೆ ಎಂದಿದ್ದಾರೆ. ಸೂರ್ಯಘರ್ ಯೋಜನೆಯಡಿ ಭಾರತ ಪ್ರಸ್ತುತ 30 ಲಕ್ಷ ಮನೆಗಳಿಗೆ ಸೌರ ವಿದ್ಯುತ್ ಕಲ್ಪಿಸುವ ಮತ್ತೊಂದು ಮೈಲುಗಲ್ಲು ಸ್ಥಾಪಿಸಿದೆ. ಮನೆಗಳಿಗೆ ಸೌರ ಮೇಲ್ಚಾವಣಿ ಮೂಲಕ ಉಚಿತ ವಿದ್ಯುತ್ ಕಲ್ಪಿಸಿದೆ. ಜಾಗತಿಕ ಹವಾಮಾನ ಸುಸ್ಥಿರತೆಯಲ್ಲಿ ಭಾರತ ಪ್ರಬಲ ಇಂಜಿನ್ ಆಗಿ ಕಾರ್ಯ ಸಾಧಿಸುತ್ತಿದ್ದು, ಪಿಎಂ ಸೂರ್ಯಘರ್ ಮತ್ತು ಪಿಎಂ ಕುಸುಮ್ ನಮ್ಮ ಸೌರ ಶಕ್ತಿಯ ಡಬಲ್ ಇಂಜಿನ್ ಆಗಿವೆ ಎಂದು ಪ್ರತಿಪಾದಿಸಿದರು.

### ಇಮ್ರಾನ್ ಖಾನ್‌ಗೆ ಸೂಕ್ತ ಚಿಕಿತ್ಸೆ ನೀಡುವಂತೆ ಪಾಕ್ ಸರ್ಕಾರಕ್ಕೆ ಕಪಿಲ್ ದೇವ್ ಮನವಿ

**ಇಸ್ಲಾಮಾಬಾದ್:** ಭ್ರಷ್ಟಾಚಾರ ಆರೋಪದಲ್ಲಿ ಅಡಿಯಾಲ ಜೈಲಿನಲ್ಲಿರುವ ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ಸೂಕ್ತ ಚಿಕಿತ್ಸೆ ನೀಡುವಂತೆ ಒತ್ತಾಯಿಸಿ ಪಾಕ್ ಸರ್ಕಾರಕ್ಕೆ ವಿಶ್ವಕ್ರಿಕೆಟ್‌ನ 14 ಮಾಜಿ ನಾಯಕರು ಪತ್ರ ಬರೆದಿದ್ದಾರೆ. ಇಮ್ರಾನ್ ಖಾನ್ ದೃಷ್ಟಿ ಕಳೆದುಕೊಂಡಿದ್ದು, ಸಮರ್ಪಕ ಚಿಕಿತ್ಸೆ ಒದಗಿಸುವಂತೆ ಕೋರಿ ಕಪಿಲ್ ದೇವ್, ಸುನಿಲ್ ಗವಾಸ್ಕರ್ ಸೇರಿ ಕ್ರಿಕೆಟ್ ತಂಡಗಳ ಹಲವು ಮಾಜಿ ನಾಯಕರು ಪತ್ರ ಬರೆದಿದ್ದಾರೆ.

ಅಕ್ಟೋಬರ್ 2025ರವರೆಗೆ ಇಮ್ರಾನ್ ಖಾನ್ ಅವರ ಎರಡೂ ಕಣ್ಣುಗಳ ದೃಷ್ಟಿ ಸಾಮಾನ್ಯವಾಗಿತ್ತು ಎಂದು ವೈದ್ಯಕೀಯ ವರದಿಗಳು ಹೇಳುತ್ತವೆ. ಅದರ ನಂತರ ಅವರ ದೃಷ್ಟಿ ಮಸುಕಾಗುತ್ತಿದೆ. ಇಮ್ರಾನ್ ಖಾನ್ ಜೈಲು ಆಡಳಿತಕ್ಕೆ ಹಲವಾರು ಬಾರು ದೂರು ನೀಡಿದ್ದರು. ಆದರೆ ಇದ್ದಕ್ಕಿದ್ದಂತೆ ಬಲಗಣ್ಣ ದೃಷ್ಟಿ ಹೋಗುತ್ತಾ ಬಂದಿದೆ ಎಂದು ತಿಳಿಸಿದ್ದಾರೆ.

ಪಾಕಿಸ್ತಾನದ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನೇತ್ರಜ್ಞರು ಕಣ್ಣಿನಲ್ಲಿ ರಕ್ತ ಹೆಪ್ಪುಗಟ್ಟುವಿಕೆ ಆಗಿರುವುದನ್ನು ದೃಢಪಡಿಸಿದ್ದಾರೆ. ಇದರಿಂದಾಗಿ ಗಂಭೀರ ಹಾನಿಯಾಗಿದೆ. ಜನವರಿ 24ರಂದಿ ಪಿಮ್ಸ್ ಆಸ್ಪತ್ರೆಯಲ್ಲಿ ನಡೆಸಲಾದ ವೈದ್ಯಕೀಯ ವಿಧಾನಗಳ ಮರುಪರೀಕ್ಷೆ ಕೋರಿಕೆಯನ್ನು ನ್ಯಾಯಾಲಯ ತಿರಸ್ಕರಿಸಿತ್ತು. ಕ್ರಿಕೆಟ್ ತಂಡಗಳ ಮಾಜಿ ನಾಯಕರು ಪಾಕಿಸ್ತಾನ ಸರ್ಕಾರಕ್ಕೆ ಪತ್ರ ಬರೆದಿದ್ದು, 73 ವರ್ಷದ ಇಮ್ರಾನ್ ಖಾನ್ ಅವರ ಆರೋಗ್ಯದ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಜೈಲಿನಲ್ಲಿ ಅವರಿಗೆ ಉತ್ತಮ ಚಿಕಿತ್ಸೆ ನೀಡಬೇಕೆಂದು ಒತ್ತಾಯಿಸಿದ್ದಾರೆ. ಭಾರತದ ಮಾಜಿ ನಾಯಕರಾದ ಸುನಿಲ್ ಗವಾಸ್ಕರ್ ಮತ್ತು ಕಪಿಲ್ ದೇವ್, ಆಸ್ಟ್ರೇಲಿಯಾ ತಂಡದ ಮಾಜಿ ನಾಯಕ ಅಲನ್ ಬಾರ್ಡರ್, ಸ್ಟೀವ್ ವಾ, ಇಯಾನ್ ಚಾಪೆಲ್, ಬೆಲಿಂಡಾ ಕ್ಲಾರ್ಕ್ ಮತ್ತು ಕಿಮ್ ಹ್ಯೂಸ್ ಸೇರಿದಂತೆ ಹಲವರು ಮನವಿ ಮಾಡಿದ್ದಾರೆ. ಇಂಗ್ಲೆಂಡ್‌ನ ಮೈಕ್ ಅಥರ್ಟನ್, ನಾಸರ್ ಹುಸೇನ್, ಮೈಕ್ ಬ್ರಿಯಾರ್ಲಿ ಮತ್ತು ಡೇವಿಡ್ ಗೋವರ್ ಕೂಡ ಅರ್ಜಿಗೆ ಸಹಿ ಹಾಕಿದ್ದಾರೆ.

# ನಟಿಯ ಖಾಸಗಿ ವಿಡಿಯೋ ಮಾಡಿ ಬ್ಲ್ಯಾಕ್‌ಮೇಲ್

ನಟಿ, ರಿಯಾಲಿಟಿ ಶೋ ಸ್ಪರ್ಧಿಯೊಬ್ಬರ ಖಾಸಗಿ ವಿಡಿಯೋ ರೆಕಾರ್ಡ್ ಮಾಡಿ ಬ್ಲ್ಯಾಕ್‌ಮೇಲ್ ಮಾಡಿರುವ ಪ್ರಕರಣ ಬೆಂಗಳೂರಿಲ್ಲಿ ನಡೆದಿದೆ. ಕೋರಮಂಗಲ ಇಂಡೋರ್ ಸ್ಟೇಡಿಯಂನಲ್ಲಿ ಇತ್ತೀಚೆಗೆ ನಡೆದ ಮಹಿಳಾ ಸೆಲೆಬ್ರೆಟಿ ಕ್ರಿಕೆಟ್ ಟೂರ್ನಿಯಲ್ಲಿ ಈ ವಿಡಿಯೋ ರೆಕಾರ್ಡ್ ಮಾಡಲಾಗಿದೆ. ನಟಿ ಬಾತ್‌ರೂಮ್‌ನಲ್ಲಿದ್ದಾಗ ಅಪರಿಚಿತ ಈ ವಿಡಿಯೋ ಮಾಡಿದ್ದಾನೆ. ಬಳಿಕ ಇನ್ಸ್ಟಾ ಅಕೌಂಟ್‌ನಿಂದ ಆಕೆಯ ಸ್ನೇಹಿತೆಯ ಅಕೌಂಟ್‌ಗೆ ನಾಲ್ಕಾರು ವಿಡಿಯೋಗಳನ್ನು ಕಳಿಸಿದ್ದ. ವಿಡಿಯೋ ಪಬ್ಲಿಕ್ ಮಾಡಬಾರದೆಂದರೆ ಇಂತಿಷ್ಟು ಹಣ ಕೊಡಬೇಕು ಎಂದು ಬೇಡಿಕೆ ಇಟ್ಟಿದ್ದಾನೆ ಎಂದು ಆರೋಪಿಸಲಾಗಿದೆ. ವಿಡಿಯೋ ಕಾಲ್ ಮಾಡುವ ಮೂಲಕ ಮೂರ್ನಾಲ್ಕು ಬಾರಿ ಬ್ಲಾಕ್‌ಮೇಲ್ ಮಾಡಿದ್ದಾನೆ. ಹಣ ನೀಡದೇ ಹೋದ್ರೆ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ವೈರಲ್ ಮಾಡೋದಾಗಿ ಬೆದರಿಕೆ ಹಾಕಿದ್ದಾನೆ. ಈ ಸಂಬಂಧ ಸಿಟಿ ಸೆನ್ ಪೊಲೀಸ್ ಠಾಣೆಯಲ್ಲಿ ಯುವತಿ ದೂರು ನೀಡಿದ್ದಾಳೆ. ದೂರಿನ ಅನ್ವಯ ಆರೋಪಿ ವಿರುದ್ಧ ಐಟಿ ಆಕ್ಟ್ ಮತ್ತು ಬಿಎನ್‌ಎಸ್ 77, 351 ಮತ್ತು 308 ಸೆಕ್ಷನ್ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಸಂಬಂಧ ಹೆಚ್ಚಿನ ತನಿಖೆ ನಡೆಯುತ್ತಿದೆ.

**ಸ್ನೇಹಿತೆಗೆ ಕಳಿಸಿ ಹಣಕ್ಕೆ ಡಿಮ್ಯಾಂಡ್**





# ನಟಿಯ ಅನುಮಾನಾಸ್ಪದ ಸಾವು

**23 ವರ್ಷಗಳ ಆರೋಪಿಗೆ ಶಿಕ್ಷೆ**



'ಸ್ನೇಹಮಂಟೆ ಇದೆರ', 'ರಾಯುಡು', 'ಕಲಸುಕೋವಾಲನಿ' ಇನ್ನೂ ಕೆಲವು ಸೂಪರ್ ಹಿಟ್ ಸಿನಿಮಾಗಳಲ್ಲಿ ಆಗಿನ ಸ್ಟಾರ್ ನಟರುಗಳ ಜೊತೆಗೆ ನಾಯಕಿಯಾಗಿ ನಟಿಸಿದ್ದ ನಟಿ ಪ್ರತ್ಯುಷ, ಸ್ಟಾರ್ ನಟಿಯಾಗಿ ಬೆಳೆಯುತ್ತಿರುವ ಹೊತ್ತಿನಲ್ಲಿ 2002ರ ಫೆಬ್ರವರಿ 22 ರಂದು ನಟಿ ಅನುಮಾನಾಸ್ಪದವಾಗಿ ನಿಧನ ಹೊಂದಿದರು. ಅವರ ಸಾವು ಆಗ ಅವಿಭಜಿತ ಆಂಧ್ರ ಪ್ರದೇಶದಲ್ಲಿ ದೊಡ್ಡ ಸುದ್ದಿಯಾಗಿ ವರ್ಷಗಳ ಬಳಿಕ ನಟಿಯ ಸಾವಿನ ಬಗ್ಗೆ ಸುಪ್ರೀಂಕೋರ್ಟ್ ತೀರ್ಪು ಪ್ರಕಟಿಸಿದೆ. ಪ್ರತ್ಯುಷ ಸಾವಿನ ಪ್ರಕರಣದಲ್ಲಿ ನಟಿಯ ಗೆಳೆಯನಾಗಿದ್ದ ಸಿದ್ಧಾರ್ಥ್ ರೆಡ್ಡಿ ದೋಷಿ ಎಂದು ಸುಪ್ರೀಂಕೋರ್ಟ್ ತೀರ್ಪಿನಲ್ಲಿ ಹೇಳಿದೆ.

ಸಾವಿಗೀಡಾಗಿರುವ ನಟಿ ಪ್ರತ್ಯುಷ ಹಾಗೂ ಈಗ ಶಿಕ್ಷೆಗೆ ಗುರಿಯಾಗಿರುವ ಸಿದ್ಧಾರ್ಥ್ ಪರಸ್ಪರ ಪ್ರೀತಿಸುತ್ತಿದ್ದು, ಇಬ್ಬರ ಮದುವೆಗೆ ಸಿದ್ಧಾರ್ಥ್ ರೆಡ್ಡಿ ಕುಟುಂಬದವರು ಒಪ್ಪಲಿಲ್ಲವೆಂದು ಇಬ್ಬರೂ ಸಹ ಕೂಲ್‌ಡ್ರಿಂಕ್ಸ್‌ನಲ್ಲಿ ವಿಷ ಬೆರೆಸಿ ಕುಡಿದಿದ್ದು, ಪ್ರತ್ಯುಷ ಸಾವಿಗೀಡಾದರೆ, ಸಿದ್ಧಾರ್ಥ್ ರೆಡ್ಡಿ ಬದುಕಿ ಉಳಿದಿದ್ದರು ಎನ್ನಲಾಗಿತ್ತು. ಆದರೆ ಇದನ್ನು ಒಪ್ಪದ ಪ್ರತ್ಯುಷ ತಾಯಿ ಸರೋಜಿನಿ ನ್ಯಾಯಾಲಯಗಳ ಮೂಲಕ ಸತತ ಹೋರಾಟ ಮಾಡಿ ಇದೀಗ ಕೊನೆಗೂ ಸಿದ್ಧಾರ್ಥ್‌ಗೆ ಶಿಕ್ಷೆ ಆಗುವಂತೆ ಮಾಡಿದ್ದಾರೆ.

ಪ್ರತ್ಯುಷ ತಾಯಿ ಹೇಳಿದ್ದಂತೆ, ಪ್ರತ್ಯುಷಗೆ 'ಜಯಂ' ಸಿನಿಮಾನಲ್ಲಿ ನಾಯಕಿಯಾಗಿ ನಟಿಸುವ ಅವಕಾಶ ಸಿಕ್ಕಿತ್ತಂತೆ. ಆ ಖುಷಿಯಲ್ಲಿದ್ದ ಪ್ರತ್ಯುಷ ಗೆಳತಿಯ ಜೊತೆಗೆ ಪಾರ್ಲರ್‌ಗೆ ಹೋಗಿದ್ದರಂತೆ. ಅಲ್ಲಿಗೆ ಬಂದ ಸಿದ್ಧಾರ್ಥ್ ರೆಡ್ಡಿ ಪ್ರತ್ಯುಷರನ್ನು ಕರೆದುಕೊಂಡು ಹೋಗಿದ್ದಾನೆ. ಆ ಬಳಿಕ ಗೆಳತಿ, ಪ್ರತ್ಯುಷಗೆ ಕರೆ ಮಾಡಿದ್ದಾಳೆ, ಆಗಲೂ ಸಹ ಪ್ರತ್ಯುಷ ಕೆಲವೇ ನಿಮಿಷಗಳಲ್ಲಿ ಬರುವುದಾಗಿ ಹೇಳಿದ್ದಾರೆ. ಆದರೆ ಅದಾದ ಕೆಲವೇ ನಿಮಿಷಗಳ ಬಳಿಕ ಪ್ರತ್ಯುಷಳನ್ನು ಸ್ವತಃ ಸಿದ್ಧಾರ್ಥ್ ಆಸ್ಪತ್ರೆಗೆ ದಾಖಲಿಸಿದ್ದ. ಇದು ಹಲವು ಅನುಮಾನಗಳಿಗೆ ಕಾರಣವಾಗಿತ್ತು. ಸಿದ್ಧಾರ್ಥ್ ನೀಡಿರುವ ಹೇಳಿಕೆಯಂತೆ ಇಬ್ಬರೂ ಸಹ ಕೂಲ್‌ಡ್ರಿಂಕ್ಸ್‌ನಲ್ಲಿ ವಿಷ ಬೆರೆಸಿ ಕುಡಿದಿದ್ದರು. ಆದರೆ ಪ್ರತ್ಯುಷ ಅಲ್ಲಿಯೇ ನಿಧನ ಹೊಂದಿದರು. ಸಿದ್ಧಾರ್ಥ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದು ಬದುಕುಳಿದಿದ್ದರು. ಈ ಹಿಂದೆಯೇ ಮೆಟ್ರೊಪಾಲಿಟಿನ್ ಕೋರ್ಟ್, ಆತ್ಮಹತ್ಯೆಗೆ ಪ್ರಚೋದನೆ ಆರೋಪದಲ್ಲಿ ಸಿದ್ಧಾರ್ಥ್‌ಗೆ ಐದು ವರ್ಷಗಳ ಸಜೆ ನೀಡಿತ್ತು. ಅದಾದ ಬಳಿಕ ಸಿದ್ಧಾರ್ಥ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದರು.

# ರಾಜನಿವಾಸದಲ್ಲಿ ಕಾಂತಾರದ ಝುಲಕ್

ರಾಜನಿವಾಸ ಟ್ರೈಲರ್ ನೋಡಿದರೆ ತಕ್ಷಣ ಕಾಂತಾರದ ಝುಲಕ್ ಕಾಣಿಸಿತು. ಆದರೆ ಇದು ಕಾಂತಾರಕ್ಕಿಂತಲೂ ಮೊದಲೇ ತಯಾರಾದಂಥ ಸಬ್ಜೆಕ್ಟ್. ಕೃತಿ ರೂಪಕ್ಕೆ ಇಳಿದು ಪರದೆಗೆ ಸಿದ್ಧಗೊಳ್ಳಲು ಇಷ್ಟು ಸಮಯ ತೆಗೆದುಕೊಂಡಿದೆ.

ನಿಜ ಹೇಳಬೇಕೆಂದರೆ ಕಾಂತಾರ ಬಂದ ಬಳಿಕ ಹೋಲಿಕೆಯ ಆರೋಪ ಎದುರಾದೀತು ಎಂದು ಸಾಕಷ್ಟು ಬದಲಾವಣೆಯನ್ನ ಕೂಡ ಮಾಡಲಾಗಿದೆ. ಆದರೆ ಇದು ತುಳುನಾಡು ಭಾಗದ ಕಥೆಯಾದ ಕಾರಣ ಸಹಜವಾಗಿ ಒಂದಷ್ಟು ಹೋಲಿಕೆಗಳು ಕಾಣುತ್ತವೆ. ಆದರೆ ಚಿತ್ರದಲ್ಲಿ ಬೇರೆಯೇ ಕಥೆ ಇದೆ ಎನ್ನುತ್ತಾರೆ ನಿರ್ದೇಶಕ ಮಿಥುನ್ ಸುವರ್ಣ.

ರಾಜನಿವಾಸದಲ್ಲಿ ನಾಯಕ ಪಾತ್ರ ನಿರ್ವಹಿಸಿ ರಾಜನಂತೆ ಮೆರೆದಾಡಿರುವವರು ರಾಘವ್. ಹಾಡು ಮತ್ತು ಹೊಡೆದಾಟದ ಗ್ಲಿಂಪ್ಸ್ ಕಂಡವರಿಗೆ ಇದೊಂದು ಮಾಸ್ ಮೂವಿಯಾಗುವ ಎಲ್ಲಾ ಲಕ್ಷಣಗಳು ಗೋಚರಿಸಿದೆ. ನಾಯಕಿಯಾಗಿ ಕೃತಿಕಾ ಕಂಗೊಳಿಸಿದ್ದಾರೆ. ಶ್ರೀನಗರ ಕಿಟ್ಟಿ ವಿಶೇಷ ಪಾತ್ರದಲ್ಲಿರುವುದು ಮೇಲ್ನೋಟಕ್ಕೆ ಎದ್ದು ಕಾಣಿಸಿದೆ. ಈ ಎಲ್ಲಾ ಕಾರಣಗಳಿಂದಲೇ ರಾಜನಿವಾಸ ಕುತೂಹಲ ಮೂಡಿಸಿದೆ. ಟ್ರೈಲರ್ ಮತ್ತು ಮೂರು ಹಾಡುಗಳು ಈಗಾಗಲೇ ಸಿನಿಮಾ ಪ್ರಿಯರ ಮನಗೆದ್ದಿದೆ. ಟ್ರೈಲರ್ ನಾಲ್ಕು ಭಾಷೆಗಳಲ್ಲಿ ಬಿಡುಗಡೆಯಾಗಿದ್ದು ಪ್ಯಾನ್ ಇಂಡಿಯಾದಲ್ಲಿ ನಿರೀಕ್ಷೆ ಸೃಷ್ಟಿಸಿದೆ. ಸಿನಿಮಾರಂಗದ ಅನೇಕರು ರಾಜನಿವಾಸ ಈ ವರ್ಷದ ಅತ್ಯುತ್ತಮ ಚಿತ್ರವಾಗಲಿದೆ ಎಂದಿದ್ದಾರೆ, ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಕೆಲಸ ಮುಕ್ತಾಯ ಹಂತದಲ್ಲಿದೆ.

ಇದೇ ತಿಂಗಳಾಂತ್ಯಕ್ಕೆ ಬಿಡುಗಡೆ ದಿನಾಂಕವನ್ನು ಘೋಷಿಸಲಾಗುತ್ತದೆ. ಕನ್ನಡದ ದೊಡ್ಡ ವಿತರಕ ಸಂಸ್ಥೆಗಳು ಸಿನಿಮಾ ಬಿಡುಗಡೆಗೆ ಕೇಳುತ್ತಿದ್ದಾರೆ ಮತ್ತು ತಮಿಳು, ತೆಲುಗು ಭಾಷೆಯಲ್ಲೂ ಬೇಡಿಕೆ ಇದೆ ಎನ್ನುತ್ತಿದ್ದಾರೆ ನಿರ್ಮಾಪಕರು. ರಾಜನಿವಾಸ ಚಿತ್ರವನ್ನು ಡಿಎಂ-36 ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣ ಮಾಡಲಾಗಿದೆ. ದಾ. ಪಿ ಆಂಜನಪ್ಪ ನಿರ್ಮಾಪಕರು. ಸಹ ನಿರ್ಮಾಪಕರಾಗಿ ಲೋಕೇಶ್ ಗೌಡ ಬಂಡವಾಳ ಹೂಡಿದ್ದಾರೆ.

# ಲಾಂಗ್ ಹಿಡಿದು ಪೋಸ್ ನಟನ ವಿರುದ್ಧ ಕೇಸ್ ದಾಖಲು

ಚಿತ್ರಮಂದಿರದಲ್ಲಿ ಫ್ಯಾನ್ಸ್ ಮಧ್ಯೆ ಲಾಂಗ್ ಹಿಡಿದು ಪೋಸ್ ನೀಡಿದ್ದಕ್ಕೆ ಜೆಸಿ ಸಿನಿಮಾ ನಟ ಸೂರ್ಯ ಪ್ರಖ್ಯಾತ್ ವಿರುದ್ಧ ಗೋವಿಂದರಾಜ ನಗರ ಪೊಲೀಸರು ಸುಮೋಟೊ ಕೇಸ್ ದಾಖಲಿಸಿದ್ದಾರೆ.

ಕಳೆದ ಶುಕ್ರವಾರ (ಫೆ.6) ಸೂರ್ಯ ಪ್ರಖ್ಯಾತ್ ನಟನೆಯ ಜೆಸಿ ಸಿನಿಮಾ ಬಿಡುಗಡೆ ಆಗಿದೆ. ಈ ವೇಳೆ ಚಿತ್ರಮಂದಿರದಲ್ಲಿ ಅಭಿಮಾನಿಗಳೊಂದಿಗೆ ಚಿತ್ರ ವೀಕ್ಷಣೆಗೆ ನಟ ಪ್ರಖ್ಯಾತ್ ಕೂಡ ಆಗಮಿಸಿದ್ದರು. ಆಗ ಅಭಿಮಾನಿಗಳ ಮಧ್ಯೆ ಲಾಂಗ್ ಹಿಡಿದು ನಟ ಪೋಸ್ ನೀಡಿದ್ದಾರೆ. ಇದನ್ನು ಅಭಿಮಾನಿಗಳು ವಿಡಿಯೋ ಮಾಡಿ, ವೈರಲ್ ಮಾಡಿದ್ದರು.

ಲಾಂಗ್ ಹಿಡಿದುಕೊಂಡಿರುವ ವಿಡಿಯೋ ಆಧಾರದ ಮೇಲೆ ಗೋವಿಂದರಾಜ ನಗರ ಪೊಲೀಸರು ಸುಮೋಟೊ ಕೇಸ್ ದಾಖಲಿಸಿಕೊಂಡು, ತನಿಖೆ ನಡೆಸಿದ್ದಾರೆ. ಸದ್ಯ ಪೊಲೀಸರು ಲಾಂಗ್ ಬಗ್ಗೆ ಸ್ಪಷ್ಟನೆ ಕೊಡುವಂತೆ ನಟ ಸೂರ್ಯ ಪ್ರಖ್ಯಾತ್‌ಗೆ ನೋಟಿಸ್ ನೀಡಿದ್ದಾರೆ.



# ಹಿಂದೂ ಯುವತಿಯರೇ ಟಾರ್ಗೆಟ್

**ಶಾಕಿಂಗ್ ಆಗಿದೆ 'ದಿ ಕೇರಳ ಸ್ಟೋರಿ 2' ಟ್ರೇಲರ್**

2023ರಲ್ಲಿ ಬಿಡುಗಡೆ ಆಗಿದ್ದ 'ದಿ ಕೇರಳ ಸ್ಟೋರಿ' ಸಿನಿಮಾ ಸೂಪರ್ ಹಿಟ್ ಆಗಿತ್ತು. ಆ ಸಿನಿಮಾದಲ್ಲಿ ಹಿಂದೂ ಹುಡುಗಿಯರನ್ನು ಬಲವಂತದಿಂದ ಭಯೋತ್ಪಾದಕ ಕೃತ್ಯಕ್ಕೆ ಬಳಸಿಕೊಳ್ಳುವ ಕಥೆಯನ್ನು ತೋರಿಸಲಾಗಿತ್ತು. ಈಗ 'ದಿ ಕೇರಳ ಸ್ಟೋರಿ 2' ಸಿನಿಮಾ ಸಿದ್ಧವಾಗಿದೆ. ಈ ಸಿನಿಮಾದಲ್ಲಿ ಕೂಡ ಲವ್ ಜಿಹಾದ್ ಬಗ್ಗೆ ತೋರಿಸಲಾಗುತ್ತದೆ. 'ದಿ ಕೇರಳ ಸ್ಟೋರಿ 2' ಸಿನಿಮಾದ ಟ್ರೇಲರ್ ಬಿಡುಗಡೆ ಆಗಿದ್ದು, ಅದರಲ್ಲಿ ಕಥೆಯ ಬಗ್ಗೆ ಝುಲಕ್ ನೀಡಲಾಗಿದೆ. ಟ್ರೇಲರ್ ನೋಡಿದ ಸಿನಿಪ್ರಿಯರಿಗೆ ಶಾಕ್ ಆಗಿದೆ. ಕಾಮಾಕ್ಯ ನಾರಾಯಣ್ ಸಿಂಗ್ ಅವರು 'ದಿ ಕೇರಳ ಸ್ಟೋರಿ 2' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ವಿಪುಲ್ ಅಮೃತ್‌ಲಾಲ್ ಶಾ ಅವರು ನಿರ್ಮಾಣ ಮಾಡಿದ್ದಾರೆ. ಈ ಸಿನಿಮಾದಲ್ಲಿ ಅದಿತಿ ಭಾಟಿಯಾ, ಐಶ್ವರ್ಯಾ ಊಜಾ, ಉಲ್ಕಾ ಗುಪ್ತಾ ಅವರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಲವ್ ಜಿಹಾದ್ ಜಾಲಕ್ಕೆ ಬಲಿಯಾಗುವ ಹಿಂದೂ ಯುವತಿಯರಾಗಿ ಈ ಮೂವರು ಕಾಣಿಸಿಕೊಳ್ಳುತ್ತಿದ್ದಾರೆ. ಮುಂದಿನ 25 ವರ್ಷಗಳಲ್ಲಿ ಭಾರತವು ಇಸ್ಲಾಮಿಕ್ ಸ್ಟೇಟ್ ಆಗುವ ಸಾಧ್ಯತೆ ಇದೆ ಎಂಬ ಎಚ್ಚರಿಕೆ ಸಂದೇಶದೊಂದಿಗೆ 'ದಿ ಕೇರಳ ಸ್ಟೋರಿ 2' ಸಿನಿಮಾದ ಟ್ರೇಲರ್ ಆರಂಭ ಆಗುತ್ತದೆ. ಕೇರಳ, ಮಧ್ಯಪ್ರದೇಶ, ರಾಜಸ್ತಾನದಲ್ಲಿ ನಡೆಯುವ ಕಥೆಯನ್ನು ಈ ಸಿನಿಮಾ ತೋರಿಸುತ್ತದೆ. ಬಿಡುಗಡೆಯಾದ ಕೆಲವೇ ಗಂಟೆಗಳಲ್ಲಿ ಈ ಟ್ರೇಲರ್ ಮಿಲಿಯನ್‌ಗಟ್ಟಲೆ ವೀಕ್ಷಣೆ ಪಡೆದಿದೆ.



**'ದಿ ಕೇರಳ ಸ್ಟೋರಿ 2' ಟ್ರೇಲರ್:** ಹಿಂದೂ ಯುವತಿಯರನ್ನು ಪ್ರೀತಿ, ಪ್ರೇಮದ ಹೆಸರಿನಲ್ಲಿ ಯಾವ ರೀತಿ ಯಾಮಾರಿಸಲಾಗುತ್ತದೆ ಬಳಿಕ ಅವರನ್ನು ಹೇಗೆ ಮತಾಂತರ ಮಾಡಲಾಗುತ್ತದೆ ಆ ನಂತರ ಅವರ ಪರಿಸ್ಥಿತಿ ಎಷ್ಟು ಹೀನಾಯವಾಗುತ್ತದೆ ಎಂಬುದರ ಝುಲಕ್ 'ದಿ ಕೇರಳ ಸ್ಟೋರಿ 2' ಸಿನಿಮಾದ ಟ್ರೇಲರ್‌ನಲ್ಲಿ ಕಾಣಿಸಿದೆ. ಈ ಎಲ್ಲಾ ದೃಶ್ಯಗಳನ್ನು ನೋಡಿದ ಪ್ರೇಕ್ಷಕರು ಹೌಹಾರಿದ್ದಾರೆ. 'ದಿ ಕೇರಳ ಸ್ಟೋರಿ' ಸಿನಿಮಾ 2023ರಲ್ಲಿ ಸಾಕಷ್ಟು ವಿವಾದ ಸೃಷ್ಟಿಸಿತ್ತು. ಈಗ ಅದರ ಸೀಕ್ವೆಲ್ ಆಗಿರುವ 'ದಿ ಕೇರಳ ಸ್ಟೋರಿ 2' ಸಿನಿಮಾ ಕೂಡ ವಿವಾದ ಎಬ್ಬಿಸುವ ಎಲ್ಲಾ ಲಕ್ಷಣಗಳು ಕಾಣಿಸಿವೆ. 'ಹಲವು ಸತ್ಯ ಘಟನೆಗಳಿಂದ ಸ್ಫೂರ್ತಿ ಪಡೆದು ನಿರ್ಮಾಣವಾದ ಸಿನಿಮಾ' ಎಂಬುದನ್ನು ಟ್ರೇಲರ್‌ನ ಆರಂಭದಲ್ಲೇ ತೋರಿಸಲಾಗಿದೆ. ಫೆಬ್ರವರಿ 27ರಂದು ಈ ಸಿನಿಮಾ ರಿಲೀಸ್ ಆಗಲಿದೆ.

# ಟೀಮ್ ಇಂಡಿಯಾದಲ್ಲಿ 2 ಬದಲಾವಣೆ ಖಚಿತ

ಟಿ20 ವಿಶ್ವಕಪ್‌ನ 36ನೇ ಪಂದ್ಯದಲ್ಲಿ ಭಾರತ ಮತ್ತು ನೆದರ್‌ಲೆಂಡ್ಸ್ ತಂಡಗಳು ಮುಖಾಮುಖಿಯಾಗಲಿದೆ. ಬುಧವಾರ (ಫೆ.18) ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿರುವ ಡಚ್ಚರ (ನೆದರ್‌ಲೆಂಡ್ಸ್) ವಿರುದ್ಧದ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾದಲ್ಲಿ 2 ಬದಲಾವಣೆ ಕಂಡು ಬರುವುದು ಬಹುತೇಕ ಖಚಿತ. ಏಕೆಂದರೆ ಕಳೆದ ಎರಡು ಪಂದ್ಯಗಳಲ್ಲಿ ಕಣಕ್ಕಿಳಿದಿರುವ ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ಈ ಪಂದ್ಯದಿಂದ ಹೊರಗುಳಿಯಲಿದ್ದಾರೆ. ಭಾರತ ತಂಡವು ಈಗಾಗಲೇ ಸೂಪರ್-8 ಹಂತಕ್ಕೇರಿರುವ ಕಾರಣ ಬುಮ್ರಾಗೆ ನಾಳಿನ ಪಂದ್ಯದ ವೇಳೆ ವಿಶ್ರಾಂತಿ ನೀಡುವ ಸಾಧ್ಯತೆ ಹೆಚ್ಚು.



**ಡಚ್ಚರ ವಿರುದ್ಧ ಕಾಳಗ**

ಇನ್ನು ಪಾಕಿಸ್ತಾನ್ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿದಿದ್ದ ಕುಲ್ದೀಪ್ ಯಾದವ್ ನೆದರ್‌ಲೆಂಡ್ಸ್ ವಿರುದ್ಧದ ಕಣಕ್ಕಿಳಿಯುವ ಸಾಧ್ಯತೆಯಿಲ್ಲ. ಅವರ ಬದಲಿಗೆ ಎಡಗೈ ವೇಗಿ ಅರ್ಷದೀಪ್ ಸಿಂಗ್ ಮತ್ತೆ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಳ್ಳುವುದು ಖಚಿತ ಎನ್ನಬಹುದು.

ಇತ್ತ ಬುಮ್ರಾ ಬದಲಿಗೆ ಮೊಹಮ್ಮದ್ ಸಿರಾಜ್ ಆಡುವ ಬಳಗದಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆಯಿದೆ. ಅದರಂತೆ ತನ್ನ ಕೊನೆಯ ಲೀಗ್ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಆರಂಭಿಕರಾಗಿ ಅಭಿಷೇಕ್ ಶರ್ಮಾ ಹಾಗೂ ಇಶಾನ್ ಕಿಶನ್ ಇನಿಂಗ್ಸ್ ಆರಂಭಿಸಲಿದ್ದಾರೆ.

ಇನ್ನು ಮೂರನೇ ಕ್ರಮಾಂಕದಲ್ಲಿ ತಿಲಕ್ ವರ್ಮಾ ಕಣಕ್ಕಿಳಿದರೆ, ನಾಲ್ಕನೇ ಕ್ರಮಾಂಕದಲ್ಲಿ ಸೂರ್ಯಕುಮಾರ್ ಯಾದವ್ ಬ್ಯಾಟ್ ಬೀಸಲಿದ್ದಾರೆ. ಇನ್ನುಳಿದ ಮೂರು ಕ್ರಮಾಂಕಗಳಲ್ಲಿ ಆಲ್‌ರೌಂಡರ್‌ಗಳಾಗಿ ಹಾರ್ದಿಕ್ ಪಾಂಡ್ಯ, ಶಿವಂ ದುಬೆ ಹಾಗೂ ಅಕ್ಷರ್ ಪಟೇಲ್ ಕಾಣಿಸಿಕೊಳ್ಳಲಿದ್ದಾರೆ. ಹಾಗೆಯೇ ಫಿನಿಶರ್ ಪಾತ್ರದಲ್ಲಿ ರಿಂಕು ಸಿಂಗ್ ಟೀಮ್ ಇಂಡಿಯಾ ಪರ ಕಣಕ್ಕಿಳಿಯಲಿದ್ದಾರೆ.

ಇನ್ನುಳಿದಂತೆ ವೇಗಿಗಳಾಗಿ ಮೊಹಮ್ಮದ್ ಸಿರಾಜ್ ಹಾಗೂ ಅರ್ಷದೀಪ್ ಸಿಂಗ್ ಕಾಣಿಸಿಕೊಂಡರೆ, ಸ್ಪಿನ್ನರ್ ಆಗಿ ವರುಣ್ ಚಕ್ರವರ್ತಿ ಆಡುವ ಬಳಗದಲ್ಲಿ ಇರಲಿದ್ದಾರೆ.



# ಪಾಕಿಸ್ತಾನ್ ಸೋಲಿಗೆ ಅಸಲಿ ಕಾರಣ ಬಿಚ್ಚಿಟ್ಟ ಕೋಚ್

ಟಿ20 ವಿಶ್ವಕಪ್‌ನ 27ನೇ ಪಂದ್ಯದಲ್ಲಿ ಟೀಮ್ ಇಂಡಿಯಾ ವಿರುದ್ಧ ಪಾಕಿಸ್ತಾನ್ ಹೀನಾಯ ಸೋಲನುಭವಿಸಿದೆ. ಕೊಲಂಬೊದ ಆರ್. ಪ್ರೇಮದಾಸ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 175 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ್ 18 ಓವರ್‌ಗಳಲ್ಲಿ 114 ರನ್‌ಗಳಿಸಿ ಆಲೌಟ್ ಆಗಿದೆ. ಈ ಮೂಲಕ 61 ರನ್‌ಗಳ ಅಂತರದಿಂದ ಪಾಕ್ ಪಡೆ ಸೋಲೊಪ್ಪಿಕೊಂಡಿದೆ.

ಈ ಹೀನಾಯ ಸೋಲಿನ ಬೆನ್ನಲ್ಲೇ ಪಾಕಿಸ್ತಾನ್ ತಂಡದ ಪ್ರದರ್ಶನದ ಬಗ್ಗೆ ಭಾರೀ ಟೀಕೆಗಳು ಕೇಳಿ ಬಂದಿದ್ದವು.

ಈ ಟೀಕೆಗಳ ನಡುವೆಯೂ ಪಾಕ್ ತಂಡದ ಕೋಚ್ ಮೈಕ್ ಹೆಸ್ಸನ್ ಸೋಲಿನ ಕಾರಣಗಳನ್ನು ಪರಾಮರ್ಶಿಸಿದ್ದಾರೆ. ಭಾರತದ ವಿರುದ್ಧದ ಸೋಲಿಗೆ ಮೈಕ್ ಹೆಸ್ಸನ್ ನೀಡಿರುವ ಕಾರಣಗಳಾವುವು ಎಂದು ನೋಡುವುದಾದರೆ

**ಇಶಾನ್ ಕಿಶನ್ ಬ್ಯಾಟಿಂಗ್:** ಭಾರತ ತಂಡದ ಆರಂಭಿಕ ಆಟಗಾರ ಇಶಾನ್ ಕಿಶನ್ ಅವರ ಅಪ್ರತಿಮ ಆಟವೇ (77 ರನ್) ಪಂದ್ಯವನ್ನು ನಮ್ಮಿಂದ ಕಿತ್ತುಕೊಂಡಿತು ಎಂದು ಮೈಕ್ ಹೆಸ್ಸನ್ ಒಪ್ಪಿಕೊಂಡಿದ್ದಾರೆ. ಕಿಶನ್ ನಿರ್ಭೀತಿಯಿಂದ ಬ್ಯಾಟ್ ಬೀಸಿದ್ದೇ ಪಂದ್ಯದ ಟರ್ನಿಂಗ್ ಪಾಯಿಂಟ್. ಅವರು ಮೈದಾನದ ಎರಡೂ ಬದಿಗಳಲ್ಲಿ ರನ್ ಗಳಿಸುವ ಮೂಲಕ ನಮ್ಮ ಸ್ಪಿನ್ನರ್‌ಗಳನ್ನು ಒತ್ತಡಕ್ಕೆ ಸಿಲುಕಿಸಿದರು ಎಂದು ಅವರು ವಿಶ್ಲೇಷಿಸಿದ್ದಾರೆ.

**ಹೆಚ್ಚುವರಿ ರನ್‌ಗಳು:** ಟೀಂ ಇಂಡಿಯಾ ಈ ಪಿಚ್‌ನಲ್ಲಿ ನಿರೀಕ್ಷಿತ ಸ್ಕೋರ್‌ಗಿಂತ ಸುಮಾರು 25 ರನ್ ಹೆಚ್ಚುವರಿಯಾಗಿ ಗಳಿಸಿತು. ಇದು ಪಾಕಿಸ್ತಾನಕ್ಕೆ ದೊಡ್ಡ ಹೊರೆಯಾಯಿತು ಎಂದು ಮೈಕ್ ಹೆಸ್ಸನ್ ಅಭಿಪ್ರಾಯಪಟ್ಟಿದ್ದಾರೆ.



**ತಪ್ಪು ನಿರ್ಧಾರಗಳು:** ಪಾಕಿಸ್ತಾನ್ ತಂಡವು ಬ್ಯಾಟಿಂಗ್ ಮಾಡುವಾಗ ಪರಿಸ್ಥಿತಿಗಳಿಗೆ ಹೊಂದಿಕೊಳ್ಳಲಿಲ್ಲ. ಅಲ್ಲದೆ ಕೆಲವು ಕಳಪೆ ಶಾಟ್‌ಗಳನ್ನು ಆಯ್ಕೆ ಮಾಡಿಕೊಂಡು ವಿಕೆಟ್ ಒಪ್ಪಿಸಿದ್ದರು. ಇದು ನಮ್ಮ ಸೋಲಿಗೆ ಪ್ರಮುಖ ಕಾರಣವಾಯಿತು ಎಂದು ಹೆಸ್ಸನ್ ತಿಳಿಸಿದ್ದಾರೆ.

**ನಿರಾಸೆಯಲ್ಲಿ ತಂಡ:** ಭಾರತದ ವಿರುದ್ಧ ಸೋಲಿನ ನಂತರ ಪಾಕಿಸ್ತಾನದ ಡ್ರೆಸ್ಸಿಂಗ್ ರೂಮ್‌ನಲ್ಲಿ ''ತೀವ್ರ ನಿರಾಸೆ'' ಮನೆಮಾಡಿತ್ತು. ಭಾರತದ ವಿರುದ್ಧದ ಪಂದ್ಯ ಪಾಕಿಸ್ತಾನದ ಜನತೆಗೆ ಎಷ್ಟು ಮುಖ್ಯ ಎಂಬುದು ಆಟಗಾರರಿಗೆ ತಿಳಿದಿದೆ. ಹಾಗಾಗಿ ಈ ಸೋಲು ಎಲ್ಲರಿಗೂ ನೋವು ತಂದಿದೆ ಎಂದು ಪಾಕ್ ಕೋಚ್ ತಿಳಿಸಿದ್ದಾರೆ.

# ವಿಕೆಟ್ ಮೇಲೆ ವಿಕೆಟ್ ಶಮಿ ಬೆಂಕಿ ಬೌಲಿಂಗ್

ರಣಜಿ ಟೂರ್ನಿಯ ಸೆಮಿಫೈನಲ್ ಪಂದ್ಯದಲ್ಲಿ ಮೊಹಮ್ಮದ್ ಶಮಿ ಬೆಂಕಿ ಬೌಲಿಂಗ್ ಪ್ರದರ್ಶಿಸಿದ್ದಾರೆ. ಬೆಂಗಾಲ್ ಕ್ರಿಕೆಟ್ ಅಕಾಡೆಮಿ ಮೈದಾನದಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಜಮ್ಮು-ಕಾಶ್ಮೀರ ಮತ್ತು ಬೆಂಗಾಲ್ ತಂಡಗಳು ಮುಖಾಮುಖಿಯಾಗಿವೆ. ಈ ಮ್ಯಾಚ್‌ನಲ್ಲಿ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಿದ ಜಮ್ಮು-ಕಾಶ್ಮೀರ ತಂಡವು ಬೆಂಗಾಲ್ ತಂಡವನ್ನು 328 ರನ್‌ಗಳಿಗೆ ಆಲೌಟ್ ಮಾಡಿದ್ದರು.

ಇದಕ್ಕುತ್ತರವಾಗಿ ಮೊದಲ ಇನಿಂಗ್ಸ್ ಶುರು ಮಾಡಿದ ಜಮ್ಮು-ಕಾಶ್ಮೀರ ತಂಡಕ್ಕೆ ಮೊಹಮ್ಮದ್ ಶಮಿ ಆಘಾತದ ಮೇಲೆ ಆಘಾತ ನೀಡಿದರು. ಪರಿಣಾಮ ಮೊದಲ ಇನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ತಂಡವು 302 ರನ್ ಗಳಿಸಿ ಆಲೌಟ್ ಆಗಿದೆ. ಬೆಂಗಾಲ್ ಪರ ಮಾರಕ ದಾಳಿ ಸಂಘಟಿಸಿದ ಮೊಹಮ್ಮದ್ ಶಮಿ 22.1 ಓವರ್‌ಗಳಲ್ಲಿ 90 ರನ್ ನೀಡಿ ಬರೋಬ್ಬರಿ 8 ವಿಕೆಟ್ ಕಬಳಿಸಿದ್ದಾರೆ.

ವಿಶೇಷ ಎಂದರೆ ಇದು ಮೊಹಮ್ಮದ್ ಶಮಿ ಅವರ ಫಸ್ಟ್ ಕ್ಲಾಸ್ ಕ್ರಿಕೆಟ್‌ನ ಬೆಸ್ಟ್ ಬೌಲಿಂಗ್ ಪ್ರದರ್ಶನವಾಗಿದೆ. ಈ ಹಿಂದೆ ಅವರು 79 ರನ್‌ಗೆ 7 ವಿಕೆಟ್ ಪಡೆದಿದ್ದು ಶ್ರೇಷ್ಠ ಸಾಧನೆಯಾಗಿತ್ತು. ಇದೀಗ 90 ರನ್‌ಗಳಿಗೆ 8 ವಿಕೆಟ್ ಉರುಳಿಸುವ ಮೂಲಕ ಶಮಿ ಜೀವಮಾನದ ಬೆಸ್ಟ್ ಬೌಲಿಂಗ್ ಪ್ರದರ್ಶಿಸಿದ್ದಾರೆ.

ಈ ಬೌಲಿಂಗ್ ಪ್ರದರ್ಶನದೊಂದಿಗೆ ಮೊಹಮ್ಮದ್ ಶಮಿ ಮತ್ತೊಮ್ಮೆ ಟೀಮ್ ಇಂಡಿಯಾದ ಕದ ತಟ್ಟಿದ್ದಾರೆ. ಅದರಂತೆ ಮುಂಬರುವ ಟೆಸ್ಟ್ ಸರಣಿಯಲ್ಲಿ ಶಮಿಗೆ ಮತ್ತೆ ಚಾನ್ಸ್ ನೀಡಲಿದ್ದಾರಾ ಕಾದು ನೋಡಬೇಕಿದೆ.



# ವಿಶ್ವಕಪ್‌ನಲ್ಲಿ ವಿಶ್ವ ದಾಖಲೆ

ಟಿ20 ವಿಶ್ವಕಪ್ ಇತಿಹಾಸದಲ್ಲಿ ಶತಕ ಬಾರಿಸಿದ ಅತೀ ಕಿರಿಯ ಬ್ಯಾಟರ್ ಎಂಬ ವಿಶ್ವ ದಾಖಲೆ ಯುವರಾಜ್ ಸಮ್ರಾ ಪಾಲಾಗಿದೆ. ಅದು ಸಹ ಬಲಿಷ್ಠ ನ್ಯೂಝಿಲೆಂಡ್ ವಿರುದ್ಧ ಸೆಂಚುರಿ ಸಿಡಿಸುವ ಮೂಲಕ ಎಂಬುದು ವಿಶೇಷ. ಚೆನ್ನೈನ ಎಂಎ ಚಿದಂಬರಂ ಸ್ಟೇಡಿಯಂನಲ್ಲಿ ನಡೆದ ಟಿ20 ವಿಶ್ವಕಪ್‌ನ 31ನೇ ಪಂದ್ಯದಲ್ಲಿ ನ್ಯೂಝಿಲೆಂಡ್ ಹಾಗೂ ಕೆನಡಾ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಕೆನಡಾ ತಂಡಕ್ಕೆ 19 ವರ್ಷದ ಯುವರಾಜ್ ಸಮ್ರಾ ಭರ್ಜರಿ ಆರಂಭ ಒದಗಿಸಿದ್ದರು.

ಆರಂಭದಲ್ಲಿ ಎಚ್ಚರಿಕೆಯ ಬ್ಯಾಟಿಂಗ್ ಪ್ರದರ್ಶಿಸಿದ್ದ ಯುವರಾಜ್ ಸಮ್ರಾ ಆ ಬಳಿಕ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದರು. ಪರಿಣಾಮ ಯುವ ದಾಂಡಿಗನ ಬ್ಯಾಟ್‌ನಿಂದ ಕೇವಲ 58 ಎಸೆತಗಳಲ್ಲಿ ಶತಕ ಮೂಡಿಬಂತು. ಈ ಸೆಂಚುರಿಯೊಂದಿಗೆ ಟಿ20 ವಿಶ್ವಕಪ್ ಇತಿಹಾಸದಲ್ಲಿ ಶತಕ ಬಾರಿಸಿದ ಅತ್ಯಂತ ಕಿರಿಯ ಬ್ಯಾಟರ್ ಎನಿಸಿಕೊಂಡರು.

ಇದಕ್ಕೂ ಮುನ್ನ ಈ ಭರ್ಜರಿ ದಾಖಲೆ ಪಾಕಿಸ್ತಾನದ ಅಹ್ಮದ್ ಶೆಹಝಾದ್ ಹೆಸರಿನಲ್ಲಿತ್ತು. 2014 ರ ಟಿ20 ವಿಶ್ವಕಪ್‌ನಲ್ಲಿ ಬಾಂಗ್ಲಾದೇಶ್ ವಿರುದ್ಧ 22 ವರ್ಷದ ಅಹ್ಮದ್ ಶೆಹಝಾದ್ ಶತಕ ಸಿಡಿಸಿ ಈ ವಿಶ್ವ ದಾಖಲೆಯನ್ನು ನಿರ್ಮಿಸಿದ್ದರು. ಇದೀಗ ಯುವರಾಜ್ ಸಮ್ರಾ ಈ ದಾಖಲೆ ಮುರಿದಿದ್ದಾರೆ. ನ್ಯೂಝಿಲೆಂಡ್ ವಿರುದ್ಧದ ಪಂದ್ಯದಲ್ಲಿ ಶತಕ ಸಿಡಿಸುವ ಮೂಲಕ 19 ವರ್ಷದ ಯುವರಾಜ್ ಸಮ್ರಾ, ಟಿ20 ವಿಶ್ವಕಪ್ ಇತಿಹಾಸದಲ್ಲೇ ಸೆಂಚುರಿ ಬಾರಿಸಿದ ಅತ್ಯಂತ ಕಿರಿಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇನ್ನು ಯುವರಾಜ್ ಸಮ್ರಾ ಅವರ ಈ ಶತಕದ ನೆರವಿನೊಂದಿಗೆ ಕೆನಡಾ ತಂಡವು 20 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 173 ರನ್ ಕಲೆಹಾಕಿದೆ.

# ದೃಷ್ಟಿ ಕಳೆದುಕೊಂಡ ಇಮ್ರಾನ್ ಖಾನ್

**ಸೂಕ್ತ ಚಿಕಿತ್ಸೆ ನೀಡುವಂತೆ ಕಪಿಲ್, ಸುನಿಲ್ ಮನವಿ**



ಭ್ರಷ್ಟಾಚಾರ ಆರೋಪದಲ್ಲಿ ಅಡಿಯಾಲ ಜೈಲಿನಲ್ಲಿರುವ ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ಸೂಕ್ತ ಚಿಕಿತ್ಸೆ ನೀಡುವಂತೆ ಒತ್ತಾಯಿಸಿ ಪಾಕ್ ಸರ್ಕಾರಕ್ಕೆ ವಿಶ್ವ ಕ್ರಿಕೆಟ್‌ನ 14 ಮಾಜಿ ನಾಯಕರು ಪತ್ರ ಬರೆದಿದ್ದಾರೆ. ಇಮ್ರಾನ್ ಖಾನ್ ದೃಷ್ಟಿ ಕಳೆದುಕೊಂಡಿದ್ದು, ಸಮರ್ಪಕ ಚಿಕಿತ್ಸೆ ಒದಗಿಸುವಂತೆ ಕೋರಿ ಕಪಿಲ್ ದೇವ್, ಸುನಿಲ್ ಗವಾಸ್ಕರ್ ಸೇರಿ ಕ್ರಿಕೆಟ್ ತಂಡಗಳ ಹಲವು ಮಾಜಿ ನಾಯಕರು ಪತ್ರ ಬರೆದಿದ್ದಾರೆ.

ಅಕ್ಟೋಬರ್ 2025ರವರೆಗೆ ಇಮ್ರಾನ್ ಖಾನ್ ಅವರ ಎರಡೂ ಕಣ್ಣುಗಳ ದೃಷ್ಟಿ ಸಾಮಾನ್ಯವಾಗಿತ್ತು ಎಂದು ವೈದ್ಯಕೀಯ ವರದಿಗಳು ಹೇಳುತ್ತವೆ. ಅದರ ನಂತರ ಅವರ ದೃಷ್ಟಿ ಮಸುಕಾಗುತ್ತಿದೆ. ಇಮ್ರಾನ್ ಖಾನ್ ಜೈಲು ಆಡಳಿತಕ್ಕೆ ಹಲವಾರು ಬಾರು ದೂರು ನೀಡಿದ್ದರು. ಆದರೆ ಇದ್ದಕ್ಕಿದ್ದಂತೆ ಬಲಗಣ್ಣ ದೃಷ್ಟಿ ಹೋಗುತ್ತಾ ಬಂದಿದೆ ಎಂದು ತಿಳಿಸಿದ್ದಾರೆ.

ಪಾಕಿಸ್ತಾನದ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನೇತ್ರಜ್ಞರು ಕಣ್ಣಿನಲ್ಲಿ ರಕ್ತ ಹೆಪ್ಪುಗಟ್ಟುವಿಕೆ ಆಗಿರುವುದನ್ನು ದೃಢಪಡಿಸಿದ್ದಾರೆ.ಇದರಿಂದಾಗಿ ಗಂಭೀರ ಹಾನಿಯಾಗಿದೆ. ಜನವರಿ 24ರಂದಿ ಪಿಮ್ಸ್ ಆಸ್ಪತ್ರೆಯಲ್ಲಿ ನಡೆಸಲಾದ ವೈದ್ಯಕೀಯ ವಿಧಾನಗಳ ಮರುಪರೀಕ್ಷೆ ಕೋರಿಕೆಯನ್ನು ನ್ಯಾಯಾಲಯ ತಿರಸ್ಕರಿಸಿತ್ತು. ಕ್ರಿಕೆಟ್ ತಂಡಗಳ ಮಾಜಿ ನಾಯಕರು ಪಾಕಿಸ್ತಾನ ಸರ್ಕಾರಕ್ಕೆ ಪತ್ರ ಬರೆದಿದ್ದು, 73 ವರ್ಷದ ಇಮ್ರಾನ್ ಖಾನ್ ಅವರ ಆರೋಗ್ಯದ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಜೈಲಿನಲ್ಲಿ ಅವರಿಗೆ ಉತ್ತಮ ಚಿಕಿತ್ಸೆ ನೀಡಬೇಕೆಂದು ಒತ್ತಾಯಿಸಿದ್ದಾರೆ. ಭಾರತದ ಮಾಜಿ ನಾಯಕರಾದ ಸುನಿಲ್ ಗವಾಸ್ಕರ್ ಮತ್ತು ಕಪಿಲ್ ದೇವ್, ಆಸ್ಟ್ರೇಲಿಯಾ ತಂಡದ ಮಾಜಿ ನಾಯಕ ಅಲನ್ ಬಾರ್ಡರ್, ಸ್ಟೀವ್ ವಾ, ಇಯಾನ್ ಚಾಪೆಲ್, ಬೆಲಿಂಡಾ ಕ್ಲಾರ್ಕ್ ಮತ್ತು ಕಿಮ್ ಹ್ಯೂಸ್ ಸೇರಿದಂತೆ ಹಲವರು ಮನವಿ ಮಾಡಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**